Volume : 9 | Issue : 154 | September : 03 : 2026 : Thursday
ಸಂಪುಟ : 9 | ಸಂಚಿಕೆ : 154 | ಸೆಪ್ಟಂಬರ್ : 03 : 2026 : ಗುರುವಾರ
www.VIKRAMAVAHINI.com
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ



# ವಿಕ್ರಮ ವಾಹಿನಿ

ಪುಟ 4 ₹2 || ಕನ್ನಡ ದಿನಪತ್ರಿಕೆ ||
VIKRAMA VAHINI
PRGI NO: KARKAN/2018/78481



‘ಮೈಸಾ’ದಲ್ಲಿ ರಗಡ್ ಲುಕ್‌ನಲ್ಲಿ ರಶ್ಮಿಕಾ ಮಂದಣ್ಣ; ಕೈಯಲ್ಲಿ ಬೃಹತ್ ಈಟಿ, ಮೈಯೆಲ್ಲಾ ರಕ್ತ-ಧೂಳಿನಿಂದ ಆಕ್ಷನ್ ಅವತಾರದಲ್ಲಿ ಮಿಂಚಿದ ನ್ಯಾಷನಲ್ ಕ್ರಶ್.

300 ಕೋಟಿ ಗಡಿ ದಾಟಿದ ‘ಟಾಕ್ಸಿಕ್’; ಗಳಿಕೆಯಲ್ಲಿ ಇಳಿಕೆ । ಪುಟ 2

‘ವಿಧಾನಸಭೆ ವಿಸರ್ಜಿಸಿ ಚುನಾವಣೆ ಎದುರಿಸಿ’ । ಪುಟ 3

■ ಸುದ್ದಿ ಚುಟುಕು

## ಮಂಗಳೂರಿನಲ್ಲಿ 2 ಬೋಟ್ ಮುಳುಗಡೆ; 12 ಮಂದಿ ರಕ್ಷಣೆ

● ವಿಕ್ರಮ ವಾಹಿನಿ । ಮಂಗಳೂರು

ಸಮುದ್ರದ ಬೃಹತ್ ಅಲೆಗಳು ಅಪ್ಪಳಿಸಿದ ಪರಿಣಾಮ ಅಳಿವೆಬಾಗಿಲಿನಲ್ಲಿ ಎರಡು ಮೀನುಗಾರಿಕಾ ಬೋಟ್‌ಗಳು ಮುಳುಗಡೆಯಾದ ಘಟನೆ ಮಂಗಳವಾರ ಸಂಜೆ ನಡೆದಿದೆ. ಎರಡೂ ಬೋಟ್‌ಗಳಲ್ಲಿದ್ದ 12 ಮೀನುಗಾರರನ್ನು ಸಮೀಪದಲ್ಲಿದ್ದ ಇತರ ಮೀನುಗಾರರು ಸಮಯಪ್ರಜ್ಞೆಯಿಂದ ಸುರಕ್ಷಿತವಾಗಿ ರಕ್ಷಿಸಿದ್ದಾರೆ.

ಉಳ್ಳಾಲ ಆಲೇಕಲದ ಶರೀಫ್ ಅವರಿಗೆ ಸೇರಿದ ‘ಮರ್ಮೇಡ್-II’ ಟ್ರಾಲರ್ ಬೋಟ್‌ನಲ್ಲಿದ್ದ ಏಳು ಮಂದಿ ಹಾಗೂ ಬೆಂಗ್ರೆ ಕಸಬಾದ ಅಬೂಬಕ್ಕರ್ ಅಜ್ಮಲ್ ಅವರಿಗೆ ಸೇರಿದ ‘ಅನಿಕ್’ ಮರದ ಬೋಟ್‌ನಲ್ಲಿದ್ದ ಐವರು ಅಪಾಯಕ್ಕೆ ಸಿಲುಕಿದ್ದರು. ಬೃಹತ್ ಅಲೆಗಳ ಹೊಡೆತಕ್ಕೆ ಬೋಟ್‌ಗಳ ತಳಭಾಗದ ಹಲಗೆಗಳು ತುಂಡಾಗಿ ನೀರು ನುಗ್ಗಿದ್ದರಿಂದ ಅವು ಮುಳುಗಲಾರಂಭಿಸಿದ್ದವು.

ತಕ್ಷಣ ಕಾರ್ಯಾಚರಣೆ ನಡೆಸಿದ ಮೀನುಗಾರರು 12 ಮಂದಿಯನ್ನು ರಕ್ಷಿಸಿದ್ದಾರೆ. ಬಳಿಕ ಹಗ್ಗದ ಸಹಾಯದಿಂದ ಎರಡೂ ಬೋಟ್‌ಗಳನ್ನು ದಡಕ್ಕೆ ಎಳೆಯುವ ಪ್ರಯತ್ನ ನಡೆಸಲಾಯಿತು. ಒಂದು ಬೋಟ್‌ನ್ನು ದಡಕ್ಕೆ ತರಲಾಗಿದ್ದು, ಮತ್ತೊಂದನ್ನು ಎಳೆಯುವ ವೇಳೆ ಹಗ್ಗ ತುಂಡಾದ ಪರಿಣಾಮ ಅದು ಸಂಪೂರ್ಣವಾಗಿ ಸಮುದ್ರದಲ್ಲಿ ಮುಳುಗಿದೆ. ಘಟನೆಯಲ್ಲಿ ಯಾವುದೇ ಪ್ರಾಣಹಾನಿಯಾಗಿಲ್ಲ ಎಂದು ಮೀನುಗಾರಿಕಾ ಇಲಾಖೆ ತಿಳಿಸಿದೆ.

## ಓವರ್‌ಟೇಕ್ ಗಲಾಟೆ: ದುನಿಯಾ ವಿಜಯ್ ಪುತ್ರ ವಿರುದ್ಧ ಎಫ್‌ಐಆರ್

● ವಿಕ್ರಮ ವಾಹಿನಿ । ಬೆಂಗಳೂರು

ಕಾರು ಓವರ್‌ಟೇಕ್ ಮಾಡಿದ ವಿಚಾರಕ್ಕೆ ಸಹಪಾಠಿಯೊಬ್ಬರನ್ನು ಬಲವಂತವಾಗಿ ಕಾರಿನಲ್ಲಿ ಕರೆದೊಯ್ದು ಹಲ್ಲೆ ನಡೆಸಿದ ಆರೋಪದಡಿ ನಟ ದುನಿಯಾ ವಿಜಯ್ ಅವರ ಪುತ್ರ ಸಾಮ್ರಾಟ್ ವಿಜಯ್ ಹಾಗೂ ನಾಲ್ವರು ಸ್ನೇಹಿತರ ವಿರುದ್ಧ ಕೆಂಗೇರಿ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಆರ್.ವಿ. ವಿಶ್ವವಿದ್ಯಾಲಯದಲ್ಲಿ ವ್ಯಾಸಂಗ ಮಾಡುತ್ತಿರುವ ಮನೀಶ್ ಗೌಡ ಎಂಬ ವಿದ್ಯಾರ್ಥಿ ನೀಡಿದ ದೂರಿನ ಆಧಾರದ ಮೇಲೆ ಪ್ರಕರಣ ದಾಖಲಿಸಲಾಗಿದೆ. ಸಾಮ್ರಾಟ್ ಅವರನ್ನು ಪ್ರಕರಣದಲ್ಲಿ ಮೊದಲ ಆರೋಪಿಯಾಗಿ (ಎ1) ಹೆಸರಿಸಲಾಗಿದೆ.

ದೂರಿನ ಪ್ರಕಾರ, ಸೋಮವಾರ ಸಂಜೆ ಸಾಮ್ರಾಟ್ ಹಾಗೂ ಅವರ ಸ್ನೇಹಿತರು ಜಿಪ್ಸಿ ಕಾರಿನಲ್ಲಿ ತೆರಳುತ್ತಿದ್ದ ವೇಳೆ, ಮನೀಶ್ ಮತ್ತು ಆತನ ಸ್ನೇಹಿತರು ಐ20 ಕಾರಿನಲ್ಲಿ ಬಂದು ಓವರ್‌ಟೇಕ್ ಮಾಡಿದ್ದರು. ಇದರಿಂದ ಎರಡೂ ತಂಡಗಳ ನಡುವೆ ಮಾತಿನ ಚಕಮಕಿ ನಡೆದಿತ್ತು ಎನ್ನಲಾಗಿದೆ.

ಬಳಿಕ ಮೈಸೂರು ರಸ್ತೆಯ ಆರ್.ವಿ. ವಿಶ್ವವಿದ್ಯಾಲಯದ ಆವರಣದ ಹೊರಗೆ ಮನೀಶ್ ನಿಂತಿದ್ದಾಗ, ಸಾಮ್ರಾಟ್ ಹಾಗೂ ಆತನ ಸ್ನೇಹಿತರು ಕಾರಿನಲ್ಲಿ ಬಂದು ಅವರನ್ನು ಬಲವಂತವಾಗಿ ಕರೆದೊಯ್ದಿದ್ದಾರೆ. ಚಲಿಸುತ್ತಿದ್ದ ಕಾರಿನಲ್ಲೇ ಸಾಮ್ರಾಟ್ ಹಾಗೂ ಸ್ನೇಹಿತರು ಹಲ್ಲೆ ನಡೆಸಿದ್ದಾರೆ ಎಂದು ಮನೀಶ್ ದೂರಿನಲ್ಲಿ ಆರೋಪಿಸಿದ್ದಾರೆ.

## ಕಚ್ಚಾ ತೈಲ ಬೆಲೆ ಏರಿಕೆ, ಚಿನ್ನದ ದರ ಇಳಿಕೆ

● ವಿಕ್ರಮ ವಾಹಿನಿ । ನವದೆಹಲಿ

ಇರಾನ್ ಮತ್ತು ಅಮೆರಿಕ ನಡುವಿನ ಸಂಘರ್ಷ ಮತ್ತಷ್ಟು ಉಲ್ಬಣಗೊಂಡಿರುವ ಬೆನ್ನಲ್ಲೇ ಜಾಗತಿಕ ಮಾರುಕಟ್ಟೆಯಲ್ಲಿ ಕಚ್ಚಾ ತೈಲ ಬೆಲೆ ಏರಿಕೆಯಾಗಿದ್ದು, ಚಿನ್ನದ ದರದಲ್ಲಿ ಕುಸಿತ ಕಂಡಿದೆ. ಹೆಚ್ಚುತ್ತಿರುವ ಹಣದುಬ್ಬರ ಮತ್ತು ಬಡ್ಡಿದರದ ಆತಂಕ ಹೂಡಿಕೆದಾರರ ಮೇಲೆ ಪರಿಣಾಮ ಬೀರಿದ್ದು, ಚಿನ್ನದ ಫ್ಯೂಚರ್ಸ್ ದರ ಸತತ ಏಳನೇ ದಿನವೂ ಇಳಿಕೆಯಾಗಿದೆ.

ಮಲ್ಟಿ ಕಮಾಡಿಟಿ ಎಕ್ಸ್‌ಚೇಂಜ್‌ನಲ್ಲಿ (ಎಂಸಿಎಕ್ಸ್) ಅಕ್ಟೋಬರ್ ವಿತರಣೆಯ ಚಿನ್ನದ ದರ ರೂ 1,559 ಅಥವಾ ಶೇ.1.03ರಷ್ಟು ಇಳಿದು 10 ಗ್ರಾಂಗೆ ರೂ 1,50,170ಕ್ಕೆ ತಲುಪಿದೆ. ಮಂಗಳವಾರದ ವಹಿವಾಟಿನ ಅಂತ್ಯಕ್ಕೆ ಇದು ರೂ 1,51,729ರಷ್ಟಿತ್ತು. ಡಿಸೆಂಬರ್ ವಿತರಣೆಯ ಚಿನ್ನದ ದರವೂ ರೂ 1,753 ಅಥವಾ ಶೇ.1.14ರಷ್ಟು ಕುಸಿದು 10 ಗ್ರಾಂಗೆ ರೂ 1,51,540ಕ್ಕೆ ತಲುಪಿದೆ. **2ನೇ ಪುಟ**


# ಕೆಪಿಎಸ್‌ಸಿ ಎಇಇ ಗ್ರೇಡ್-1 ಅಕ್ರಮ ಬಟಾ ಬಯಲು!

● ವಿಕ್ರಮ ವಾಹಿನಿ । ಬೆಂಗಳೂರು

ಸಹಾಯಕ ಎಂಜಿನಿಯರ್ (ಎಇಇ) ಗ್ರೇಡ್-1 ಹುದ್ದೆಗಳ ನೇಮಕಾತಿಯಲ್ಲಿ ಅಕ್ರಮ ನಡೆದಿದೆ ಎಂಬ ಆರೋಪಕ್ಕೆ ಸಂಬಂಧಿಸಿದಂತೆ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಹತ್ತು ಪ್ರಶ್ನೆಗಳನ್ನು ಕೇಳಿದ್ದು, ಮೊದಲು ಅವುಗಳಿಗೆ ಉತ್ತರಿಸುವಂತೆ ಆಗ್ರಹಿಸಿದ್ದಾರೆ.

ಜೆಡಿಎಸ್ ಕೇಂದ್ರ ಕಚೇರಿ ಜೆಪಿ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕುಮಾರಸ್ವಾಮಿ, “ಗೊತ್ತಿಲ್ಲ, ಗೊತ್ತಿಲ್ಲ” ಎಂದು ಹೇಳುವ ಮೂಲಕ ಸಚಿವರು ಜವಾಬ್ದಾರಿಯಿಂದ ನುಣುಚಿಕೊಳ್ಳುತ್ತಿದ್ದಾರೆ ಎಂದು ಟೀಕಿಸಿದರು. ಪ್ರಕರಣ ನ್ಯಾಯಾಲಯದಲ್ಲಿದೆ ಎಂಬ ನೆಪದಲ್ಲಿ ಸರ್ಕಾರ ಒಂದೂವರೆ ವರ್ಷದಿಂದ ವಿಚಾರವನ್ನು ಮುಂದೂಡುತ್ತಿದೆ ಎಂದು ಆರೋಪಿಸಿದರು.

ಅಕ್ರಮದ ಆರೋಪಗಳ ನಡುವೆಯೂ ಅಭ್ಯರ್ಥಿಗಳಿಗೆ ಷರತ್ತಿನ ಮೇಲೆ ನೇಮಕಾತಿ ಆದೇಶ ನೀಡಿದ್ದು ಸಚಿವರ ಗಮನಕ್ಕೆ ಬಂದಿರಲಿಲ್ಲವೇ? ಕೆಪಿಎಸ್‌ಸಿ ಅಂತಿಮ ಆಯ್ಕೆ ಪಟ್ಟಿಯಲ್ಲಿ ಲೋಪಗಳಿರುವ ಕುರಿತು ಇಲಾಖೆಗೆ ಮಾಹಿತಿ ಬಂದಿದ್ದರೂ ಕ್ರಮ ಕೈಗೊಂಡಿಲ್ಲವೇಕೆ? ಹೈಕೋರ್ಟ್‌ನಲ್ಲಿ ಪ್ರಕರಣ ನಡೆಯುತ್ತಿರುವುದು ಗೊತ್ತಿದ್ದರೂ ನೇಮಕಾತಿ ಆದೇಶ ನೀಡಿದ್ದೇಕೆ? ಎಂದು ಪ್ರಶ್ನಿಸಿದರು.



ಅಕ್ರಮಕ್ಕೆ ಸಂಬಂಧಿಸಿದ ದಾಖಲೆಗಳಿದ್ದರೂ ತರಾತುರಿಯಲ್ಲಿ ನೇಮಕಾತಿ ಆದೇಶ ನೀಡಿರುವುದೇಕೆ, ಪ್ರಕರಣದಲ್ಲಿ ಸರ್ಕಾರ ತನ್ನ ಆಕ್ಷೇಪಣೆ ಸಲ್ಲಿಸಲು ವಿಳಂಬ ಮಾಡುತ್ತಿರುವುದೇಕೆ ಹಾಗೂ ನ್ಯಾಯಾಲಯದಲ್ಲಿ ಪದೇಪದೇ ದಿನಾಂಕ ಮುಂದೂಡುತ್ತಿರುವುದೇಕೆ ಎಂಬುದಕ್ಕೂ ಉತ್ತರ ನೀಡಬೇಕು ಎಂದು ಆಗ್ರಹಿಸಿದರು.

### ಪ್ರಿಯಾಂಕ್ ಖರ್ಗೆಗೆ ಹೆಚ್‌ಡಿಕೆ 10 ಪ್ರಶ್ನೆಗಳು

- ನಿಮ್ಮ ಗಮನಕ್ಕೆ ಬಾರದೇ ಅಕ್ರಮ ಮಾರ್ಗದಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ನೇಮಕಾತಿ ಪತ್ರ ಕೊಟ್ಟರಾ?
- ರಾಜ್ಯ ಹೈಕೋರ್ಟ್’ನಲ್ಲಿ ಪ್ರಕರಣ ನಡೆಯುತ್ತಿರುವುದು ನಿಮಗೆ ಗೊತ್ತಿಲ್ಲವೇ?
- ಇಷ್ಟೆಲ್ಲಾ ದಾಖಲೆಗಳು ಇದ್ದರೂ ನಾನು ನಿಮ್ಮ ರಾಜೀನಾಮೆ ಕೇಳಬಾರದೇ?
- ಎಇಇಗಳ ಅಕ್ರಮಗಳ ಬಗ್ಗೆ ನಿಮಗೆ ಗೊತ್ತಿಲ್ಲ ಅಂದರೆ ತನಿಖೆ ಮಾಡಿಸಬೇಕಿತ್ತು, ಅಲ್ಲವೇ?
- ಅಕ್ರಮ ಎಸಗಿದ ಅಭ್ಯರ್ಥಿಗಳಿಗೆ ಷರತ್ತಿನ ಮೇಲೆ ನೇಮಕಾತಿ ಆದೇಶ ಕೊಟ್ಟಿದ್ದು ನಿಮ್ಮ ಗಮನಕ್ಕೆ ಬಂದಿರಲಿಲ್ಲವೇ?
- ನೇಮಕಾತಿ ಮತ್ತು ಆಯ್ಕೆ ಪ್ರಕ್ರಿಯೆಯಲ್ಲಿ ಅಕ್ರಮಗಳು ನಡೆದಿವೆ ಎಂಬ ಕಾರಣಕ್ಕೆ ಷರತ್ತಿನ ನೇಮಕಾತಿ ಆದೇಶ ಪತ್ರ ಕೊಟ್ಟಿದ್ದು, ಅಲ್ಲವೇ?
- ಅಕ್ರಮ ನಡೆದಿರುವ ಬಗ್ಗೆ ಅನೇಕ ದಾಖಲೆಗಳು ಇದ್ದರೂ ತರಾತುರಿಯಲ್ಲಿ ಯಾಕೆ ನೇಮಕಾತಿ ಆದೇಶ ನೀಡಿದಿರಿ?
- ನಿಮ್ಮ ಇಲಾಖೆಯಿಂದ ಅಪರಾಧಿ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ಪತ್ರ ಕೊಟ್ಟ ವಿಷಯ ಸಚಿವರಾಗಿ ನಿಮಗೆ ಗೊತ್ತಿರಲಿಲ್ಲವೇ?
- ಮಹಿಳಾ ಅಧಿಕಾರಿ ಕಾರ್ಯದರ್ಶಿ ಹುದ್ದೆಯಿಂದ ವರ್ಗಾವಣೆಯಾದ ನಂತರ ಆ ಸ್ಥಾನಕ್ಕೆ ಬಂದ ಅಧಿಕಾರಿ ಅಕ್ರಮ ನಡೆದಿರುವ ಬಗ್ಗೆ ಮುಖ್ಯ ಕಾರ್ಯದರ್ಶಿ ಹಾಗೂ ಸಿಬ್ಬಂದಿ ಆಡಳಿತ ಸುಧಾರಣೆ ಇಲಾಖೆಗೆ ಪತ್ರ ಬರೆದ ದಿನವೇ ನೇಮಕಾತಿ ಆದೇಶ ಪತ್ರಗಳನ್ನು ಕೊಟ್ಟಿದ್ದು ಯಾಕೆ?
- ರೆಸಾರ್ಟ್ ನಲ್ಲಿ ಓಎಂಆರ್ ಶೀಟುಗಳನ್ನು ತಿದ್ದಿಸಿದ ಅಧಿಕಾರಿ ಜತೆಗೆ ನಿಮ್ಮ ಸಂಬಂಧ ಇಲ್ಲವೇ?

**‘ರೆಸಾರ್ಟ್‌ನಲ್ಲಿ ಪರೀಕ್ಷೆ’ ಆರೋಪ**

ನೇಮಕಾತಿ ಅಕ್ರಮದ ಕುರಿತು ಹಲವು ಗಂಭೀರ ಆರೋಪಗಳಿವೆ. ಪ್ರಶ್ನೆಪತ್ರಿಕೆ ನೀಡಿ ಅಭ್ಯರ್ಥಿಗಳನ್ನು ಬಸ್‌ಗಳಲ್ಲಿ ಕರೆದೊಯ್ದು ರೆಸಾರ್ಟ್‌ನಲ್ಲಿ ಪರೀಕ್ಷೆ ಬರೆಸಲಾಗಿದೆ ಹಾಗೂ ಓಎಂಆರ್ ಶೀಟ್‌ಗಳನ್ನು ತಿದ್ದಿಸಲಾಗಿದೆ ಎಂಬ ಆರೋಪಗಳಿವೆ ಎಂದು ಕುಮಾರಸ್ವಾಮಿ ಹೇಳಿದರು. ಈ ಆರೋಪಗಳಿಗೆ ಸಂಬಂಧಿಸಿದ ಅಧಿಕಾರಿಗಳೊಂದಿಗೆ ಸಚಿವರಿಗೆ ಯಾವುದೇ ಸಂಬಂಧವಿಲ್ಲವೇ ಎಂದು ಪ್ರಶ್ನಿಸಿದರು.

“ಜಗತ್ತಿನಲ್ಲಿ ನಡೆಯುವ ಬೆಳವಣಿಗೆಗಳೆಲ್ಲ ಸಚಿವರಿಗೆ ಗೊತ್ತಿರುತ್ತವೆ. ಆದರೆ ತಮ್ಮದೇ ಇಲಾಖೆಯಲ್ಲಿ ನಡೆದಿರುವ ವಿಷಯಗಳು ಮಾತ್ರ ಗೊತ್ತಿಲ್ಲ ಎಂದರೆ ಹೇಗೆ ನಂಬಬೇಕು?” ಎಂದು ವ್ಯಂಗ್ಯವಾಡಿದರು.

ಕೆಪಿಎಸ್‌ಸಿ ಮಾಜಿ ಅಧ್ಯಕ್ಷ ಡಾ. ಎಚ್.ಎನ್. ಕೃಷ್ಣ ಅವರ ನೇಮಕಾತಿ ವಿಚಾರವನ್ನೂ ಪ್ರಸ್ತಾಪಿಸಿದ ಕುಮಾರಸ್ವಾಮಿ, ಎಸ್.ಎಂ. ಕೃಷ್ಣ ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ನಡೆದ ಸಂಪುಟ ಸಭೆಯಲ್ಲಿ ಮಲ್ಲಿಕಾರ್ಜುನ ಖರ್ಗೆ ಅವರೂ ಇದ್ದರು.

**‘ಗೋವಿಂದರೆಡ್ಡಿ ಆಯ್ಕೆ ಹೇಗೆ?’**

ಪ್ರಿಯಾಂಕ್ ಖರ್ಗೆ ಕುಟುಂಬಕ್ಕೆ ಆಪ್ತರೆಂದು ಹೇಳಲಾಗುತ್ತಿರುವ ಗೋವಿಂದರೆಡ್ಡಿ ಅವರ ಆಯ್ಕೆ ಯಾವ ಅವಧಿಯಲ್ಲಿ ಹಾಗೂ ಹೇಗೆ ನಡೆಯಿತು ಎಂಬುದನ್ನೂ ಸ್ಪಷ್ಟಪಡಿಸಬೇಕು ಎಂದು ಕುಮಾರಸ್ವಾಮಿ ಒತ್ತಾಯಿಸಿದರು. ಆಹಾರ ಇಲಾಖೆಯ ನೇಮಕಾತಿ ಹಾಗೂ ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಮ್ಮ ಮಕ್ಕಳನ್ನು ರೆಸಾರ್ಟ್‌ಗೆ ಕರೆದೊಯ್ದು ಪರೀಕ್ಷೆ ಬರೆಸಿದ ಆರೋಪಗಳ ಬಗ್ಗೆಯೂ ಸಚಿವರಿಗೆ ಮಾಹಿತಿ ಇಲ್ಲವೇ ಎಂದು ಪ್ರಶ್ನಿಸಿದರು.

ಎಇಇ ಗ್ರೇಡ್-1 ನೇಮಕಾತಿ ವಿಚಾರದಲ್ಲಿ ಕೆಎಟಿಯಲ್ಲಿ ಅರ್ಜಿಗಳು ಸಲ್ಲಿಕೆಯಾಗಿದ್ದು, ಬಳಿಕ 2025ರ ಫೆಬ್ರವರಿ 11ರಂದು ಹೈಕೋರ್ಟ್ ಮೊರೆ ಹೋಗಲಾಗಿತ್ತು. ಕೆಪಿಎಸ್‌ಸಿ ಉಪಸಮಿತಿಯ ತನಿಖೆಯ ಅಂತಿಮ ಆದೇಶಕ್ಕೆ ಒಳಪಟ್ಟು ನೇಮಕಾತಿ ನಡೆಯಲಿದೆ ಎಂಬ ಷರತ್ತಿನೊಂದಿಗೆ ಪ್ರಕರಣ ಮುಂದುವರಿದಿದೆ. ಆದರೂ ಒಂದೂವರೆ ವರ್ಷದಿಂದ ಸರ್ಕಾರ ತನ್ನ ಆಕ್ಷೇಪಣೆ ಸಲ್ಲಿಸದೆ ಪ್ರಕರಣವನ್ನು ವಿಳಂಬಗೊಳಿಸುತ್ತಿದೆ ಎಂದು ಕುಮಾರಸ್ವಾಮಿ ಆರೋಪಿಸಿದರು.

“ನನ್ನ ವಿರುದ್ಧ ಯಾವುದೇ ತನಿಖೆ ಬೇಕಾದರೂ ನಡೆಸಲಿ. ಎಷ್ಟು ವರ್ಷ ಬೇಕಾದರೂ ತನಿಖೆ ಮಾಡಲಿ. ನಾನು ಯಾವುದಕ್ಕೂ ಹೆದರುವುದಿಲ್ಲ” ಎಂದು ಅವರು ಹೇಳಿದರು. ತಮ್ಮ ವಿರುದ್ಧದ ಪ್ರಕರಣಗಳನ್ನು ಮುಂದಿಟ್ಟುಕೊಂಡು ತಮ್ಮ ಧ್ವನಿ ಅಡಗಿಸಲು ಸರ್ಕಾರ ಪ್ರಯತ್ನಿಸುತ್ತಿದೆ ಎಂದು ಆರೋಪಿಸಿದರು.

**ಎನ್‌ಡಿಎ ಅಭ್ಯರ್ಥಿಯಾಗಿ ಎ.ಪಿ. ರಂಗನಾಥ**

ಇದೇ ವೇಳೆ ಬೆಂಗಳೂರು ಶಿಕ್ಷಕರ ಕ್ಷೇತ್ರದ ಎನ್‌ಡಿಎ ಮೈತ್ರಿ ಅಭ್ಯರ್ಥಿಯಾಗಿ ಜೆಡಿಎಸ್ ರಾಜ್ಯ ಕಾನೂನು ಘಟಕದ ಅಧ್ಯಕ್ಷ ಎ.ಪಿ. ರಂಗನಾಥ ಅವರನ್ನು ಒಮ್ಮತದಿಂದ ಆಯ್ಕೆ ಮಾಡಲಾಗಿದೆ ಎಂದು ಕುಮಾರಸ್ವಾಮಿ ಘೋಷಿಸಿದರು. ಜೆಡಿಎಸ್ ರಾಷ್ಟ್ರೀಯ ಅಧ್ಯಕ್ಷ ಎಚ್.ಡಿ. ದೇವೇಗೌಡ ಹಾಗೂ ಬಿಜೆಪಿ ಮುಖಂಡರೊಂದಿಗೆ ಚರ್ಚಿಸಿದ ಬಳಿಕ ಅಭ್ಯರ್ಥಿಯನ್ನು ಅಂತಿಮಗೊಳಿಸಲಾಗಿದೆ ಎಂದು ತಿಳಿಸಿದರು.

# ರಾಮ ಮಂದಿರ ಟ್ರಸ್ಟ್‌ಗೆ ಜಿತೇಂದ್ರ ಮಿಶ್ರಾ ಸಿಇಒ

● ವಿಕ್ರಮ ವಾಹಿನಿ । ಲಖನೌ

ಅಯೋಧ್ಯೆಯ ಶ್ರೀರಾಮ ಜನ್ಮಭೂಮಿ ತೀರ್ಥಕ್ಷೇತ್ರ ಟ್ರಸ್ಟ್‌ಗೆ ಮೊದಲ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ (ಸಿಇಒ) ಆಗಿ ಭಾರತೀಯ ವಾಯುಪಡೆಯ ನಿವೃತ್ತ ಏರ್ ಮಾರ್ಷಲ್ ಜಿತೇಂದ್ರ ಮಿಶ್ರಾ ಅವರನ್ನು ನೇಮಕ ಮಾಡಲಾಗಿದೆ. ‘ಆಪರೇಷನ್ ಸಿಂಧೂರ್’ ಸಂದರ್ಭದಲ್ಲಿ ಪಶ್ಚಿಮ ವಾಯು ಕಮಾಂಡ್‌ನ ಮುಖ್ಯಸ್ಥರಾಗಿದ್ದ ಮಿಶ್ರಾ ಅವರ ನೇಮಕಾತಿ ಗಮನ ಸೆಳೆದಿದೆ.

ರಾಮ ಮಂದಿರದಲ್ಲಿ ದೇಣಿಗೆ ಕಳ್ಳತನ ಪ್ರಕರಣ ಬೆಳಕಿಗೆ ಬಂದ ಹಿನ್ನೆಲೆಯಲ್ಲಿ ಟ್ರಸ್ಟ್ ಆಡಳಿತ ವ್ಯವಸ್ಥೆಯನ್ನು ಬಲಪಡಿಸಲು ಸಿಇಒ ಹುದ್ದೆ ಸೃಷ್ಟಿಸಿ ಅರ್ಜಿ ಆಹ್ವಾನಿಸಲಾಗಿತ್ತು. ಈ ಹುದ್ದೆಗೆ ಸುಮಾರು 5,200 ಅರ್ಜಿಗಳು ಸಲ್ಲಿಕೆಯಾಗಿದ್ದು, 20 ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಆಯ್ಕೆ ಮಾಡಲಾಗಿತ್ತು. ಸಂದರ್ಶನದ ಬಳಿಕ ಜಿತೇಂದ್ರ ಮಿಶ್ರಾ ಅವರನ್ನು ಮೊದಲ ಸಿಇಒ ಆಗಿ ಆಯ್ಕೆ ಮಾಡಲಾಗಿದೆ.

ಹಲವು ಪ್ರಮುಖ ಹುದ್ದೆಗಳಲ್ಲಿ ಸೇವೆ

ವಾಯುಪಡೆಯಲ್ಲಿ 38 ವರ್ಷಕ್ಕೂ ಹೆಚ್ಚು ಕಾಲ ಸೇವೆ ಸಲ್ಲಿಸಿರುವ ಮಿಶ್ರಾ, ಹಲವು ಪ್ರಮುಖ ಕಮಾಂಡ್ ಹಾಗೂ ಆಡಳಿತಾತ್ಮಕ ಜವಾಬ್ದಾರಿಗಳನ್ನು ನಿರ್ವಹಿಸಿದ್ದಾರೆ. ಫೈಟರ್ ಸ್ಕ್ವಾಡ್ರನ್ ಕಮಾಂಡಿಂಗ್ ಆಫೀಸರ್, ಮುಖ್ಯ ಪರೀಕ್ಷಾ ಪೈಲಟ್, ಎರಡು ವಾಯುನೆಲೆಗಳ ಏರ್ ಆಫೀಸರ್ ಕಮಾಂಡಿಂಗ್ ಸೇರಿದಂತೆ ವಿವಿಧ ಹುದ್ದೆಗಳಲ್ಲಿ ಸೇವೆ ಸಲ್ಲಿಸಿದ್ದಾರೆ.

ವಾಯುಪಡೆಯ ಪಶ್ಚಿಮ ಕಮಾಂಡ್‌ನ ಏರ್ ಆಫೀಸರ್ ಕಮಾಂಡಿಂಗ್-ಇನ್-ಚೀಫ್ ಆಗಿಯೂ ಕಾರ್ಯನಿರ್ವಹಿಸಿರುವ ಅವರು, ಸಂಯೋಜಿತ ರಕ್ಷಣಾ ಸಿಬ್ಬಂದಿಯ ಉಪ ಮುಖ್ಯಸ್ಥರಾಗಿಯೂ ಸೇವೆ ಸಲ್ಲಿಸಿದ್ದಾರೆ. ಅವರ ಸೇವೆಯನ್ನು ಗುರುತಿಸಿ ‘ಅತಿ ವಿಶಿಷ್ಟ ಸೇವಾ ಪದಕ’ ಹಾಗೂ ‘ವಿಶಿಷ್ಟ ಸೇವಾ ಪದಕ’ ನೀಡಿ ಗೌರವಿಸಲಾಗಿದೆ.

ಇದೇ ವೇಳೆ ಟ್ರಸ್ಟ್ ಮೂವರು ಹೊಸ ಟ್ರಸ್ಟಿಗಳನ್ನೂ ನೇಮಕ ಮಾಡಿದೆ. ದೆಹಲಿ ಮೂಲದ ಮಹೇಶ್ ಭಾಗಚಂದ್ಕ, ಅಯೋಧ್ಯೆಯ ವಕೀಲ ಮದನ್ ಮೋಹನ್ ಪಾಂಡೆ ಹಾಗೂ ಶಿಕೋಹಾಬಾದ್‌ನ ನಿರ್ಮಲಾ ಯಾದವ್ ಅವರು ಹೊಸ ಟ್ರಸ್ಟಿಗಳಾಗಿ ನೇಮಕಗೊಂಡಿದ್ದಾರೆ.

### ‘ದೊಡ್ಡ ಅದೃಷ್ಟ, ಭಗವಾನ್ ರಾಮನ ಆಶೀರ್ವಾದ’



ಅಯೋಧ್ಯೆಯ ಶ್ರೀ ರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್‌ನ ಮೊದಲ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾಗಿ (ಸಿಇಒ) ನೇಮಕಗೊಂಡಿರುವ ನಿವೃತ್ತ ಏರ್ ಮಾರ್ಷಲ್ ಜಿತೇಂದ್ರ ಮಿಶ್ರಾ, ತಮ್ಮ ಆಯ್ಕೆಯನ್ನು ‘ಭಗವಾನ್ ರಾಮನ ಆಶೀರ್ವಾದ’ ಎಂದು ಬಣ್ಣಿಸಿದ್ದಾರೆ.

ನೇಮಕಾತಿ ಬಳಿಕ ಮೊದಲ ಬಾರಿಗೆ ಪ್ರತಿಕ್ರಿಯಿಸಿದ ಅವರು, ಹಲವು ಅಭ್ಯರ್ಥಿಗಳ ಪೈಕಿ ತಮ್ಮನ್ನು ಆಯ್ಕೆ ಮಾಡಿರುವುದು ದೊಡ್ಡ ಅದೃಷ್ಟ ಎಂದು ಹೇಳಿದ್ದಾರೆ. ಭಾರತೀಯ ವಾಯುಪಡೆಯಲ್ಲಿ 43 ವರ್ಷಗಳ ಕಾಲ ದೇಶ ಸೇವೆ ಸಲ್ಲಿಸಿದ ಬಳಿಕ, ಇದೀಗ ಶ್ರೀರಾಮ ಮಂದಿರ ಹಾಗೂ ರಾಮಭಕ್ತರ ಸೇವೆ ಮಾಡುವ ಅವಕಾಶ ದೊರೆತಿರುವುದು ಹೆಮ್ಮೆಯ ಸಂಗತಿ ಎಂದು ತಿಳಿಸಿದ್ದಾರೆ.

“ಹಲವು ಅಭ್ಯರ್ಥಿಗಳಲ್ಲಿ ನನ್ನನ್ನು ಆಯ್ಕೆ ಮಾಡಿರುವುದು ನನ್ನ ಅದೃಷ್ಟ. ವಾಯುಪಡೆಯಲ್ಲಿ 43 ವರ್ಷ ಸೇವೆ ಸಲ್ಲಿಸಿದ ಬಳಿಕ ಶ್ರೀರಾಮ ಮಂದಿರ ಮತ್ತು ರಾಮಭಕ್ತರಿಗೆ ಸೇವೆ ಸಲ್ಲಿಸುವ ಅವಕಾಶ ಸಿಕ್ಕಿದೆ. ಇದನ್ನು ಶ್ರೀರಾಮನ ಆಶೀರ್ವಾದವೆಂದು ಪರಿಗಣಿಸುತ್ತೇನೆ” ಎಂದು ಮಿಶ್ರಾ ಹೇಳಿದ್ದಾರೆ.

ವಾಯುಪಡೆಯಲ್ಲಿ ವಿವಿಧ ಪ್ರಮುಖ ಕಮಾಂಡಿಂಗ್ ಹುದ್ದೆಗಳನ್ನು ನಿರ್ವಹಿಸಿರುವ ಮಿಶ್ರಾ, ‘ಆಪರೇಷನ್ ಸಿಂಧೂರ್’ ಸಂದರ್ಭದಲ್ಲಿ ಪಶ್ಚಿಮ ವಾಯು ಕಮಾಂಡ್‌ನ ಮುಖ್ಯಸ್ಥರಾಗಿದ್ದರು. ಇದೀಗ ರಾಮ ಮಂದಿರ ಟ್ರಸ್ಟ್‌ನ ಆಡಳಿತಾತ್ಮಕ ಜವಾಬ್ದಾರಿಯನ್ನು ನಿರ್ವಹಿಸಲಿದ್ದಾರೆ.

## ಶಾಲಾ ಮೇಲ್ಛಾವಣಿ ಕುಸಿದು 6 ವಿದ್ಯಾರ್ಥಿಗಳಿಗೆ ಗಾಯ



● ವಿಕ್ರಮ ವಾಹಿನಿ । ಬಾಗಲಕೋಟೆ

ತರಗತಿ ನಡೆಯುತ್ತಿದ್ದ ವೇಳೆ ಸರ್ಕಾರಿ ಶಾಲೆಯ ಕೊಠಡಿಯ ಮೇಲ್ಛಾವಣಿಯ ಕಾಂಕ್ರೀಟ್ ಕುಸಿದು ಬಿದ್ದು, ಆರು ವಿದ್ಯಾರ್ಥಿಗಳು ಗಾಯಗೊಂಡಿರುವ ಘಟನೆ ಜಿಲ್ಲೆಯ ಮುಗಳೊಳ್ಳಿ ತಾಂಡಾದಲ್ಲಿ ಬುಧವಾರ ನಡೆದಿದೆ.

ಮೇಲ್ಛಾವಣಿ ಕುಸಿದ ವೇಳೆ 5 ಮತ್ತು 6ನೇ ತರಗತಿಯ ಒಟ್ಟು 26 ವಿದ್ಯಾರ್ಥಿಗಳು ತರಗತಿಯಲ್ಲಿದ್ದರು ಎನ್ನಲಾಗಿದೆ. ಪಾಠ ಕೇಳುತ್ತಿದ್ದ ವಿದ್ಯಾರ್ಥಿಗಳ ಬೆಂಚ್‌ಗಳ ಮೇಲೆಯೇ ಮೇಲ್ಛಾವಣಿಯ ಕಾಂಕ್ರೀಟ್ ಉದುರಿಬಿದ್ದಿದ್ದು, ಕೂದಲೆಳೆಯ ಅಂತರದಲ್ಲಿ ಹೆಚ್ಚಿನ ಅನಾಹುತ ತಪ್ಪಿದೆ. 2ನೇ ಪುಟಕ್ಕೆ...

## 20 ವರ್ಷ ಜಮೀನಿಗಾಗಿ ಅಲೆದ ಕಾರ್ಗಿಲ್ ಯೋಧ ಆತ್ಮಹತ್ಯೆಗೆ ಯತ್ನ

● ವಿಕ್ರಮ ವಾಹಿನಿ । ಚಿಕ್ಕಬಳ್ಳಾಪುರ

ಸೈನಿಕ ಸೇವೆಯನ್ನು ಪರಿಗಣಿಸಿ ಶಿಫಾರಸು ಮಾಡಲಾಗಿದ್ದ ಜಮೀನು ಮಂಜೂರು ಮಾಡಲು ಅಧಿಕಾರಿಗಳು 20 ವರ್ಷಗಳಿಂದ ವಿಳಂಬ ಮಾಡುತ್ತಿದ್ದಾರೆ ಎಂದು ಆರೋಪಿಸಿ ನೊಂದ ಕಾರ್ಗಿಲ್ ಯೋಧರೊಬ್ಬರು ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿರುವ ಘಟನೆ ಚಿಂತಾಮಣಿ ತಾಲ್ಲೂಕಿನಲ್ಲಿ ನಡೆದಿದೆ.

ಮಾಜಿ ಸೈನಿಕ ಶಿವಾನಂದರೆಡ್ಡಿ ಅವರು ಆಗಸ್ಟ್ 28ರಂದು ಚಿಂತಾಮಣಿ ಪ್ರವಾಸಿ ಮಂದಿರದ ಆವರಣದಲ್ಲಿ ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ್ದಾರೆ. ತಕ್ಷಣ ಅವರನ್ನು ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿ ಪ್ರಾಥಮಿಕ ಚಿಕಿತ್ಸೆ ನೀಡಿದ ಬಳಿಕ ಹೆಚ್ಚಿನ ಚಿಕಿತ್ಸೆಗಾಗಿ ಚಿಕ್ಕಬಳ್ಳಾಪುರಕ್ಕೆ ಕರೆದೊಯ್ಯಲಾಗಿದ್ದು, ಸದ್ಯ ಬೆಂಗಳೂರಿನ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಮರಾಠಾ ಲೈಟ್ ಇನ್‌ಫೆಂಟ್ರಿಯಲ್ಲಿ ಸೇವೆ ಸಲ್ಲಿಸಿದ್ದ ಶಿವಾನಂದರೆಡ್ಡಿ ಅವರು 1987ರಲ್ಲಿ ಸೇನೆಗೆ ಸೇರಿದ್ದು, 1999ರ ಕಾರ್ಗಿಲ್ ಯುದ್ಧದ ವೇಳೆ ಕಾಲಿಗೆ ಗಾಯಗೊಂಡಿದ್ದರು. ಗಾಯದ ಹಿನ್ನೆಲೆಯಲ್ಲಿ 2004ರಲ್ಲಿ ಕಡ್ಡಾಯ ನಿವೃತ್ತಿ ಪಡೆದಿದ್ದರು.

ಸೈನಿಕ ಸೇವೆಯನ್ನು ಗುರುತಿಸಿ ತಮಗೆ ಜಮೀನು ನೀಡುವಂತೆ ಅಂದಿನ ಸೇನಾ ಅಧಿಕಾರಿಗಳು ಜಿಲ್ಲಾಧಿಕಾರಿ, ತಹಶೀಲ್ದಾರ್ ಹಾಗೂ ಸೈನಿಕ ಕಲ್ಯಾಣ ಮಂಡಳಿಗೆ ಶಿಫಾರಸು ಮಾಡಿದ್ದರು. ಆದರೆ, ಜಮೀನು ಮಂಜೂರಾಗದೆ ವರ್ಷಗಳಿಂದ ಕಚೇರಿಗಳಿಗೆ ಅಲೆದಾಡುವಂತಾಗಿದೆ ಎಂದು ಶಿವಾನಂದರೆಡ್ಡಿ ಆರೋಪಿಸಿದ್ದಾರೆ. 2ನೇ ಪುಟಕ್ಕೆ...

## 31 ಅಕ್ರಮ ವಲಸಿಗರು ಮಾಲ್ಡಾಗೆ; ಗಡಿಪಾರಿಗೆ ಸಿದ್ಧತೆ

● ವಿಕ್ರಮ ವಾಹಿನಿ । ಮಾಲ್ಡಾ (ಪಶ್ಚಿಮ ಬಂಗಾಳ)

ಭಾರತಕ್ಕೆ ಅಕ್ರಮವಾಗಿ ಪ್ರವೇಶಿಸಿದ್ದಾರೆ ಎಂಬ ಆರೋಪದ ಮೇಲೆ ಬೆಂಗಳೂರಿನಲ್ಲಿ ವಶಕ್ಕೆ ಪಡೆಯಲಾಗಿದ್ದ 31 ಬಾಂಗ್ಲಾದೇಶಿ ಪ್ರಜೆಗಳನ್ನು ಪಶ್ಚಿಮ ಬಂಗಾಳದ ಮಾಲ್ಡಾಗೆ ಕರೆತರಲಾಗಿದೆ. ಮಂಗಳವಾರ ತಡರಾತ್ರಿ ರೈಲಿನ ಮೂಲಕ ಮಾಲ್ಡಾ ಟೌನ್ ರೈಲು ನಿಲ್ದಾಣ ತಲುಪಿದ ಅವರನ್ನು ಬಿಗಿ ಪೊಲೀಸ್ ಭದ್ರತೆಯಲ್ಲಿ ಹೋಲ್ಡಿಂಗ್ ಸೆಂಟರ್‌ಗೆ ಸ್ಥಳಾಂತರಿಸಲಾಗಿದೆ.

ಬೆಂಗಳೂರಿನ 10 ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿ ಈ 31 ಮಂದಿಯನ್ನು ವಶಕ್ಕೆ ಪಡೆಯಲಾಗಿತ್ತು. ಅವರ ಬಳಿ ಭಾರತದಲ್ಲಿ ವಾಸಿಸಲು ಅಗತ್ಯವಾದ ಮಾನ್ಯ ದಾಖಲೆಗಳು ಇರಲಿಲ್ಲ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಸುಮಾರು ಮೂರು ತಿಂಗಳ ಹಿಂದೆ ವಶಕ್ಕೆ ಪಡೆದ ಬಳಿಕ ಅವರನ್ನು ಬೆಂಗಳೂರಿನ ಬಂಧನ ಕೇಂದ್ರದಲ್ಲಿ ಇರಿಸಲಾಗಿತ್ತು.

ಕಳೆದ ಭಾನುವಾರ ಬೆಂಗಳೂರಿನ ಎಸ್‌ಎಂವಿಟಿ ರೈಲು ನಿಲ್ದಾಣದಿಂದ ಬೆಂಗಳೂರು-ಹೌರಾ ಸೂಪರ್‌ಫಾಸ್ಟ್ ಎಕ್ಸ್‌ಪ್ರೆಸ್ ಮೂಲಕ ಮಾಲ್ಡಾಗೆ ಕರೆತರಲಾಗಿದೆ. ಮಂಗಳವಾರ ರಾತ್ರಿ ಸುಮಾರು 11.30ಕ್ಕೆ ರೈಲು ಮಾಲ್ಡಾ ಟೌನ್ ನಿಲ್ದಾಣ ತಲುಪಿದ್ದು, ರೈಲಿನಲ್ಲಿದ್ದವರ ಭದ್ರತೆಗಾಗಿ 20 ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿತ್ತು. ಬಳಿಕ ಎರಡು ಬಸ್‌ಗಳಲ್ಲಿ ಅವರನ್ನು ಮಾಲ್ಡಾ ನಗರದ ಹೋಲ್ಡಿಂಗ್ ಸೆಂಟರ್‌ಗೆ ಕರೆದೊಯ್ಯಲಾಯಿತು.



ಪೊಲೀಸ್ ಅಧಿಕಾರಿಗಳ ಪ್ರಕಾರ, ಈ 31 ಮಂದಿಯನ್ನು ಅಗತ್ಯ ಪ್ರಕ್ರಿಯೆ ಪೂರ್ಣಗೊಳಿಸಿದ ಬಳಿಕ ಹಂತ ಹಂತವಾಗಿ ಭಾರತ-ಬಾಂಗ್ಲಾದೇಶ ಗಡಿಯ ಮೂಲಕ ಬಾಂಗ್ಲಾದೇಶಕ್ಕೆ ವಾಪಸ್ ಕಳುಹಿಸಲಾಗುವುದು.

ವಶದಲ್ಲಿರುವ ಫಾರು ಶೇಖ್, ಸುಮಾರು ಮೂರು ತಿಂಗಳ ಹಿಂದೆ ವೈದ್ಯರನ್ನು ಭೇಟಿಯಾಗಲು ಬಾಂಗ್ಲಾದೇಶದ ಬೋಗುರಾ ಜಿಲ್ಲೆಯಿಂದ ಭಾರತಕ್ಕೆ ಬಂದಿರುವುದಾಗಿ ತಿಳಿಸಿದ್ದಾರೆ. ಇತರ ಕೆಲವರು ಉದ್ಯೋಗಕ್ಕಾಗಿ ಭಾರತಕ್ಕೆ ಬಂದಿದ್ದಾಗಿ ಹೇಳಿದ್ದು, ಐದುರಿಂದ ಏಳು ತಿಂಗಳ ಹಿಂದೆ ಬೆಂಗಳೂರಿಗೆ ಬಂದಿರುವುದಾಗಿ ತಿಳಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಹೋಲ್ಡಿಂಗ್ ಸೆಂಟರ್ ಸುತ್ತಮುತ್ತ ಪೊಲೀಸ್ ಭದ್ರತೆಯನ್ನು ಹೆಚ್ಚಿಸಲಾಗಿದ್ದು, ವಲಸಿಗರ ಗುರುತು ಹಾಗೂ ದಾಖಲೆಗಳ ಪರಿಶೀಲನೆ ಸೇರಿದಂತೆ ಅಗತ್ಯ ಕಾನೂನು ಪ್ರಕ್ರಿಯೆಗಳನ್ನು ಕೈಗೊಳ್ಳಲಾಗುತ್ತಿದೆ. ಪರಿಶೀಲನೆ ಪೂರ್ಣಗೊಂಡ ಬಳಿಕ ಸಂಬಂಧಿಸಿದ ಅಧಿಕಾರಿಗಳ ಸಮನ್ವಯದಲ್ಲಿ ಮುಂದಿನ ಗಡಿಪಾರು ಕ್ರಮ ಕೈಗೊಳ್ಳಲಾಗುವುದು ಎಂದು ಮೂಲಗಳು ತಿಳಿಸಿವೆ. ಮಾಲ್ಡಾ ಜಿಲ್ಲಾ ಪೊಲೀಸ್ ಅಧಿಕಾರಿಯೊಬ್ಬರು, ಬೆಂಗಳೂರಿನಿಂದ 31 ಬಾಂಗ್ಲಾದೇಶಿ ಪ್ರಜೆಗಳನ್ನು ಹೋಲ್ಡಿಂಗ್ ಸೆಂಟರ್‌ಗೆ ಕರೆತರಲಾಗಿದ್ದು, ಮುಂದಿನ ನಿರ್ದೇಶನದಂತೆ ಅವರನ್ನು ಗಡಿಯಾಚೆಗೆ ವಾಪಸ್ ಕಳುಹಿಸಲಾಗುವುದು ಎಂದು ತಿಳಿಸಿದ್ದಾರೆ.

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

## ಸನಿ ವಾಹಿನಿ

ಮನಸ್ಸಿನ ಸಂತೃಪ್ತಿಗೊಸ್ಕರವಾದರೂ ಒಳ್ಳೆಯ ಕೆಲಸ ಮಾಡುತ್ತಿರಬೇಕು. ಜನರು ಅದನ್ನು ಗುರುತಿಸುತ್ತಾರೋ ಇಲ್ಲವೋ ಎಂಬುದರ ಕಡೆಗೆ ಗಮನ ಕೊಡಬಾರದು. ಏಕೆಂದರೆ ಜನರು ದೇವರಲ್ಲೂ ಸಹ ದೋಷವನ್ನು ಹುಡುಕುತ್ತಾರೆ. ಇನ್ನು ಮನುಷ್ಯ ಯಾವ ಲೆಕ್ಕ.

## ದಿನ ಪಂಚಾಂಗ

ಸೆಪ್ಟಂಬರ್, 03-2026, ಗುರುವಾರ ವರ್ಷ ಋತು, ಶ್ರಾವಣ ಮಾಸ, ಬಹುಳ ಪಕ್ಷ. ಸಪ್ತಮಿ ತಿಥಿ ರಾ-01:49
ಕೃತಿಕ ನಕ್ಷತ್ರ ರಾ-01:00
ರಾಹುಕಾಲ ಮ-01:51-03:23
ದಶಫಲ ವ್ರತ, ಆತ್ಮಕೂರಿ ಲಕ್ಷ್ಮಿನೃಸಿಂಹ ಸೋಮಯಾಜಿ ಜಯಂತಿ, ಗದಗ ಬಸವೇಶ್ವರನಗರ ವೀರಭದ್ರೇಶ್ವರ ಅಗ್ನಿಕುಂಡ

# ರಾಯರ ನಡೆ ವರ್ತೂರು ಕಡೆ ಕಾರ್ಯಕ್ರಮದಲ್ಲಿ ತುಂಗೆಯಂತೆ ಹರಿದ ಭಕ್ತಿಭಾವ

● ವಿಕ್ರಮ ವಾಹಿನಿ । ಬೆಂಗಳೂರು

ವರ್ತೂರಿನ ಶ್ರೀ ಗುರು ರಾಘವೇಂದ್ರ ಸೇವಾ ಸಮಿತಿ (ರಿ.) ವತಿಯಿಂದ ಭಾನುವಾರ ಆಯೋಜಿಸಲಾಗಿದ್ದ ಶ್ರೀ ರಾಯರ ಮಧ್ಯಾರಾಧನಾ ಮಹೋತ್ಸವದ ಅಂಗವಾಗಿ 'ರಾಯರ ನಡೆ ವರ್ತುರು ಕಡೆ' ಕಾರ್ಯಕ್ರಮ ಅತ್ಯಂತ ಭಕ್ತಿಭಾವದಿಂದ ನೆರವೇರಿತು.

ಈ ಸಂದರ್ಭದಲ್ಲಿ, ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ (ರಿ) ಅಧ್ಯಕ್ಷರಾದ ಶ್ರೀ ಎಸ್ ರಘುನಾಥ್ ಅವರು ಭಾಗವಹಿಸಿ, ಶ್ರೀ ಗುರುರಾಯರ ದರ್ಶನ ಪಡೆದರು. ಈ ಸಂದರ್ಭದಲ್ಲಿ ಮಹಾಸಭಾದ ಹಿರಿಯ ಉಪಾಧ್ಯಕ್ಷರಾದ ಆರ್. ಲಕ್ಷ್ಮಿಕಾಂತ್, ಉಪಾಧ್ಯಕ್ಷರಾದ ಶ್ರೀಮತಿ ಅಂಬಿಕಾ ರಾಮಚಂದ್ರ,

ಅನಿಲ್ ಕುಮಾರ್, ಹರಿಪ್ರಸಾದ್, ಹೊಸಕೋಟೆ ಮಂಜುನಾಥ್, ಎಚ್ಎಎಲ್ ಶ್ರೀನಿವಾಸ್, ಪೊಲೀಸ್ ಆನಂದ್, ಪೊಲೀಸ್ ಕೃಷ್ಣಮೂರ್ತಿ, ಚೈತನ್ಯ ಕುಮಾರ್, ಜೈಸಿಂಹ ರಾವ್ ಹಾಗು ವರ್ತುರಿನ ಎಲ್ಲಾ ಸಮಾಜದ ಮುಖಂಡರುಗಳು



ಭಾಗವಹಿಸಿದ್ದರು.

ಮಹೋತ್ಸವದ ಅಂಗವಾಗಿ ಅತ್ಯಂತ ಶ್ರದ್ಧಾಭಕ್ತಿಯಿಂದ ವಿಶೇಷ ಪೂಜೆ, ಪಲ್ಲಕ್ಕಿ ಉತ್ಸವ, ಮಹಾಮಂಗಳಾರತಿ ಹಾಗೂ ತೀರ್ಥಪ್ರಸಾದ ವಿನಿಯೋಗ ನಡೆಯಿತು.

ಅಪಾರ ಸಂಖ್ಯೆಯ ಭಕ್ತರು ಪಾಲ್ಗೊಂಡು ಶ್ರೀ ರಾಯರ ಕೃಪೆಗೆ ಪಾತ್ರರಾದರು.

ಮಹೋತ್ಸವವನ್ನು ಅಚ್ಚುಕಟ್ಟಾಗಿ ಮತ್ತು ಭಕ್ತಿಪೂರ್ವಕವಾಗಿ ಆಯೋಜಿಸಿದ ಶ್ರೀ ಗುರು ರಾಘವೇಂದ್ರ ಸೇವಾ ಸಮಿತಿಯ ಪದಾಧಿಕಾರಿಗಳು, ಸದಸ್ಯರು ಹಾಗೂ ಸೇವಾಕರ್ತರಿಗೆ ಹೃತ್ಪೂರ್ವಕ ಅಭಿನಂದನೆಗಳು.

# ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ 25 ಹುದ್ದೆ ಭರ್ತಿ

● ವಿಕ್ರಮ ವಾಹಿನಿ । ಬೆಂಗಳೂರು

ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ವಿವಿಧ ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಕೈಗೊಳ್ಳಲಾಗಿದ್ದು, ಶೇ.25ರಷ್ಟು ಹಿಂದುಳಿದ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ವಹಿಸಲಾಗಿದೆ.

ನೇಮಕಾತಿಯಲ್ಲಿ ಕಲ್ಯಾಣಾಧಿಕಾರಿಗಳ 3, ಕ್ಷೇತ್ರ ನಿರೀಕ್ಷಕರ 15, ಪ್ರಥಮ ದರ್ಜೆ ಸಹಾಯಕರ 3 ಹಾಗೂ ದ್ವಿತೀಯ ದರ್ಜೆ ಸಹಾಯಕರ 4 ಹುದ್ದೆಗಳು ಸೇರಿದಂತೆ ಒಟ್ಟು 25 ಹುದ್ದೆಗಳನ್ನು ಭರ್ತಿ ಮಾಡಲಾಗುತ್ತದೆ.

ಅರ್ಹ ಅಭ್ಯರ್ಥಿಗಳ ಅಂತಿಮ ಆಯ್ಕೆಪಟ್ಟಿಯನ್ನು ಸೆ.1, 2026ರಿಂದ ಮಂಡಳಿಯ ವೆಬ್‌ಸೈಟ್ ಹಾಗೂ ಮಂಡಳಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗುವುದು ಎಂದು ಮಂಡಳಿ ತಿಳಿಸಿದೆ.

## ಆಧ್ಯಾತ್ಮ

# ದೇವರಿಗೆ ಸಮಾನನಾಗಿದ್ದ ಮನುಷ್ಯನ ಪತನ ಶುರುವಾಗಿದ್ದೇ ಊಟದಿಂದ!



● ವಿಕ್ರಮ ವಾಹಿನಿ । ಗೋಕರ್ಣ

ಮಾನವರ ಮೂಲವನ್ನು ಕುರಿತು ಭಾರತೀಯರ ದೃಷ್ಟಿಗೂ ಮತ್ತು ಆಧುನಿಕರ ದೃಷ್ಟಿಗೂ ತುಂಬಾ ವ್ಯತ್ಯಾಸಗಳಿವೆ. ಅಧುನಿಕರ ಪ್ರಕಾರ ಸೃಷ್ಟಿಯ ಆದಿಯಲ್ಲಿ ಮಾನವ ಸಂಸ್ಕೃತಿ ಹೀನನಾಗಿದ್ದು, ಕಾಡು ಮನುಷ್ಯನಂತಿದ್ದ ಎಂಬ ಕಲ್ಪನೆಗಳನ್ನು ನೀಡಲಾಗಿದೆ ಹಾಗೂ ಮಂಗನಿಂದ ಮಾನವ ಎಂಬ ಸಿದ್ಧಾಂತಗಳೂ ಇವೆ. ಇವು ನಮ್ಮ ಪೂರ್ವಜರ ಕುರಿತಾಗಿ ಜುಗುಪ್ಸೆ ಹುಟ್ಟಿಸುವಂತಿದೆ ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ಹೇಳಿದರು.

ಗೋಕರ್ಣದ ಅಶೋಕೆಯ ಮೂಲಮಠದ ಪರಿಸರದಲ್ಲಿ ನಡೆಯುತ್ತಿರುವ 'ಅನ್ನಬ್ರಹ್ಮ ಚಾತುರ್ಮಾಸ್ಯ'ದ ಧರ್ಮಸಭೆಯಲ್ಲಿ 02.09.2026 ರಂದು 'ಅನ್ನಂ ಬ್ರಹ್ಮ' ಮಾಲಿಕೆಯಲ್ಲಿ ಪ್ರವಚನ ಅನುಗ್ರಹಿಸಿದ ಶ್ರೀಗಳು, ಭಾರತೀಯ ಪರಂಪರೆ ಹೇಳುವಂತೆ ಕೃತಯುಗದಲ್ಲಿ ದೇವರು ಜಗತ್ತನ್ನು ತುಂಬಾ ಸುಂದರವಾಗಿ ಸೃಷ್ಟಿಸಿದ್ದ. ಅದು ದೇವರು ಸೃಷ್ಟಿಸಿದಂತೆಯೇ ಇದ್ದ ಕಾಲ. ಕೃತಯುಗ ಒಳಿತಿನ ಒಳಿತಾದರೆ ಈಗಿನ ಕಲಿಯುಗ ಕೆಡುಕಿನ ಕೆಡುಕು ಎನ್ನಬಹುದು. ಅಂದು ಜನರು ಪರಿಪೂರ್ಣ ಆರೋಗ್ಯವನ್ನು ಹೊಂದಿದ್ದರು. ಕೃತಯುಗದ ವರ್ಣನೆಯನ್ನು ಕೇಳುವಾಗ ಅದು ಅತಿಶಯೋಕ್ತಿ ಎನಿಸಬಹುದು. ಏಕೆಂದರೆ ನಾವು ಅಂತಹಾ ವಾತಾವರಣವನ್ನು ನೋಡಿಲ್ಲ. ಹಾಗಾಗಿ ಅದು ಸುಳ್ಳು ಎನಿಸಬಹುದು ಎಂದರು.

ಚರಕ ಸಂಹಿತೆಯು ಸೃಷ್ಟಿಯ ಆದಿಯಲ್ಲಿ ಮನುಷ್ಯರು ದೇವರಿಗೆ ಸರಿಸಮಾನವಾದ ಓಜಸ್ಸನ್ನು ಹೊಂದಿದ್ದರು. ಗಟ್ಟಿಮುಟ್ಟಾದ ಶರೀರವನ್ನು , ಪ್ರಸನ್ನವಾದ ಇಂದ್ರಿಯಗಳನ್ನು, ಪರಿಪೂರ್ಣ ಆರೋಗ್ಯವನ್ನು ಹೊಂದಿದ್ದರು ಎಂದಿದೆ. ಆಗ ರೋಗವೂ ಇರಲಿಲ್ಲ, ವೈದ್ಯರಿರಲಿಲ್ಲ, ವೈದ್ಯಶಾಸ್ತ್ರವೂ ಇರಲಿಲ್ಲ, ಔಷಧದ ಅಂಗಡಿಗಳೂ ಇರಲಿಲ್ಲ ಎಂದು ಶ್ರೀಗಳು ವಿವರಿಸಿದರು.

ಮೊದಲ ತಪ್ಪು ಹೆಜ್ಜೆ : ಕೃತಯುಗದಲ್ಲಿ ಅಗ್ನಿ ಹಾಗೂ ಆಹಾರದ ವಿಚಾರದಲ್ಲಿ ಮೊದಲ ತಪ್ಪು ಹೆಜ್ಜೆ ಆರಂಭವಾಯಿತು. ಅಗತ್ಯಕ್ಕಿಂತ ಹೆಚ್ಚು ಆಹಾರವನ್ನು ಸ್ವೀಕರಿಸಲು ಕೆಲವರು ಆರಂಭಿಸಿದರು. ಪರಿಣಾಮವಾಗಿ ಮಾನವರ ದೇಹ ಸ್ಥೂಲವಾಯಿತು, ಆಲಸ್ಯ, ಕೂಡಿಡುವ ಬುದ್ಧಿ, ಲೋಭ, ದ್ರೋಹ, ಸುಳ್ಳು, ಕಾಮ ಕ್ರೋಧಾದಿಗಳು, ಹೀಗೆ ಒಂದರಿಂದ ಒಂದು ದುರ್ಗುಣಗಳು ಬೆಳೆಯುತ್ತಾ ಸಾಗಿತು.

ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ, ಮಂಜುನಾಥ ಜನ್ನು, ಮಹೇಶ ಶೆಟ್ಟಿ, ಹನುಮಂತ ಗೌಡ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿ, ಶ್ರೀಗಳ ಆಶೀರ್ವಾದ ಪದೆದರು.

ಉಪ್ಪಿನಂಗಡಿ ಹವ್ಯಕ ಮಂಡಲದ ಮಾಣಿ, ಕಬಕ , ಉಜಿರೆ, ಉಪ್ಪಿನಂಗಡಿ, ಉರುವಾಲು, ವೇಣೂರು ಹವ್ಯಕ ವಲಯಗಳ ಪರವಾಗಿ ವೈ.ಗಣರಾಜ ಕೊಣಮ್ಮೆ ಕುಟುಂಬದವರು ಗುರುಭಿಕ್ಷಾ ಸೇವೆಯನ್ನು ಸಮರ್ಪಿಸಿದರು.

ನಾರಾಯಣ ಭಟ್ ಹಾರೆಕೆರೆ, ಅರವಿಂದ ದರ್ಬೆ, ಗಣಪತಿ ಜಟ್ಟಿಮನೆ, ಮಹೇಶ ಕುದಪುಲಾ, ಪರಮೇಶ್ವ ಭಟ್ ವೇಣೂರು , ಶಿವಪ್ರಸಾದ ವೇಣೂರು ಹಾಗೂ ದಿನಪ್ರಧಾನರಾಗಿ ವೆಂಕಟಗಿರಿ ಎಮ್.ಆರ್ ದಂಪತಿಗಳು ಉಪಸ್ಥಿತರಿದ್ದರು.

# 'ಮಕ್ಕಳಲ್ಲ, ಪೋಷಕರು, ಶಿಕ್ಷಕರು ಬದಲಾಗಬೇಕು'

● ವಿಕ್ರಮ ವಾಹಿನಿ । ಹಾಸನ

*ಇಂದಿನ ಮಕ್ಕಳ ವರ್ತನೆ ಸಹಜವಾಗಿದ್ದು, ಅವರನ್ನು ಬದಲಾಯಿಸುವ ಬದಲು ಅವರ ಮನಸ್ಥಿತಿಯನ್ನು ಅರ್ಥಮಾಡಿಕೊಂಡು ಪೋಷಕರು ಹಾಗೂ ಶಿಕ್ಷಕರು ತಮ್ಮ ವಿಧಾನದಲ್ಲಿ ಬದಲಾವಣೆ ಮಾಡಿಕೊಳ್ಳಬೇಕು ಎಂದು ಸದ್ಗುರು ಶ್ರೀ ಮಧುಸೂದನ ಸಾಯಿ ಹೇಳಿದರು.*

*ನಗರದಲ್ಲಿ ಮಂಗಳವಾರ ನಡೆದ 'ದಿವ್ಯ ಸಂಜೆ' ಸಂವಾದ ಕಾರ್ಯಕ್ರಮದಲ್ಲಿ 'ವಿಜಯ ಕರ್ನಾಟಕ' ಸಂಪಾದಕ ಸುದರ್ಶನ ಚನ್ನಂಗಿಹಳ್ಳಿ ಅವರ ಪ್ರಶ್ನೆಗಳಿಗೆ ಉತ್ತರಿಸಿದ ಅವರು, ಇಂದಿನ ಮಕ್ಕಳು ಹೆಚ್ಚು ಕುತೂಹಲಿಗಳು, ಪ್ರಶ್ನಿಸುವ ಸ್ವಭಾವದವರು ಹಾಗೂ ವಿಷಯಗಳನ್ನು ವೇಗವಾಗಿ ಗ್ರಹಿಸುವ ಸಾಮರ್ಥ್ಯ ಹೊಂದಿದ್ದಾರೆ. ಅವರ ಏಕಾಗ್ರತೆ ದೀರ್ಘಕಾಲ ಒಂದೇ ವಿಷಯದ ಮೇಲೆ ಇರದಿರಬಹುದು. ಹೀಗಾಗಿ ಅವರ ಮನಸ್ಸನ್ನು ಅರ್ಥಮಾಡಿಕೊಂಡು ಸಮಾಧಾನದಿಂದ ಉತ್ತರಿಸುವ ಮೂಲಕ ಅವರನ್ನು ಬೆಳೆಸಬೇಕು ಎಂದರು.*

*ಮಕ್ಕಳನ್ನು ಬೆಳೆಸುವಲ್ಲಿ ಪೋಷಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಕೇವಲ ತರಗತಿಯಲ್ಲಿ ಪಾಠ ಮಾಡುವುದರಿಂದ ಶಿಕ್ಷಣ ಪೂರ್ಣವಾಗುವುದಿಲ್ಲ ಎಂಬುದನ್ನು ಶಿಕ್ಷಕರು ಅರಿಯಬೇಕು. ಶಾಲಾ ಚಟುವಟಿಕೆಗಳಲ್ಲಿ ಪೋಷಕರು ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಬದಲಾಗಬೇಕಿರುವುದು ಮಕ್ಕಳಲ್ಲ; ಪೋಷಕರು ಮತ್ತು ಶಿಕ್ಷಕರು ಎಂದು ಅವರು ಪ್ರತಿಪಾದಿಸಿದರು.*

*ಸಮಾಜದಲ್ಲಿ ಶಾಶ್ವತ ಬದಲಾವಣೆ ತರಲು ಶಿಕ್ಷಣ ವ್ಯವಸ್ಥೆಯ ಸುಧಾರಣೆ ಅಗತ್ಯ. ನೀತಿ-ಮೌಲ್ಯ ಶಿಕ್ಷಣವನ್ನು ಮತ್ತೆ ಶಿಕ್ಷಣ ವ್ಯವಸ್ಥೆಯ ಭಾಗವಾಗಿಸಬೇಕು. ವಿಶ್ವವಿದ್ಯಾಲಯಗಳಲ್ಲಿ ಕೌಶಲ ಆಧರಿತ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ಪ್ರಸ್ತುತ ಉದ್ಯೋಗದಲ್ಲಿರುವವರ ಪೈಕಿ ಶೇ.92ರಷ್ಟು ಮಂದಿಯ ಶಿಕ್ಷಣಕ್ಕೂ ಅವರು ಮಾಡುತ್ತಿರುವ ಕೆಲಸಕ್ಕೂ ನೇರ ಸಂಬಂಧವಿಲ್ಲ ಎಂಬುದು ಶಿಕ್ಷಣ ವ್ಯವಸ್ಥೆಯಲ್ಲಿರುವ ಸವಾಲನ್ನು ತೋರಿಸುತ್ತದೆ ಎಂದು ಹೇಳಿದರು.*

*ಭಾರತದ ವೈವಿಧ್ಯತೆಯೇ ಅದರ ನಿಜವಾದ ಶಕ್ತಿ. ಹಲವು ಆಕ್ರಮಣಗಳ ನಡುವೆಯೂ ದೇಶದ ಆಧ್ಯಾತ್ಮಿಕ ಪರಂಪರೆ ಉಳಿದಿದೆ. ಅಭಿವೃದ್ಧಿಯ ಅರ್ಥವನ್ನು ಕೇವಲ ಭೌತಿಕ ಪ್ರಗತಿಗೆ ಸೀಮಿತಗೊಳಿಸಬಾರದು. ಸರ್ವಾಂಗೀಣ ಅಭಿವೃದ್ಧಿಯೇ ನಿಜವಾದ ಪ್ರಗತಿ. ರಾವಣ ಸ್ವರ್ಣಲಂಕೆಯನ್ನು ನಿರ್ಮಿಸಿದ್ದರೂ ಅದನ್ನು ಆದರ್ಶ ಪ್ರಗತಿ ಎನ್ನಲು ಸಾಧ್ಯವಿಲ್ಲ; ಇಂದಿಗೂ ಜನರು ರಾಮರಾಜ್ಯವನ್ನು ನೆನಪಿಸಿಕೊಳ್ಳುತ್ತಾರೆ ಎಂದು ಸದ್ಗುರು ಶ್ರೀ ಮಧುಸೂದನ ಸಾಯಿ ಹೇಳಿದರು.*



## ದೊಡ್ಡಮಗ್ಗೆಯಿಂದ ದೇಶಕ್ಕೆ ಭರವಸೆ ಕೊಟ್ಟ ಕೃಷಿಕ

ಪ್ರಶಸ್ತಿ ಸ್ವೀಕರಿಸಿದ ಮಾತನಾಡಿದ ಅವರು, ಸತ್ಯ ಸಾಯಿ ಗ್ರಾಮದಲ್ಲಿ ನಡೆಯುತ್ತಿರುವ ಮಹತ್ವದ ಸಮಾಜ ಸೇವೆಯನ್ನು ಶ್ಲಾಘಿಸಿದರು. ಸಂಸ್ಥೆಯ ಕಾರ್ಯಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವುದಾಗಿ ಹಾಗೂ ತಮ್ಮಿಂದ ಆಗುವ ಎಲ್ಲ ನೆರವು ಒದಗಿಸುವುದಾಗಿ ಭರವಸೆ ನೀಡಿದರು.

30 ವರ್ಷಗಳ ಹಿಂದೆ 'ಬಂಗಾರದ ಮನುಷ್ಯ' ಸಿನಿಮಾ ನೋಡಿ ನಾನು ಮಾದರಿ ರೈತನಾಗುವ ನಿರ್ಧಾರ ಮಾಡಿದೆ. ಇಂದು ಸಾವಿರಾರು ಆಕಳು ಸಾಕಿದ್ದೇವೆ. ಪರಿಸರ ಸ್ನೇಹಿ ಕೃಷಿ ಪದ್ಧತಿ ಅನುಸರಿಸುತ್ತಿದ್ದೇವೆ. ನಮ್ಮ ಕುಟುಂಬದಲ್ಲಿ ಮೂವರು ಐಎಎಸ್ ಅಧಿಕಾರಿಗಳಿದ್ದಾರೆ. ನಾವು ನಾಲ್ವರು ಅಣ್ಣತಮ್ಮಂದಿರು ಕೂಡು ಕುಟುಂಬವಾಗಿ ಮುನ್ನಡೆಯುತ್ತಿದ್ದೇವೆ ಎಂದು ವಿವರಿಸಿದರು.

***ಸೇವಾಯಜ್ಞಕ್ಕೆ ಕೈಜೋಡಿಸೋಣ: ವಿನಯ್ ಗುರೂಜಿ:*** *ಗೌರಿಗದ್ದೆಯ ಅವಧೂತ ವಿನಯ್ ಗುರೂಜಿ ಮಾತನಾಡಿ, ಸದ್ಗುರು ಶ್ರೀ ಮಧುಸೂದನ ಸಾಯಿ ಅವರು ಕಳೆದ 12 ವರ್ಷಗಳಿಂದ ಶಿಕ್ಷಣ, ಆರೋಗ್ಯ ಹಾಗೂ ಸಮಾಜಸೇವೆಯ ಕ್ಷೇತ್ರದಲ್ಲಿ ಹಗಲಿರುಳು ಶ್ರಮಿಸುತ್ತಿದ್ದಾರೆ. ಇದು ಕೇವಲ ಒಂದು ಸಂಸ್ಥೆಯ ಕಾರ್ಯವಲ್ಲ, ನಿರಂತರವಾಗಿ ನಡೆಯುತ್ತಿರುವ ಸೇವಾಯಜ್ಞವಾಗಿದೆ ಎಂದರು.*

*ಮುದ್ದೇನಹಳ್ಳಿಯಲ್ಲಿ ಮಕ್ಕಳ ಬೌದ್ಧಿಕ ಹಾಗೂ ವ್ಯಕ್ತಿತ್ವ ವಿಕಾಸಕ್ಕೆ ಒತ್ತು ನೀಡಲಾಗುತ್ತಿದೆ. ಮಕ್ಕಳಿಗೆ ಶಿಕ್ಷಣ, ಆರೋಗ್ಯ ಮತ್ತು ಆಶ್ರಯದ ಜತೆಗೆ ಪರಿಸರ ಕಾಳಜಿ ಹಾಗೂ ರಾಷ್ಟ್ರಭಕ್ತಿಯನ್ನೂ ಬೆಳೆಸಲಾಗುತ್ತಿದೆ. ಈ ಸೇವಾಯಜ್ಞದಲ್ಲಿ ಹಾಸನ ಜಿಲ್ಲೆಯ ಜನರೂ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಕರೆ ನೀಡಿದರು.*

*ಇಡೀ ಜಗತ್ತನ್ನು ಬೆಸೆಯುವ ರಾಮಸೇತುವೆಯ ನಿರ್ಮಾಣದಂತೆ ಸದ್ಗುರುಗಳು ಕಾರ್ಯನಿರ್ವಹಿಸುತ್ತಿದ್ದಾರೆ. ನಾವು ಲಕ್ಷ್ಮಣ ಅಥವಾ ಆಂಜನೇಯರಾಗದಿದ್ದರೂ ಅಳಿಲಿನಂತೆ ನಮ್ಮ ಕೈಲಾದ ಸೇವೆ ಸಲ್ಲಿಸಬಹುದು ಎಂದರು.*

***ದಶಮಾನೋತ್ಸವ ಸಂಭ್ರಮದಲ್ಲಿ ಹಾಸನ ಕ್ಯಾಂಪಸ್***

*ಬೇಲೂರು ಸಮೀಪದ ಚನ್ನೇನಹಳ್ಳಿ ಬಳಿ ಇರುವ ಶ್ರೀ ಸತ್ಯ ಸಾಯಿ ಸತ್ಯನಿಕೇತನಂ ಗುರುಕುಲಂ 2016ರ ಜೂನ್ 1ರಂದು ಆರಂಭಗೊಂಡಿದ್ದು, ಪ್ರಸಕ್ತ ವರ್ಷ ದಶಮಾನೋತ್ಸವ ಸಂಭ್ರಮದಲ್ಲಿದೆ. ಶ್ರೀ ಸತ್ಯ ಸಾಯಿ ಲೋಕಸೇವಾ ಗುರುಕುಲಂ ಸಮೂಹ ಶಿಕ್ಷಣ ಸಂಸ್ಥೆಗಳ ಭಾಗವಾಗಿರುವ ಈ ಕ್ಯಾಂಪಸ್ ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಗೆ ಆದ್ಯತೆ ನೀಡುತ್ತಿದೆ.*

*ಇದುವರೆಗೆ 438 ವಿದ್ಯಾರ್ಥಿಗಳು ಇಲ್ಲಿ ಶಿಕ್ಷಣ ಪಡೆದಿದ್ದು, ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ 125 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. ಇವರಲ್ಲಿ ಶೇ.90ರಷ್ಟು ಮಂದಿ ಗ್ರಾಮೀಣ ಹಿನ್ನೆಲೆಯವರು, ಶೇ.75ರಷ್ಟು ಮಂದಿ ಬಿಪಿಎಲ್ ಕುಟುಂಬಗಳಿಂದ ಬಂದವರು ಹಾಗೂ ಶೇ.55ರಷ್ಟು ಮಂದಿ ಪ್ರಥಮ ತಲೆಮಾರಿನ ಕಲಿಕಾರ್ಥಿಗಳಾಗಿದ್ದಾರೆ.*

***'ಜೀವನ ಶಿಕ್ಷಣ ನೀಡಿದ ಸಂಸ್ಥೆ':*** *ದಿವ್ಯ ಸಂಜೆ ಕಾರ್ಯಕ್ರಮದಲ್ಲಿ ತಮ್ಮ ಅನುಭವ ಹಂಚಿಕೊಂಡ ಶ್ರೀ ಸತ್ಯ ಸಾಯಿ ಗುರುಕುಲಂನ ಹಿರಿಯ ವಿದ್ಯಾರ್ಥಿ, ಅರಸೀಕೆರೆ ತಾಲ್ಲೂಕಿನ ಮೋಹನ್‌ಕುಮಾರ್ ಕೆ.ಎಂ., ಬಡ ಕುಟುಂಬದಿಂದ ಬಂದಿದ್ದ ತಮಗೆ ಉನ್ನತ ಶಿಕ್ಷಣ ಕನಸಾಗಿತ್ತು. ಆದರೆ ಸಂಸ್ಥೆ ಶಿಕ್ಷಣದ ಜತೆಗೆ ನಿಸ್ವಾರ್ಥ ಸೇವೆ, ದೇಶಭಕ್ತಿ ಹಾಗೂ ಸಮಾಜಸೇವೆಯ ಮನೋಭಾವ ಬೆಳೆಸಿದೆ. ಇಂದು ಸಂಸ್ಥೆಯ ಕಲಬುರಗಿ ಕ್ಯಾಂಪಸ್‌ನಲ್ಲಿ ಪಾಲಕರಾಗಿ ಸೇವೆ ಸಲ್ಲಿಸುತ್ತಿರುವುದಾಗಿ ತಿಳಿಸಿದರು.*

*ಕಾರ್ಯಕ್ರಮವು ಶ್ರೀ ಸತ್ಯ ಸಾಯಿ ಮಾನವ ಅಭ್ಯುದಯ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳ ವೇದಘೋಷದೊಂದಿಗೆ ಆರಂಭವಾಯಿತು.*

## ಹೆಚ್ಚುತ್ತಿರುವ ವಿಚ್ಛೇದನಗಳಿಗೆ ಏನು ಪರಿಹಾರ?

ವೈಯಕ್ತಿಕತೆಗೆ ಹೆಚ್ಚು ಮಹತ್ವ ಕೊಡುವ ಸಮಾಜ ಇದಾಗುತ್ತಿದೆ. ಹೆಂಡತಿಯು ಮ್ಯಾಗಿಯನ್ನಷ್ಟೇ ಮಾಡುತ್ತಾಳೆ ಎನ್ನುವ ಕಾರಣಕ್ಕೆ ವಿಚ್ಛೇದನದ ನೋಟೀಸ್ ಕೊಟ್ಟಿದ್ದ ಗಂಡನ ಬಗ್ಗೆ ಬಳ್ಳಾರಿಯಿಂದ ವರದಿಯೊಂದು ಪ್ರಕಟವಾಗಿತ್ತು. ಒಂದು ಕುಟುಂಬವಾಗಿ ಎರಡು ಜೀವಗಳು ಒಟ್ಟಾಗಿ ಉಳಿಯಲು ಸಣ್ಣಪುಟ್ಟ ತ್ಯಾಗಗಳು ಬೇಕಾಗುತ್ತವೆ. ವಿವಾಹವು ಆಧ್ಯಾತ್ಮಿಕ ಬದ್ಧತೆ ಬಯಸುವ, ದಂಪತಿಯನ್ನು ಸಾಧನೆಯ ಮೂಲಕ ದೇವರ ಹತ್ತಿರಕ್ಕೆ ಕೊಂಡೊಯ್ಯುವ ಸಂಸ್ಥೆ ಎನ್ನುವ ಅರಿವು ಸಮಾಜದಲ್ಲಿ ಮತ್ತೆ ಮೂಡಬೇಕಾಗಿದೆ ಎಂದು ಸದ್ಗುರು ಶ್ರೀ ಮಧುಸೂದನ ಸಾಯಿ ಪ್ರತಿಪಾದಿಸಿದರು.

ಮೊದಲೂ ಗಂಡ-ಹೆಂಡತಿ ನಡುವೆ ಜಗಳು ಇರುತ್ತಿದ್ದವು. ಆದರೆ ಮಕ್ಕಳಿಗಾಗಿ ಅವರು ತ್ಯಾಗ ಮಾಡುತ್ತಿದ್ದರು. ಈಗ ಪರಿಸ್ಥಿತಿ ಬದಲಾಗಿದೆ. ಗಂಡ-ಹೆಂಡತಿ ಇಬ್ಬರಲ್ಲಿಯೂ ಅತಿಯಾಗಿ 'ನಾನು' ಇರುವುದರಿಂದ ವಿಚ್ಛೇದನಗಳು ಹೆಚ್ಚಾಗುತ್ತಿವೆ. ಕೆಟ್ಟ, ಕಲುಷಿತ, ಹಿಂಸಾ ಸಂಬಂಧಗಳಲ್ಲಿ ಉಳಿಯಬೇಕು ಎಂದು ನಾನು ಹೇಳುವುದಿಲ್ಲ. ಆದರೆ ಮಕ್ಕಳ ಭವಿಷ್ಯವನ್ನು ಗಮನದಲ್ಲಿರಿಸಿಕೊಂಡು ಸಣ್ಣಪುಟ್ಟ ತ್ಯಾಗಗಳ ಮೂಲಕ ವಿವಾಹ ಉಳಿಸಿಕೊಳ್ಳಲು ಯೋಚಿಸಬೇಕು ಎಂದು ಸಲಹೆ ಮಾಡುತ್ತೇನೆ ಎಂದು ಸದ್ಗುರು ಹೇಳಿದರು.

*ಬೇಲೂರು ಶಾಸಕ ಎಚ್.ಕೆ. ಸುರೇಶ್, ಕೊಡಗು ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಅಶೋಕ್ ಆಲೂರು, ಹಾಸನ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ತಾರಾನಾಥ್, ಪ್ರಶಾಂತಿ ಬಾಲಮಂದಿರ ಟ್ರಸ್ಟ್ ಅಧ್ಯಕ್ಷ ಡಾ. ಬಿ.ಎನ್. ನರಸಿಂಹಮೂರ್ತಿ ಉಪಸ್ಥಿತರಿದ್ದರು. ಟಿ.ಸಿ. ಪ್ರವೀಣ್ ಕುಮಾರ್ ನಿರೂಪಿಸಿದರು.*

*ಕಾರ್ಯಕ್ರಮದಲ್ಲಿ ಸಮಾಜಸೇವಕ ಡಾ. ಎಂ.ಸಿ. ರಂಗಸ್ವಾಮಿ ಅವರಿಗೆ 'ಕರ್ನಾಟಕ ಪರಿವರ್ತಕ ಪ್ರಶಸ್ತಿ' ನೀಡಿ ಗೌರವಿಸಲಾಯಿತು. ಸದ್ಗುರು ಶ್ರೀ ಮಧುಸೂದನ ಸಾಯಿ ಅವರನ್ನು ವಿನಯ್ ಗುರೂಜಿ ಹಾಗೂ ಬೇಲೂರು ಶಾಸಕ ಎಚ್.ಕೆ. ಸುರೇಶ್ ಸನ್ಮಾನಿಸಿದರು. ಕಾರ್ಯಕ್ರಮದಲ್ಲಿ ನೂರಾರು ಮಂದಿ ಪಾಲ್ಗೊಂಡಿದ್ದರು.*

# 20 ವರ್ಷ ಜಮೀನಿಗಾಗಿ ಅಲೆದ ಕಾರ್ಗಿಲ್ ಯೋಧ ಆತ್ಮಹತ್ಯೆಗೆ ಯತ್ನ

1ನೇ ಪುಟದಿಂದ...

2004ರಲ್ಲಿ ತಾಲ್ಲೂಕಿನಲ್ಲಿ ಜಮೀನು ಲಭ್ಯವಿಲ್ಲ ಎಂದು ತಿಳಿಸಿ ಶ್ರೀನಿವಾಸಪುರ ತಾಲ್ಲೂಕಿನಲ್ಲಿ ಜಮೀನು ಇರುವುದಾಗಿ ಅಧಿಕಾರಿಗಳು ಪತ್ರ ನೀಡಿದ್ದರು. ಬಳಿಕ 2019-20ರಲ್ಲಿ ಇತರ ಯೋಧರಿಗೆ ಜಮೀನು ಮಂಜೂರು ಮಾಡಿದ್ದರೂ, ತಮಗೆ ಮಾತ್ರ ಮಂಜೂರು ಮಾಡಿಲ್ಲ ಎಂದು ಅವರು ದೂರಿದ್ದಾರೆ. 2020ರಿಂದ ನಿರಂತರವಾಗಿ ಅಧಿಕಾರಿಗಳ ಗಮನಕ್ಕೆ ತಂದರೂ ಸ್ಪಂದನೆ ದೊರೆಯಲಿಲ್ಲ. ಇದರಿಂದ ನೊಂದು ಆತ್ಮಹತ್ಯೆಗೆ ಯತ್ನಿಸಿರುವುದಾಗಿ ಶಿವಾನಂದರೆಡ್ಡಿ ತಿಳಿಸಿದ್ದಾರೆ. ಘಟನೆ ಕುರಿತು ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

# ಕಚ್ಚಾ ತೈಲ ಬೆಲೆ ಏರಿಕೆ, ಚಿನ್ನದ ದರ ಇಳಿಕೆ

1ನೇ ಪುಟದಿಂದ...

ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲೂ ಚಿನ್ನದ ದರ ಇಳಿಕೆಯಾಗಿದೆ. ನ್ಯೂಯಾರ್ಕ್‌ನಲ್ಲಿ ಡಿಸೆಂಬರ್ ಒಪ್ಪಂದದ ಚಿನ್ನದ ಫ್ಯೂಚರ್ಸ್ ಪ್ರತಿ ಔನ್ಸ್‌ಗೆ 46.46 ಡಾಲರ್ ಅಥವಾ ಶೇ.1.06ರಷ್ಟು ಕುಸಿದು 4,349.94 ಡಾಲರ್‌ಗೆ ತಲುಪಿದೆ. ಇದು ಮೂರು ವಾರಗಳಿಗೂ ಅಧಿಕ ಅವಧಿಯಲ್ಲಿನ ಕನಿಷ್ಠ ಮಟ್ಟವಾಗಿದೆ.

ಇರಾನ್-ಅಮೆರಿಕ ನಡುವಿನ ಮಿಲಿಟರಿ ಸಂಘರ್ಷ ತೀವ್ರಗೊಂಡಿರುವುದು ಕಚ್ಚಾ ತೈಲ ಬೆಲೆ ಏರಿಕೆಗೆ ಕಾರಣವಾಗಿದೆ. ಅಮೆರಿಕದ ದಾಳಿಗೆ ಪ್ರತಿಯಾಗಿ ಇರಾನ್ ಬಹ್ರೇನ್, ಕುವೈತ್, ಜೋರ್ಡಾನ್ ಮತ್ತು ಇರಾಕ್‌ನಲ್ಲಿರುವ ಅಮೆರಿಕದ ಸೇನಾ ನೆಲೆಗಳನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಿರುವುದು ಪಶ್ಚಿಮ ಏಷ್ಯಾದಲ್ಲಿ ಉದ್ವಿಗ್ನತೆಯನ್ನು ಹೆಚ್ಚಿಸಿದೆ ಎಂದು ವಿಶ್ಲೇಷಕರು ತಿಳಿಸಿದ್ದಾರೆ.

ಪಶ್ಚಿಮ ಏಷ್ಯಾದ ಸಂಘರ್ಷದಿಂದ ತೈಲ ಬೆಲೆ ಏರಿಕೆಯೊಂದಿಗೆ ಹಣದುಬ್ಬರ ಮತ್ತು ಬಡ್ಡಿದರ ಹೆಚ್ಚಳದ ಆತಂಕವೂ ಹೆಚ್ಚಿದೆ. ಇದರಿಂದ ಚಿನ್ನದ ಮೇಲಿನ ಹೂಡಿಕೆ ಒತ್ತಡಕ್ಕೆ ಒಳಗಾಗಿದೆ ಎಂದು ಚಾಯ್ಸ್ ಬ್ರೋಕಿಂಗ್‌ನ ಸರಕು ಮತ್ತು ಕರೆನ್ಸಿ ವಿಶ್ಲೇಷಕ ಆಮಿರ್ ಮಕ್ಡಾ ಹೇಳಿದ್ದಾರೆ. ಮುದ್ರೆಕ್ಸ್ ವಿಶ್ಲೇಷಕ ಅಕ್ಷತ್ ಸಿದ್ಧಾಂತ್ ಕೂಡ ಸಂಘರ್ಷದ ಪರಿಣಾಮ ಚಿನ್ನದ ದರ ಕಳೆದ ಎರಡು ವಾರಗಳಲ್ಲೇ ಕನಿಷ್ಠ ಮಟ್ಟಕ್ಕೆ ಇಳಿದಿದೆ ಎಂದು ತಿಳಿಸಿದ್ದಾರೆ.

# ಶಾಲಾ ಮೇಲ್ಚಾವಣಿ ಕುಸಿದು 6 ವಿದ್ಯಾರ್ಥಿಗಳಿಗೆ ಗಾಯ

1ನೇ ಪುಟದಿಂದ...

ಘಟನೆಯಲ್ಲಿ ಪ್ರೇಮ್, ರಾಕೇಶ್, ಮಹೇಶ್, ಸುನಿತಾ, ಸತೀಶ್ ಸೇರಿದಂತೆ ಆರು ವಿದ್ಯಾರ್ಥಿಗಳಿಗೆ ಸಣ್ಣಪುಟ್ಟ ಗಾಯಗಳಾಗಿದ್ದು, ಅವರನ್ನು ಬಿಇಒ ವಾಹನದಲ್ಲಿ ಆಸ್ಪತ್ರೆಗೆ ಕರೆದೊಯ್ದು ಚಿಕಿತ್ಸೆ ಕೊಡಿಸಲಾಗಿದೆ.

ಮುಗಳೂಳ್ಳಿ ತಾಂಡಾದ ಸರ್ಕಾರಿ ಶಾಲೆಯಲ್ಲಿ ಒಂದರಿಂದ ಆರನೇ ತರಗತಿವರೆಗೆ 53 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. ಶಾಲೆಯಲ್ಲಿ ಮೂರು ಕೊಠಡಿಗಳಿದ್ದು, ಅವುಗಳ ಪೈಕಿ ಕಟ್ಟಡದ ಹಲವು ಭಾಗಗಳು ಶಿಥಿಲಾವಸ್ಥೆಗೆ ತಲುಪಿವೆ. ಮೇಲ್ಚಾವಣಿಯಲ್ಲಿ ಕಬ್ಬಿಣದ ಸರಳುಗಳು ಕಾಣುವಷ್ಟು ಕಟ್ಟಡ ಹಾಳಾಗಿದ್ದರೂ ಸೂಕ್ತ ಕ್ರಮ ಕೈಗೊಳ್ಳದಿರುವುದಕ್ಕೆ ಪೋಷಕರು ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಶಾಲಾ ಕಟ್ಟಡಕ್ಕೆ ತಾತ್ಕಾಲಿಕ ದುರಸ್ತಿ ಮಾಡುವ ಬದಲು ಶಾಶ್ವತ ದುರಸ್ತಿ ಅಥವಾ ಅಗತ್ಯವಿದ್ದಲ್ಲಿ ಹೊಸ ಕಟ್ಟಡ ನಿರ್ಮಿಸಬೇಕು. ವಿದ್ಯಾರ್ಥಿಗಳ ಸುರಕ್ಷತೆಗೆ ತಕ್ಷಣ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಬೇಕು ಎಂದು ಪೋಷಕರು ಒತ್ತಾಯಿಸಿದ್ದಾರೆ.

ಘಟನೆ ವೇಳೆ ತರಗತಿಯಲ್ಲಿ ವಿದ್ಯಾರ್ಥಿಗಳು ಪಾಠ ಕೇಳುತ್ತಿದ್ದಾಗಲೇ ಮೇಲ್ಚಾವಣಿಯ ಭಾಗ ಕುಸಿದಿದ್ದು, ಕೆಲಕಾಲ ಶಾಲೆಯಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿತ್ತು. ತಕ್ಷಣ ಶಿಕ್ಷಕರು ಹಾಗೂ ಸ್ಥಳೀಯರು ಗಾಯಗೊಂಡ ವಿದ್ಯಾರ್ಥಿಗಳನ್ನು ಹೊರಗೆ ಕರೆತಂದು ಪ್ರಾಥಮಿಕ ನೆರವು ಒದಗಿಸಿದ್ದಾರೆ.

ಮೇಲ್ಚಾವಣಿ ಕುಸಿದಿರುವ ಹಿನ್ನೆಲೆಯಲ್ಲಿ ಶಾಲೆಯ ಉಳಿದ ಕೊಠಡಿಗಳ ಸುರಕ್ಷತೆಯ ಬಗ್ಗೆಯೂ ಆತಂಕ ವ್ಯಕ್ತವಾಗಿದೆ. ಶಿಥಿಲಗೊಂಡಿರುವ ಕಟ್ಟಡದ ಸ್ಥಿತಿಯನ್ನು ಪರಿಶೀಲಿಸಿ, ವಿದ್ಯಾರ್ಥಿಗಳು ಮತ್ತು ಶಿಕ್ಷಕರಿಗೆ ಅಪಾಯವಾಗದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದಾರೆ.

ಶಾಲಾ ಕಟ್ಟಡದ ಶಿಥಿಲಾವಸ್ಥೆ ಕುರಿತು ಈ ಹಿಂದೆಯೇ ಸಂಬಂಧಿಸಿದ ಅಧಿಕಾರಿಗಳ ಗಮನಕ್ಕೆ ತರಲಾಗಿತ್ತು ಎನ್ನಲಾಗಿದ್ದು, ಸೂಕ್ತ ಕ್ರಮ ಕೈಗೊಳ್ಳದಿರುವುದೇ ಘಟನೆಗೆ ಕಾರಣವಾಗಿದೆ ಎಂದು ಪೋಷಕರು ಆರೋಪಿಸಿದ್ದಾರೆ.

# ಭ್ರಷ್ಟ ಕಾಂಗ್ರೆಸ್ ಸರ್ಕಾರದ ವಿರುದ್ಧ 2ನೇ ದಿನದ 'ಬಳ್ಳಾರಿ ಚಲೋ' ಪಾದಯಾತ್ರೆ

● ವಿಕ್ರಮ ವಾಹಿನಿ । ಮಸ್ಕಿ (ರಾಯಚೂರು)


ಭ್ರಷ್ಟ ಕಾಂಗ್ರೆಸ್ ಸರ್ಕಾರದ ವೈಫಲ್ಯಗಳನ್ನು ಖಂಡಿಸಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರ ನೇತೃತ್ವದಲ್ಲಿ ನಡೆಯುತ್ತಿರುವ 'ಬಳ್ಳಾರಿ ಚಲೋ' ಪಾದಯಾತ್ರೆ ಎರಡನೇ ದಿನಕ್ಕೆ ಕಾಲಿಟ್ಟಿದ್ದು, ಗುರುವಾರ ಬೆಳಿಗ್ಗೆ ಮಸ್ಕಿಯ ಸಂತೆಕೆಲ್ಲೂರಿನಿಂದ ಪಾದಯಾತ್ರೆ ಆರಂಭವಾಯಿತು.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಸೇರಿದಂತೆ ಪಕ್ಷದ ಪ್ರಮುಖರು ಹಾಗೂ ನೂರಾರು ಕಾರ್ಯಕರ್ತರು ಪಾದಯಾತ್ರೆಯಲ್ಲಿ ಉತ್ಸಾಹದಿಂದ ಪಾಲ್ಗೊಂಡು ಹೆಜ್ಜೆ ಹಾಕಿದರು. ರಾಜ್ಯ ಸರ್ಕಾರದ ಆಡಳಿತ ವೈಫಲ್ಯ, ಭ್ರಷ್ಟಾಚಾರ ಹಾಗೂ ಜನವಿರೋಧಿ ನೀತಿಗಳ ವಿರುದ್ಧ ಬಿಜೆಪಿ ಹೋರಾಟ ನಡೆಸುತ್ತಿದೆ ಎಂದು ಪಕ್ಷದ ಮುಖಂಡರು ತಿಳಿಸಿದರು.

ಎರಡನೇ ದಿನದ ಪಾದಯಾತ್ರೆಯಲ್ಲಿ ಮಾಜಿ ಸಚಿವ ಬಿ. ಶ್ರೀರಾಮುಲು, ಶಾಸಕ ಗಾಲಿ ಜನಾರ್ಧನ ರೆಡ್ಡಿ, ವಿಧಾನ ಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್ ಸೇರಿದಂತೆ ಸಂಸದರು, ಶಾಸಕರು, ವಿಧಾನ ಪರಿಷತ್ ಸದಸ್ಯರು, ರಾಜ್ಯ ಪದಾಧಿಕಾರಿಗಳು, ಜಿಲ್ಲಾ ಅಧ್ಯಕ್ಷರು ಹಾಗೂ ವಿವಿಧ ಜಿಲ್ಲೆಗಳ ಬಿಜೆಪಿ ಕಾರ್ಯಕರ್ತರು ಭಾಗವಹಿಸಲಿದ್ದಾರೆ.

ಪಾದಯಾತ್ರೆಯ ಹಿನ್ನೆಲೆಯಲ್ಲಿ ಮಸ್ಕಿ ಸುತ್ತಮುತ್ತ ಬಿಜೆಪಿ ಕಾರ್ಯಕರ್ತರಲ್ಲಿ ಉತ್ಸಾಹ ಕಂಡುಬಂದಿದ್ದು, ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ಪ್ರತಿಭಟನೆ ನಡೆಸಿದರು. ಪಾದಯಾತ್ರೆಯು ಮುಂದಿನ ಹಂತದತ್ತ ಸಾಗುತ್ತಿದ್ದಂತೆ ಕಾರ್ಯಕರ್ತರಲ್ಲಿ ಉತ್ಸಾಹ ಮತ್ತಷ್ಟು ಹೆಚ್ಚಾಗಿದ್ದು, ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

# 300 ಕೋಟಿ ಗಡಿ ದಾಟಿದ 'ಟಾಕ್ಸಿಕ್'; ಗಳಿಕೆಯಲ್ಲಿ ಇಳಿಕೆ



● ವಿಕ್ರಮ ವಾಹಿನಿ । ಬೆಂಗಳೂರು

ಯಶ್ ಅಭಿನಯದ 'ಟಾಕ್ಸಿಕ್: ಎ ಫೇರಿ ಟೇಲ್ ಫಾರ್ ಗ್ರೋನ್-ಅಪ್ಸ್' ಚಿತ್ರ ವಿಶ್ವಾದ್ಯಂತ 300 ಕೋಟಿ ರೂ. ಗಡಿ ದಾಟಿದ್ದರೂ, ಬಿಡುಗಡೆಯಾದ ಮೊದಲ ವಾರದಲ್ಲಿ ಚಿತ್ರದ ಗಳಿಕೆ ದಿನದಿಂದ ದಿನಕ್ಕೆ ಇಳಿಕೆಯಾಗುತ್ತಿದೆ. ಮಿಶ್ರ ಪ್ರತಿಕ್ರಿಯೆ ಹಾಗೂ ಆರಂಭಿಕ ನಿರೀಕ್ಷೆಗಿಂತ ಕಡಿಮೆಯಾದ ಪ್ರೇಕ್ಷಕರ ಸ್ಪಂದನೆ ಕಲೆಕ್ಷನ್ ಮೇಲೆ ಪರಿಣಾಮ ಬೀರಿದೆ ಎನ್ನಲಾಗಿದೆ.

ಚಿತ್ರದ 7ನೇ ದಿನವಾದ ಮಂಗಳವಾರ ರೂ 9.25 ಕೋಟಿ ಗ್ರಾಸ್ ಗಳಿಕೆ ದಾಖಲಿಸಿದ್ದು, ರೂ 7.85 ಕೋಟಿ ನೆಟ್ ಕಲೆಕ್ಷನ್ ಮಾಡಿದೆ ಎಂದು ಉದ್ಯಮ ವಿಶ್ಲೇಷಣಾ ಸಂಸ್ಥೆ ಸ್ಯಾಕ್ನಿಲ್ಕ್ ಮಾಹಿತಿ ನೀಡಿದೆ. ಏಳು ದಿನಗಳಲ್ಲಿ ಚಿತ್ರ ಭಾರತದಲ್ಲಿ ರೂ 274.25 ಕೋಟಿ ಗ್ರಾಸ್, ರೂ 229.60 ಕೋಟಿ ನೆಟ್ ಹಾಗೂ ವಿದೇಶದಲ್ಲಿ ರೂ 40.75 ಕೋಟಿ ಗಳಿಸಿದ್ದು, ವಿಶ್ವಾದ್ಯಂತ ಒಟ್ಟು ರೂ 315 ಕೋಟಿ ಕಲೆಕ್ಷನ್ ಮಾಡಿದೆ.

ಬಿಡುಗಡೆಯ ಮೊದಲ ದಿನವೇ 'ಟಾಕ್ಸಿಕ್' ಭಾರತದಲ್ಲಿ ರೂ 101.10 ಕೋಟಿ ನೆಟ್ ಗಳಿಸುವ ಮೂಲಕ ಭರ್ಜರಿ ಆರಂಭ ಕಂಡಿತ್ತು. ಆದರೆ 2ನೇ ದಿನ ರೂ 37.65 ಕೋಟಿ, 3ನೇ ದಿನ ರೂ 27.20 ಕೋಟಿ, ಶನಿವಾರ ರೂ 25.15 ಕೋಟಿ ಹಾಗೂ ಭಾನುವಾರ ರೂ 23 ಕೋಟಿ ನೆಟ್ ಕಲೆಕ್ಷನ್ ಮಾಡಿದೆ. ವಾರಾಂತ್ಯದಲ್ಲೂ ನಿರೀಕ್ಷಿತ ಮಟ್ಟದ ಏರಿಕೆ ಕಾಣದಿರುವುದು ಚಿತ್ರತಂಡಕ್ಕೆ ನಿರಾಸೆ ಮೂಡಿಸಿದೆ. ಇದೇ ವೇಳೆ, ಮೊದಲ ದಿನದ ಗಳಿಕೆಯಲ್ಲಿ 'ಟಾಕ್ಸಿಕ್' ಗಮನಾರ್ಹ ದಾಖಲೆ ನಿರ್ಮಿಸಿದೆ. ರೂ 101.10 ಕೋಟಿ ನೆಟ್ ಗಳಿಕೆಯೊಂದಿಗೆ ದೇಶದ ಅತಿ ದೊಡ್ಡ ಓಪನರ್‌ಗಳ ಪಟ್ಟಿಯಲ್ಲಿ 6ನೇ ಸ್ಥಾನ ಪಡೆದಿದೆ. 'ಪುಷ್ಪ 2', 'ಆರ್‌ಆರ್‌ಆರ್', 'ಬಾಹುಬಲಿ 2', 'ಕೆಜಿಎಫ್ ಅಧ್ಯಾಯ 2' ಹಾಗೂ 'ಧುರಂಧರ್ 2' ನಂತರ 'ಟಾಕ್ಸಿಕ್' ಸ್ಥಾನ ಪಡೆದಿದೆ.

'ಕೆಜಿಎಫ್ ಅಧ್ಯಾಯ 2' ಬಳಿಕ ಮೊದಲ ದಿನವೇ ರೂ 100 ಕೋಟಿಗೂ ಅಧಿಕ ಗಳಿಸಿದ ಯಶ್ ಅವರ ಎರಡನೇ ಚಿತ್ರ ಎಂಬ ಹೆಗ್ಗಳಿಕೆಯನ್ನೂ 'ಟಾಕ್ಸಿಕ್' ಪಡೆದುಕೊಂಡಿದೆ. ಹಿಂದಿ ಮಾರುಕಟ್ಟೆಯಲ್ಲಿ ರೂ55 ಕೋಟಿ ನೆಟ್ ಗಳಿಕೆಯೊಂದಿಗೆ ಯಶ್ ಅವರ ಅತಿ ದೊಡ್ಡ ಓಪನರ್ ಆಗಿದೆ.

ಗೀತು ಮೋಹನ್‌ದಾಸ್ ನಿರ್ದೇಶನದ ಚಿತ್ರದಲ್ಲಿ ಯಶ್ ಜತೆಗೆ ಕಿಯಾರಾ ಅಡ್ವಾಣಿ, ನಯನತಾರಾ, ತಾರಾ ಸುತಾರಿಯಾ, ಹುಮಾ ಖುರೇಷಿ ಹಾಗೂ ರುಕ್ಮಿಣಿ ವಸಂತ್ ನಟಿಸಿದ್ದಾರೆ. ಕನ್ನಡ ಮತ್ತು ಇಂಗ್ಲಿಷ್‌ನಲ್ಲಿ ಚಿತ್ರೀಕರಿಸಲಾದ ಚಿತ್ರವು ಮಲಯಾಳಂ, ತಮಿಳು ಹಾಗೂ ತೆಲುಗು ಭಾಷೆಗಳಲ್ಲೂ ಬಿಡುಗಡೆಯಾಗಿದೆ. ಚಿತ್ರಕ್ಕೆ 'ಎ' ಪ್ರಮಾಣಪತ್ರ ನೀಡಲಾಗಿದ್ದು, 3 ಗಂಟೆ 14 ನಿಮಿಷಗಳ ಅವಧಿಯನ್ನು ಹೊಂದಿದೆ. ಚಿತ್ರದ ಮುಂದಿನ ದಿನಗಳ ಗಳಿಕೆ ಪ್ರಮುಖವಾಗಿದ್ದು, ವಾರದ ದಿನಗಳಲ್ಲಿ ಪ್ರೇಕ್ಷಕರ ಪ್ರತಿಕ್ರಿಯೆ ಹೇಗಿರಲಿದೆ ಎಂಬುದರ ಮೇಲೆ ಒಟ್ಟು ಕಲೆಕ್ಷನ್ ಅವಲಂಬಿತವಾಗಿದೆ. ಸದ್ಯ 300 ಕೋಟಿ ರೂ. ಗಡಿ ದಾಟಿರುವ ಚಿತ್ರ ಮುಂದಿನ ದಿನಗಳಲ್ಲಿ ಮತ್ತಷ್ಟು ಗಳಿಕೆ ಮಾಡುವ ನಿರೀಕ್ಷೆಯಲ್ಲಿದ್ದು, ಕಲೆಕ್ಷನ್ ಏರಿಕೆಯಾಗುತ್ತದೆಯೇ ಅಥವಾ ಇಳಿಕೆಯ ಪ್ರವೃತ್ತಿ ಮುಂದುವರಿಯುತ್ತದೆಯೇ ಎಂಬುದು ಗಮನ ಸೆಳೆದಿದೆ.

# ‘ಸಂಸದೀಯ ಪರಂಪರೆಗೆ ಎಳ್ಳುನೀರು ಬಿಟ್ಟ ಸ್ಪೀಕರ್’

● ವಿಕ್ರಮ ವಾಹಿನಿ । ಬೆಂಗಳೂರು

ಸಾಂವಿಧಾನಿಕ ಹುದ್ದೆಯಲ್ಲಿರುವ ವಿಧಾನಸಭಾಧ್ಯಕ್ಷರು ಕಾಂಗ್ರೆಸ್ ಪಕ್ಷದ ರಾಷ್ಟ್ರೀಯ ನಾಯಕರಾದ ಮಲ್ಲಿಕಾರ್ಜುನ ಖರ್ಗೆ ಹಾಗೂ ರಣದೀಪ್ ಸಿಂಗ್ ಸುರ್ಜೆವಾಲಾ ಅವರನ್ನು ಭೇಟಿ ಮಾಡುವ ಮೂಲಕ ನಿಷ್ಪಕ್ಷಪಾತತೆ ಮತ್ತು ಸಂಸದೀಯ ಪರಂಪರೆಗೆ ಎಳ್ಳುನೀರು ಬಿಟ್ಟಿದ್ದಾರೆ ಎಂದು ಮಾಜಿ ಸಚಿವ ವಿ. ಸುನೀಲ್ ಕುಮಾರ್ ಬೇಸರ ವ್ಯಕ್ತಪಡಿಸಿದ್ದಾರೆ.

ಸಭಾಧ್ಯಕ್ಷರು ಸದನದ ಅಧ್ಯಕ್ಷರು; ಅವರು ಯಾವುದೇ ಒಂದು ಪಕ್ಷದ ಅಧ್ಯಕ್ಷರಲ್ಲ. ಅವರು ಆಡಳಿತ ಪಕ್ಷಕ್ಕೂ ಸೇರಿದವರಲ್ಲ, ಪ್ರತಿಪಕ್ಷಕ್ಕೂ ಸೇರಿದವರಲ್ಲ ಇಡೀ ವಿಧಾನಸಭೆಯ ಗೌರವ ರಕ್ಷಕರು. ಇಂತಹ ಸಾಂವಿಧಾನಿಕ ಹುದ್ದೆಯಲ್ಲಿರುವ ವ್ಯಕ್ತಿ ಸಕ್ರಿಯ ರಾಜಕೀಯ ನಾಯಕರನ್ನು ಅವರ ಮನೆಗೆ ಹೋಗಿ ಭೇಟಿ ಮಾಡಿರುವುದು ಆಕ್ಷೇಪಾರ್ಹ



ಎಂದಿದ್ದಾರೆ.

ಕಾಂಗ್ರೆಸ್ ಪಕ್ಷದ ಲೆಟರ್‌ಹೆಡ್‌ನಲ್ಲಿ ಸಭಾಧ್ಯಕ್ಷರಾಗಿ ಆಯ್ಕೆಯಾದ ಜಿ.ಎಸ್ .ಪಾಟೀಲರು ಈ ಭೇಟಿಗೆ ಮುನ್ನ ಸ್ಪೀಕರ್ ಪೀಠದಲ್ಲಿ ಕುಳಿತ ಮಹಾನ್ ವ್ಯಕ್ತಿಗಳನ್ನು ಒಮ್ಮೆ ಸ್ಮರಿಸಿಕೊಳ್ಳಬೇಕಿತ್ತು. ಕಾಂಗ್ರೆಸ್ ನವರೇ ಆದರೂ ಈ ಪೀಠ ಏರಿದ ನಂತರ ಅವರು ಹೇಗೆ ನಿಸ್ಪೃಹರಾಗಿದ್ದರು ಎಂಬ ಬಗ್ಗೆ ಯೋಚಿಸಬೇಕಿತ್ತು. ಕಾಗೋಡು ತಿಮ್ಮಪ್ಪನವರು ಸ್ಪೀಕರ್ ಆಗಿದ್ದ ಸಂದರ್ಭದಲ್ಲಿ ರಾಜ್ಯ ಕಾಂಗ್ರೆಸ್ ಉಸ್ತುವಾರಿಯಾಗಿದ್ದ ದಿಗ್ವಿಜಯ್ ಸಿಂಗ್ ಅವರನ್ನು " ದಿಗ್ವಿಜಯ್ ಸಿಂಗ್ ಯಾರು ?" ಎಂದು ಪ್ರಶ್ನಿಸಿದ್ದನ್ನು ಸ್ಮರಿಸಿಕೊಂಡಿದ್ದರೂ ನೀವು ರಾಜ್ಯ ಉಸ್ತುವಾರಿ ಸುರ್ಜೇವಾಲಾರನ್ನು ಭೇಟಿ ಮಾಡುತ್ತಿರಲಿಲ್ಲ ಎಂದು ಟೀಕಿಸಿದ್ದಾರೆ.

ರಾಷ್ಟ್ರೀಯ ಕಾಂಗ್ರೆಸ್ ನಾಯಕರನ್ನು ಸಭಾಧ್ಯಕ್ಷರು ಭೇಟಿ ಮಾಡಿರುವುದು ‘ಸಭಾಧ್ಯಕ್ಷರ ಹುದ್ದೆ ಪಕ್ಷಾತೀತವೇ?’ ಎಂಬ ಗಂಭೀರ ಪ್ರಶ್ನೆಯನ್ನು ಹುಟ್ಟುಹಾಕಿದೆ. ಸಾಂವಿಧಾನಿಕ ಹುದ್ದೆ ಎಂದರೆ ಅಧಿಕಾರದ ಅಲಂಕಾರವಲ್ಲ. ಸಭಾಧ್ಯಕ್ಷರು ಪಕ್ಷದ ರಾಜಕೀಯ ಚಟುವಟಿಕೆಗಳಿಂದ ಅಂತರ ಕಾಯ್ದುಕೊಳ್ಳುವುದು ನಮ್ಮ ಸಂಸದೀಯ ಸಂಪ್ರದಾಯ. ಆದರೆ ಕರ್ನಾಟಕದಲ್ಲಿ ಆ ಸಂಪ್ರದಾಯಕ್ಕೆ ಎಳ್ಳುನೀರು ಬಿಡುವ ಕೆಲಸ ನಡೆಯುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

ಕಾಂಗ್ರೆಸ್ ಹೈಕಮಾಂಡ್‌ಗೆ ಸಭಾಧ್ಯಕ್ಷರನ್ನು ಪಕ್ಷದ ನಾಯಕರಂತೆ ಕಾಣುವ ಮನಸ್ಥಿತಿ ಇದ್ದರೆ ಅದು ಅವರ ತಪ್ಪು. ಆದರೆ ಸಭಾಧ್ಯಕ್ಷರು ಕೂಡ ತಮ್ಮ ಹುದ್ದೆಯ ಘನತೆಯನ್ನು ಅರಿತುಕೊಳ್ಳಬೇಕಿತ್ತು. ಖರ್ಗೆ, ಸುರ್ಜೆವಾಲಾ ಅವರನ್ನು ಭೇಟಿ ಮಾಡುವ ಮೂಲಕ ಸಭಾಧ್ಯಕ್ಷರು ಯಾರಿಗೆ ಸಂದೇಶ ನೀಡಿದ್ದಾರೆ? ಎಂದು ಪ್ರಶ್ನಿಸಿದ್ದಾರೆ.

ವಿಧಾನಸಭೆಯ ಪೀಠದ ಮೇಲೆ ಕುಳಿತಿರುವ ವ್ಯಕ್ತಿ ಪಕ್ಷದ ಪರವಾಗಿ ಕಾಣಿಸಿಕೊಂಡರೆ, ನಾಳೆ ಸದನದಲ್ಲಿ ಸಭಾಧ್ಯಕ್ಷರು ನೀಡುವ ತೀರ್ಪು, ಕೈಗೊಳ್ಳುವ ನಿರ್ಧಾರ ಮತ್ತು ನಡೆಸುವ ಕಲಾಪದ ಮೇಲಿನ ನಂಬಿಕೆಯನ್ನು ಹೇಗೆ ಉಳಿಸಿಕೊಳ್ಳಲು ಸಾಧ್ಯ? ನಿಮ್ಮ ಪ್ರತಿ ನಿಲುವನ್ನು ಪಕ್ಷಪಾತದ ದೃಷ್ಟಿಯಿಂದ ನೋಡಬೇಕಾಗುವುದಿಲ್ಲವೇ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

## ಶಾಲಾ ಮಕ್ಕಳ ಸುರಕ್ಷತೆಗೆ ಜಾಗೃತಿ: 600ಕ್ಕೂ ಹೆಚ್ಚು ಮಂದಿ ಭಾಗಿ

● ವಿಕ್ರಮ ವಾಹಿನಿ । ಮಂಗಳೂರು

ಶಾಲಾ ಮಕ್ಕಳನ್ನು ಕರೆದೊಯ್ಯುವ ಬಸ್‌ಗಳ ಸುರಕ್ಷತೆ ಕುರಿತು ಮಂಗಳೂರು ನಗರ ಸಂಚಾರ ಪೊಲೀಸರು ಬುಧವಾರ ಪುರಭವನದಲ್ಲಿ ವಿಶೇಷ ಜಾಗೃತಿ ಕಾರ್ಯಕ್ರಮ ಆಯೋಜಿಸಿದ್ದರು. ನಗರದ ವಿವಿಧ ಶಾಲೆಗಳ ಬಸ್ ಚಾಲಕರು, ನಿರ್ವಾಹಕರು, ಮಾಲೀಕರು, ಮ್ಯಾನೇಜರ್‌ಗಳು ಹಾಗೂ ಆಡಳಿತ ಮಂಡಳಿಯ ಸುಮಾರು 600 ಮಂದಿ ಭಾಗವಹಿಸಿದ್ದರು.

ಶಾಲಾ ವಾಹನಗಳ ಸುರಕ್ಷತಾ ಮಾನದಂಡ, ಸಂಚಾರ ನಿಯಮಗಳು, ರಸ್ತೆ ಸುರಕ್ಷತೆ ಹಾಗೂ ಮಕ್ಕಳ ಸುರಕ್ಷತೆಗೆ ಸಂಬಂಧಿಸಿದ ಚಾಲಕರು ಮತ್ತು ನಿರ್ವಾಹಕರ ಜವಾಬ್ದಾರಿಗಳ ಕುರಿತು ಅಧಿಕಾರಿಗಳು ಮಾಹಿತಿ ನೀಡಿದರು. ಶಾಲಾ ಆಡಳಿತ ಮಂಡಳಿಗಳು ವಾಹನಗಳ ದಾಖಲೆ, ಫಿಟ್ನೆಸ್, ವಿಮೆ, ಅಗ್ನಿಶಾಮಕ ಉಪಕರಣ, ಸ್ಪೀಡ್ ಗವರ್ನರ್ ಸೇರಿದಂತೆ ಅಗತ್ಯ ಸುರಕ್ಷತಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಪರಿಶೀಲಿಸುವಂತೆ ಸೂಚಿಸಲಾಯಿತು.

ಶಾಲಾ ವಾಹನಗಳು ಗರಿಷ್ಠ 40 ಕಿ.ಮೀ. ವೇಗದಲ್ಲಿ ಸಂಚರಿಸಬೇಕು. ನಿಯಮ ಉಲ್ಲಂಘಿಸುವ ಚಾಲಕರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಲಾಯಿತು.

## ಪಾದಚಾರಿ ಮಾರ್ಗ ಒತ್ತುವರಿ ತೆರವು: 299.31 ಕಿ.ಮೀ. ರಸ್ತೆ ಅತಿಕ್ರಮಣ ಮುಕ್ತ



● ವಿಕ್ರಮ ವಾಹಿನಿ । ಬೆಂಗಳೂರು

ಪಾದಚಾರಿಗಳಿಗೆ ಸುರಕ್ಷಿತ, ಸುಗಮ ಹಾಗೂ ಅಡೆತಡೆಯಿಲ್ಲದ ಸಂಚಾರ ವ್ಯವಸ್ಥೆ ಕಲ್ಪಿಸುವ ಉದ್ದೇಶದಿಂದ ಬೆಂಗಳೂರು ಉತ್ತರ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಪಾದಚಾರಿ ಮಾರ್ಗ ಒತ್ತುವರಿ ತೆರವು ಕಾರ್ಯಾಚರಣೆ ಮುಂದುವರಿದಿದೆ. ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರ ನಿರ್ದೇಶನ ಹಾಗೂ ಪಾಲಿಕೆ ಆಯುಕ್ತ ಪೊಮ್ಮಲ ಸುನಿಲ್ ಕುಮಾರ್ ಅವರ ಮಾರ್ಗದರ್ಶನದಲ್ಲಿ ನಡೆಯುತ್ತಿರುವ ಕಾರ್ಯಾಚರಣೆಯಲ್ಲಿ ಜುಲೈ 1ರಿಂದ ಸೆಪ್ಟೆಂಬರ್ 2ರವರೆಗೆ ಒಟ್ಟು 299.31 ಕಿ.ಮೀ. ಪಾದಚಾರಿ ಮಾರ್ಗಗಳನ್ನು ಅತಿಕ್ರಮಣ ಮುಕ್ತಗೊಳಿಸಲಾಗಿದೆ.

ಸೆಪ್ಟೆಂಬರ್ 2ರಂದು ವಿದ್ಯಾರಣ್ಯಪುರ ಹಾಗೂ ಹೆಬ್ಬಾಳ ವಿಭಾಗಗಳಲ್ಲಿ ಒಟ್ಟು 4.24 ಕಿ.ಮೀ. ಪಾದಚಾರಿ ಮಾರ್ಗದ ಒತ್ತುವರಿ ತೆರವುಗೊಳಿಸಲಾಯಿತು. ವಿದ್ಯಾರಣ್ಯಪುರ ವಿಭಾಗದಲ್ಲಿ ಎಂ.ಎಸ್. ಪಾಳ್ಯ ರಸ್ತೆ ವೃತ್ತದಿಂದ ಜುಮ್ಮಾ ಮಸೀದಿ ರಸ್ತೆವರೆಗೆ 1.60 ಕಿ.ಮೀ. ಹಾಗೂ ಎಂ.ಎಸ್. ಪಾಳ್ಯ ವೃತ್ತದಿಂದ ಸಿಂಗಾಪುರದವರೆಗೆ ಉಳಿದ 0.70 ಕಿ.ಮೀ. ಮಾರ್ಗದಲ್ಲಿ ಕಾರ್ಯಾಚರಣೆ ನಡೆಸಲಾಯಿತು.

ಇಂದಿನ ಕಾರ್ಯಾಚರಣೆಯಲ್ಲಿ ಎರಡು ಜೆಸಿಬಿ, ನಾಲ್ಕು ಟ್ರ್ಯಾಕ್ಟರ್, ಒಂದು ಇತರೆ ಯಂತ್ರ ಹಾಗೂ 16 ಸಿಬ್ಬಂದಿ ಭಾಗವಹಿಸಿದ್ದರು. ಒಟ್ಟು 6 ಅಂಗಡಿಗಳು ಮತ್ತು ಪೆಟ್ಟಿಗೆ ಅಂಗಡಿಗಳು, 10 ತಳ್ಳುವ ಗಾಡಿಗಳು, 3 ಎಸಿ ಶೀಟ್‌ಗಳು ಹಾಗೂ ಮೇಲ್ಕಟ್ಟುಗಳು, 52 ಮೆಟ್ಟಿಲುಗಳು ಮತ್ತು ಯಾರ್ಂಪ್‌ಗಳು, 8 ಜಾಹೀರಾತು ಕಂಬಗಳು ಹಾಗೂ ನಾಮಫಲಕಗಳನ್ನು ತೆರವುಗೊಳಿಸಲಾಯಿತು. ಈ ಅವಧಿಯಲ್ಲಿ 695 ಅಂಗಡಿಗಳು ಮತ್ತು ಪೆಟ್ಟಿಗೆ ಅಂಗಡಿಗಳು, 920 ತಳ್ಳುವ ಗಾಡಿಗಳು, 1,997 ಎಸಿ ಶೀಟ್‌ಗಳು ಹಾಗೂ ಮೇಲ್ಕಟ್ಟುಗಳು, 1,806 ಮೆಟ್ಟಿಲುಗಳು ಮತ್ತು ಯಾರ್ಂಪ್‌ಗಳು, 1,858 ಜಾಹೀರಾತು ಕಂಬಗಳು ಹಾಗೂ ನಾಮಫಲಕಗಳು ತೆರವುಗೊಳಿಸಲಾಗಿದೆ.

## ವಿಧಾನ ಸಭೆ ವಿಸರ್ಜಿಸಿ ಚುನಾವಣೆ ಎದುರಿಸಿ: ಬಿ.ವೈ.ವಿ ಸವಾಲು

● ವಿಕ್ರಮ ವಾಹಿನಿ । ಮಸ್ಕಿ (ರಾಯಚೂರು)

ದಲಿತರಿಗೆ, ಹಿಂದುಳಿದ ವರ್ಗಗಳಿಗೆ ಈ ಸರ್ಕಾರ ನ್ಯಾಯ ಕೊಡಲು ಸಾಧ್ಯವಾಗದಿದ್ದರೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ವಿಧಾನಸಭೆ ವಿಸರ್ಜಿಸಿ ಚುನಾವಣೆ ಎದುರಿಸಲಿ. ಆಗ ಜನರೇ ತೀರ್ಮಾನ ಮಾಡುತ್ತಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಸವಾಲು ಹಾಕಿದ್ದಾರೆ.

‘ಬಳ್ಳಾರಿ ಚಲೋ’ ಪಾದಯಾತ್ರೆ ಸಂದರ್ಭದಲ್ಲಿ ಮಾಧ್ಯಮಗಳೊಂದಿಗೆ ಬುಧವಾರ ಮಾತನಾಡಿದ ಅವರು, ದಲಿತರ ಹೆಸರು ಹೇಳಿಕೊಂಡು ಅಧಿಕಾರಕ್ಕೆ ಬಂದ ಕಾಂಗ್ರೆಸ್ ಕಳೆದ ಮೂರುವರೆ ವರ್ಷದಲ್ಲಿ ಅವರಿಗೆ ಅನ್ಯಾಯ ಮಾಡುತ್ತಲೇ ಬಂದಿದೆ.

ವಾಲ್ಮೀಕಿ ನಿಗಮದಲ್ಲಿ ರೂ. 187 ಕೋಟಿ ಹಗರಣ ಮಾಡಿದರು. ಮೀಸಲಾತಿಯನ್ನು ಸರಿಯಾಗಿ ಅನುಷ್ಠಾನ ಮಾಡಲಿಲ್ಲ. ಮೀಸಲಾತಿ ನೆಪ ಹೇಳಿಕೊಂಡು ಯುವಕರಿಗೆ ಉದ್ಯೋಗ ನೀಡಲಿಲ್ಲ. ಕೇವಲ ದಲಿತರು ಮಾತ್ರವಲ್ಲ ಎಲ್ಲಾ ಸಮುದಾಯವನ್ನು ಸಂಪೂರ್ಣವಾಗಿ ನಿರ್ಲಕ್ಷ್ಯ ಮಾಡಿದರು. ಒಟ್ಟಾರೆ ಅಖಂಡ ಕರ್ನಾಟಕವನ್ನು ಕಡೆಗಣಿಸಿದೆ ಎಂದು ಆಪಾದಿಸಿದರು.

ಡಿಕೆಶಿ ಸರ್ಕಾರದ ಇನ್ನೂ ಎರಡು ಮೂರು



ವಿಕೆಟ್‌ಗಳು ಬೀಳಲು ತಯಾರು ಆದಂತೆ ಇದೆ. ಈ ಎಲ್ಲರಿಗೂ ಭ್ರಷ್ಟಾಚಾರ ಉರುಳಾಗಲಿದೆ. ಲಜ್ಜೆಗೆಟ್ಟ ಕಾಂಗ್ರೆಸ್‌ನವರಿಗೆ ಮಾನ, ಮರ್ಯಾದೆ ಏನೂ ಇಲ್ಲ. ಆನೆ ನಡೆದಿದ್ದೇ ದಾರಿ ಎಂದುಕೊಂಡಿದ್ದವರ ವಿರುದ್ಧ ಬಿಜೆಪಿ ಬೀದಿಗಿಳಿದು ಹೋರಾಟ ಮಾಡಲಾರಂಭಿಸಿದೆ. ನಮ್ಮೊಂದಿಗೆ ರೈತರು ಪ್ರತಿಭಟನೆ ಮಾಡುತ್ತಿದ್ದಾರೆ. ಅನ್ನದಾತರ ಸಮಸ್ಯೆಗಳನ್ನು ಆಲಿಸುವ ಕನಿಷ್ಠ ಸೌಜನ್ಯವನ್ನೂ ಸಿಎಂ ತೋರುತ್ತಿಲ್ಲ ಎಂದು ದೂರಿದರು.

ಬಿಜೆಪಿ ವತಿಯಿಂದ ರಾಜ್ಯದಲ್ಲಿ ಈಗಾಗಲೇ ಬರ ವೀಕ್ಷಣೆ ಮಾಡಿದ್ದೇವೆ. ಈವರೆಗೆ ಬರಗಾಲ ಪರಿಶೀಲನೆಗೆ ಹೋಗದ ಸಿಎಂ ಮತ್ತು ಡಿಸಿಎಂ ಈಗ ಬರ ವೀಕ್ಷಣೆ ಆರಂಭಿಸಿದ್ದಾರೆ. ಎ.ಸಿ. ಹಾಲಿನಲ್ಲೇ ಕುಳಿತಿದ್ದವರು ಈಗ ಅನಿವಾರ್ಯವಾಗಿ ರೈತರ ಸಮಸ್ಯೆ ಆಲಿಸಲು ಮುಂದಾಗಿದ್ದಾರೆ. ಇವರು ಹೀಗೆ ಮಾಡಲು ನಮ್ಮ ಹೋರಾಟವೇ ಕಾರಣ ಎಂದು ವಿಶ್ಲೇಷಿಸಿದರು.

ರಾಯಚೂರು ಭಾಗದ ಶಾಸಕರ ಸಭೆಯನ್ನು ಸಿಎಂ ಕರೆದಿದ್ದಾರಂತೆ. ಈ ಸಭೆ ರೈತರ ಸಮಸ್ಯೆ ಅರಿಯಲು ಅಲ್ಲ. ಬದಲಿಗೆ ಬಿಜೆಪಿ ಇದ್ದಾಗ ಏನೇನು ಹಗರಣ ಆಗಿದೆ ಅದನ್ನು ತಿಳಿಯಲು ಅಂತೆ. ಮೂರು ವರ್ಷದಿಂದ ಅಧಿಕಾರದಲ್ಲಿದ್ದಾಗ ನೀವೇನು ಕತ್ತೆ ಕಾಯುತ್ತಿದ್ದರೇ.

ಇಂತಹ ಬೆದರಿಕೆ, ಧಮ್ಕಿಗೆ ನಾವು ಹೆದರಲ್ಲ ಎಂದು ಸವಾಲು ಹಾಕಿದರು. ಅದು ವಾಸ್ತವಿಕ ಸತ್ಯ. ಲಂಚ ಕೊಡದೆ ಏನೂ ಆಗಲ್ಲ. ಈಗ ಕೇವಲ 101 ತಾಲೂಕುಗಳನ್ನು ಸರ್ಕಾರ ಬರಪೀಡಿತ ಎಂದು ಘೋಷಣೆ ಮಾಡಿದ್ದಾರೆ. ಇನ್ನೂ ಹಲವು ತಾಲೂಕುಗಳು ಬರಪೀಡಿತವಾಗಿವೆ. ಅವುಗಳನ್ನೂ ಬರಪೀಡಿತ ಎಂದು ಘೋಷಣೆ ಮಾಡಲು ರೈತರು ಲಂಚ ಕೊಡಬೇಕಾದ ಸ್ಥಿತಿ ಬಂದಿದೆ ಎಂದು ವ್ಯಂಗ್ಯವಾಡಿದರು.

## 14 ಜಿಲ್ಲೆಗಳಲ್ಲಿ ಧಾರಾಕಾರ ಮಳೆ ನಿರೀಕ್ಷೆ

● ವಿಕ್ರಮ ವಾಹಿನಿ । ಬೆಂಗಳೂರು

ನೈಋತ್ಯ ಮುಂಗಾರು ಚುರುಕುಗೊಂಡಿರುವ ಹಿನ್ನೆಲೆಯಲ್ಲಿ ಸೆಪ್ಟೆಂಬರ್ ಆರಂಭದಲ್ಲೇ ಕರಾವಳಿ ಹಾಗೂ ಮಲೆನಾಡು ಭಾಗಗಳಲ್ಲಿ ಭಾರೀ ಮಳೆಯಾಗುತ್ತಿದೆ. ಮುಂದಿನ ಮೂರು ದಿನಗಳ ಕಾಲ ರಾಜ್ಯದ 14 ಜಿಲ್ಲೆಗಳಲ್ಲಿ ಧಾರಾಕಾರ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಕರಾವಳಿಯ ಉಡುಪಿ, ಉತ್ತರ ಕನ್ನಡ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದ್ದು, ಗಾಳಿಯ ವೇಗವೂ ಹೆಚ್ಚಾಗಲಿದೆ. ಹೀಗಾಗಿ ಮೀನುಗಾರರು ಸಮುದ್ರಕ್ಕೆ ಇಳಿಯುವಾಗ ಮುನ್ನೆಚ್ಚರಿಕೆ ವಹಿಸುವಂತೆ ಇಲಾಖೆ ಸೂಚಿಸಿದೆ.

ಮಲೆನಾಡಿನ ಶಿವಮೊಗ್ಗ, ಚಿಕ್ಕಮಗಳೂರು, ಕೊಡಗು ಹಾಗೂ ಹಾಸನ ಜಿಲ್ಲೆಗಳಲ್ಲಿ ಉತ್ತಮ ಮಳೆಯಾಗಲಿದೆ. ಉತ್ತರ ಒಳನಾಡಿನ ಗದಗ, ಬಳ್ಳಾರಿ, ಹಾವೇರಿ, ಬಾಗಲಕೋಟೆ ಹಾಗೂ ಧಾರವಾಡ ಜಿಲ್ಲೆಗಳಲ್ಲಿಯೂ ಮಳೆಯ ಪ್ರಮಾಣ ಹೆಚ್ಚಾಗುವ ಸಾಧ್ಯತೆ ಇದೆ.

ರಾಜಧಾನಿ ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ಮೋಡ ಕವಿದ ವಾತಾವರಣ ಮುಂದುವರಿಯಲಿದ್ದು, ಅಲ್ಲಲ್ಲಿ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಕರ್ನಾಟಕ ಮಾತ್ರವಲ್ಲದೆ ದೇಶದ ಒಟ್ಟು 19 ರಾಜ್ಯಗಳಲ್ಲಿಯೂ ಮುಂದಿನ ದಿನಗಳಲ್ಲಿ ಭಾರೀ ಮಳೆಯಾಗುವ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದೆ.

## ಜಯದೇವ–ಕಾಳೇನ ಅಗ್ರಹಾರ ಮೆಟ್ರೋ ಶೀಘ್ರ ಸಂಚಾರ

● ವಿಕ್ರಮ ವಾಹಿನಿ । ಬೆಂಗಳೂರು

ನಮ್ಮ ಮೆಟ್ರೋದ ಗುಲಾಬಿ ಮಾರ್ಗದ ಜಯದೇವ ಆಸ್ಪತ್ರೆಯಿಂದ ಕಾಳೇನ ಅಗ್ರಹಾರ ಮೆಟ್ರೋ ನಿಲ್ದಾಣದವರೆಗಿನ ಎತ್ತರಿಸಿದ ಮಾರ್ಗವನ್ನು ಸಾರ್ವಜನಿಕ ಸೇವೆಗೆ ಮುಕ್ತಗೊಳಿಸುವ ಸಿದ್ಧತೆಗಳು ಭರದಿಂದ ಸಾಗುತ್ತಿದ್ದು, ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರು ಬುಧವಾರ ಕಾಮಗಾರಿ ಹಾಗೂ ನಿಲ್ದಾಣದ ಸಿದ್ಧತೆಗಳನ್ನು ಪರಿಶೀಲಿಸಿದರು.

ಸಚಿವರು ಬೆಂಗಳೂರು ದಕ್ಷಿಣ ಸಂಸದ ತೇಜಸ್ವಿ ಸೂರ್ಯ, ಶಾಸಕ ಎ. ಕೃಷ್ಣಪ್ಪ ಹಾಗೂ ಬಿಎಂಆರ್‌ಸಿಎಲ್‌ನ ಹಿರಿಯ ಅಧಿಕಾರಿಗಳೊಂದಿಗೆ ಜಯದೇವ ಆಸ್ಪತ್ರೆಯಿಂದ ಕಾಳೇನ ಅಗ್ರಹಾರವರೆಗೆ ಮೆಟ್ರೋದಲ್ಲಿ ಸಂಚರಿಸಿ, ಕಾಳೇನ ಅಗ್ರಹಾರ ನಿಲ್ದಾಣದಲ್ಲಿನ ಪ್ರಯಾಣಿಕರ ಸೌಲಭ್ಯಗಳು ಹಾಗೂ ವಿವಿಧ ವ್ಯವಸ್ಥೆಗಳನ್ನು ಪರಿಶೀಲಿಸಿದರು.

ಬಿಎಂಆರ್‌ಸಿಎಲ್ ಅಧಿಕಾರಿಗಳು ಬಿಇಎಂಎಲ್ ನಿರ್ಮಿಸಿರುವ ಅತ್ಯಾಧುನಿಕ ಮೆಟ್ರೋ ರೈಲುಗಳ ಕುರಿತು ಮಾಹಿತಿ ನೀಡಿದರು. ರೈಲುಗಳಲ್ಲಿ ಸುಮಾರು ಶೇ.70ರಷ್ಟು ಸ್ವದೇಶಿ ತಂತ್ರಜ್ಞಾನ ಬಳಕೆಯಾಗಿದ್ದು, ಸ್ವಯಂಚಾಲಿತ ರೈಲು ಕಾರ್ಯಾಚರಣೆ ಹಾಗೂ ಚಾಲಕರಹಿತ ರೈಲು ಕಾರ್ಯಾಚರಣೆ ವ್ಯವಸ್ಥೆಗಳನ್ನು ಬೆಂಬಲಿಸುವ ಸಾಮರ್ಥ್ಯ ಹೊಂದಿವೆ ಎಂದು



ತಿಳಿಸಿದರು. ಈ ಮಾರ್ಗದ ಸಂಚಾರಕ್ಕೆ ಅಗತ್ಯವಿರುವಷ್ಟು ರೈಲುಗಳು ಲಭ್ಯವಿದ್ದು, ಸದ್ಯ ಕಡ್ಡಾಯ ಪರೀಕ್ಷಾ ಹಂತದಲ್ಲಿವೆ. ಪ್ರಯಾಣಿಕರ ಸೇವೆಗೆ ನಿಯೋಜಿಸುವ ಮೊದಲು ಪ್ರತಿ ರೈಲು ನಿಗದಿತ 750 ಕಿ.ಮೀ. ಪರೀಕ್ಷಾ ಸಂಚಾರ ಪೂರ್ಣಗೊಳಿಸಬೇಕಾಗಿದೆ. ರೈಲು ಚಾಲಕರಿಗೆ ಅಗತ್ಯ ತರಬೇತಿಯೂ ಈ ವಾರದೊಳಗೆ ಪೂರ್ಣಗೊಳ್ಳುವ ನಿರೀಕ್ಷೆಯಿದೆ.

ಕಾಳೇನ ಅಗ್ರಹಾರ ನಿಲ್ದಾಣದಲ್ಲಿ ಕಮ್ಯುನಿಕೇಷನ್ ಬೇಸ್ಡ್ ಟ್ರೈನ್ ಕಂಟ್ರೋಲ್ ಸಿಗ್ನಲಿಂಗ್, ಸ್ಟೇಷನ್ ಕಂಟ್ರೋಲ್ ರೂಮ್ ಹಾಗೂ ನ್ಯಾಷನಲ್ ಕಾಮನ್ ಮೊಬಿಲಿಟಿ ಕಾರ್ಡ್‌ಗೆ ಸಂಯೋಜಿತ ಸ್ವಯಂಚಾಲಿತ ದರ ಸಂಗ್ರಹ ವ್ಯವಸ್ಥೆ ಸಿದ್ಧಗೊಂಡಿದೆ.

ಹೊಸ ರೈಲುಗಳ ಸಂಚಾರಕ್ಕೆ ರೈಲ್ವೆ ಮಂಡಳಿಯ ಅನುಮೋದನೆ ಶೀಘ್ರದಲ್ಲೇ ದೊರೆಯುವ ನಿರೀಕ್ಷೆಯಿದೆ. ಬಳಿಕ ಮೆಟ್ರೋ ರೈಲ್ವೆ ಸುರಕ್ಷತಾ ಆಯುಕ್ತರು ಸುರಕ್ಷತಾ ಪರಿಶೀಲನೆ ನಡೆಸಲಿದ್ದು, ಅಗತ್ಯ ಅನುಮೋದನೆ ದೊರೆತ ನಂತರ ಮಾರ್ಗವನ್ನು ಸಾರ್ವಜನಿಕ ಪ್ರಯಾಣಿಕರ ಸೇವೆಗೆ ತೆರೆಯಲಾಗುವುದು.

ಬಿಎಂಆರ್‌ಸಿಎಲ್ ಅಗತ್ಯ ಕಾಮಗಾರಿಗಳನ್ನು ಪೂರ್ಣಗೊಳಿಸಿದ್ದು, ಕಡ್ಡಾಯ ಸುರಕ್ಷತಾ ಪರಿಶೀಲನೆ ಹಾಗೂ ಅನುಮತಿಗಳು ಪೂರ್ಣಗೊಂಡ ಬಳಿಕ ಸಾರ್ವಜನಿಕ ಸೇವೆಗೆ ಮಾರ್ಗವನ್ನು ತೆರೆಯಲು ಸಂಪೂರ್ಣ ಸಿದ್ಧವಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಅಬ್ಬಿಗೆರೆಯಲ್ಲಿ ಲೇನ್ ಕಾಂಪೋಸ್ಟರ್‌ಗೆ ಚಾಲನೆ

● ವಿಕ್ರಮ ವಾಹಿನಿ । ಬೆಂಗಳೂರು

ದಾಸರಹಳ್ಳಿ ವಿಭಾಗದ ಅಬ್ಬಿಗೆರೆಯಲ್ಲಿ ವಿಕೇಂದ್ರೀಕೃತ ತ್ಯಾಜ್ಯ ನಿರ್ವಹಣೆಗೆ ಸ್ಥಾಪಿಸಿರುವ ಲೇನ್ ಕಾಂಪೋಸ್ಟರ್‌ಗೆ ಪಾಲಿಕೆ ಆಯುಕ್ತ ಪೊಮ್ಮಲ ಸುನೀಲ್ ಕುಮಾರ್ ಚಾಲನೆ ನೀಡಿದರು. ಸಾಹಸ್ ಸಂಸ್ಥೆಯ ಸಹಕಾರದಲ್ಲಿ ಸ್ಥಾಪಿಸಿರುವ ವ್ಯವಸ್ಥೆಯಲ್ಲಿ ಸುಮಾರು 100 ಮನೆಗಳಿಂದ ಹಸಿ ತ್ಯಾಜ್ಯ ಸಂಗ್ರಹಿಸಿ ಸ್ಥಳೀಯ ಮಟ್ಟದಲ್ಲೇ ಗೊಬ್ಬರವಾಗಿ ಪರಿವರ್ತಿಸಲಾಗುತ್ತದೆ.

ಅಪಾರ್ಟ್‌ಮೆಂಟ್‌ಗಳು ಹಾಗೂ ವಸತಿ ಪ್ರದೇಶಗಳಲ್ಲೂ ಇಂತಹ ವ್ಯವಸ್ಥೆ ಅಳವಡಿಸಿಕೊಂಡರೆ ತ್ಯಾಜ್ಯ ಸಮಸ್ಯೆಗೆ ಸ್ಥಳೀಯವಾಗಿಯೇ ಪರಿಹಾರ ಕಂಡುಕೊಳ್ಳಬಹುದು. ಇಂತಹ ಘಟಕಗಳನ್ನು ಸ್ಥಾಪಿಸಲು ಸಾರ್ವಜನಿಕರು ಹಾಗೂ ಸಂಘ–ಸಂಸ್ಥೆಗಳು ಮುಂದೆ ಬಂದರೆ ಪಾಲಿಕೆ ಅಗತ್ಯ ಸಹಕಾರ ಮತ್ತು ವೆಚ್ಚ ಒದಗಿಸಲಿದೆ ಎಂದು ಆಯುಕ್ತರು ತಿಳಿಸಿದರು. ಇದೇ ಸಂದರ್ಭದಲ್ಲಿ ಸಪ್ತಗಿರಿ ಎಂಜಿನಿಯರಿಂಗ್ ಕಾಲೇಜು ವಿದ್ಯಾರ್ಥಿಗಳ ಸಹಯೋಗದಲ್ಲಿ ಫಾರೆಸ್ಟ್ ರಸ್ತೆಯಲ್ಲಿ ಎರಡು ಕಿ.ಮೀ. ವ್ಯಾಪ್ತಿಯಲ್ಲಿ ಸ್ವಚ್ಛತಾ ಅಭಿಯಾನ ನಡೆಸಲಾಯಿತು. ಪೌರಕಾರ್ಮಿಕರ ಉತ್ಸಾಹ ಹೆಚ್ಚಿಸುವ ಉದ್ದೇಶದಿಂದ ಆಯೋಜಿಸಿರುವ ‘ಸ್ವಚ್ಛತಾ ಕಪ್’ ಕ್ರೀಡಾಕೂಟಕ್ಕೂ ಆಯುಕ್ತರು ಚಾಲನೆ ನೀಡಿದರು.

## ‘ಕೆಪಿಎಸ್‌ಸಿ ಹಗರಣ: ತಪ್ಪಿತಸ್ಥರೆಲ್ಲರಿಗೂ ಕಠಿಣ ಶಿಕ್ಷೆ ಆಗುತ್ತದೆ’

● ವಿಕ್ರಮ ವಾಹಿನಿ । ನವದೆಹಲಿ

ಕೆಪಿಎಸ್.ಸಿ. ನೇಮಕಾತಿ ಹಗರಣದಲ್ಲಿ ಬಂಧಿತನಾಗಿರುವ ಬಸವರಾಜ ಕನ್ನಾಳೆ ಭಾಲ್ಕಿ ಕ್ಷೇತ್ರದ ಬಿಜೆಪಿ ಕಾರ್ಯಕರ್ತನಾಗಿದ್ದು, ವಿಧಾನಸಭಾ ಚುನಾವಣೆಯಲ್ಲಿ ನನ್ನ ವಿರುದ್ಧವೇ ಸ್ಪರ್ಧಿಸುವುದಾಗಿ ಹೇಳಿಕೊಂಡು ಓಡಾಡುತ್ತಿದ್ದ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಹೇಳಿದ್ದಾರೆ.

ಕೆಲವು ತಿಂಗಳ ಹಿಂದೆ ಬೆಂಗಳೂರಿನ ನನ್ನ ಕಚೇರಿಯಲ್ಲಿ ಭೇಟಿಯಾಗಲು ಬಂದಿದ್ದ ಕನ್ನಾಳೆ, ತನಗೆ ಬಿಜೆಪಿ ರಾಜ್ಯ ನಾಯಕರ ಶಿಫಾರಸಿನಿಂದ ರಾಜ್ಯಪಾಲರು ತುಮಕೂರು ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯನನ್ನಾಗಿ ಮಾಡಿದ್ದು, ಆಶೀರ್ವಾದ ಮಾಡಿ ಎಂದು ಹೇಳಿ ನನಗೆ ಶಾಲು ಹೊದಿಸಿ ಸಿಹಿ ನೀಡಿದ, ನಾನು ಸಿಹಿ ತಿನ್ನೋದಿಲ್ಲ ಎಂದು ಹೇಳಿ ಅವನಿಗೇ ತಿನ್ನಿಸಿದೆ ಎಂದು ವೈರಲ್ ಆಗಿರುವ ಚಿತ್ರದ ಬಗ್ಗೆ ಈಶ್ವರ ಖಂಡ್ರೆ ಸ್ಪಷ್ಟನೆ ನೀಡಿದ್ದಾರೆ.

ನನ್ನ ಕಚೇರಿಯಿಂದ ಹೊರಡುವಾಗ ಬಸವರಾಜ ಕನ್ನಾಳೆ ಸರ್, ನಾನು ನಿಮ್ಮ ವಿರುದ್ಧವೇ ಭಾಲ್ಕಿಯಿಂದ ಸ್ಪರ್ಧಿಸುತ್ತೇನೆ ಎಂದಿದ್ದ. ನಾನು ಪ್ರಜಾಪ್ರಭುತ್ವದಲ್ಲಿ ಎಲ್ಲರಿಗೂ ಅವಕಾಶ ಇದೆ. ನಿನ್ನ ಪ್ರಯತ್ನ ನೀನು ಮಾಡು ಎಂದಿದ್ದೆ ಎಂದೂ ತಿಳಿಸಿದ್ದಾರೆ.

ನಮ್ಮ ಕ್ಷೇತ್ರದ ಒಬ್ಬ ವ್ಯಕ್ತಿ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯನಾಗಿದ್ದೇನೆ ಎಂದು ತಿಳಿಸಲು ಬಂದಾಗ ಅವರ ಜೊತೆಯಲ್ಲಿ ಸೌಜನ್ಯದಿಂದ ಮಾತನಾಡುವುದು ಒಬ್ಬ ಜನಪ್ರತಿನಿಧಿಯ ಕರ್ತವ್ಯ. ಈ ಬಗ್ಗೆ ಸ್ಪಷ್ಟ ಮಾಹಿತಿ ಇದ್ದರೂ ಕೇಂದ್ರದ ಮಾಜಿ ಸಚಿವ ಹಾಗೂ ಪರಾಜಿತ ಸಂಸದರು ರಾಜಕೀಯ ದುರುದ್ದೇಶದಿಂದ ಇಂತಹ ಇಲ್ಲ ಸಲ್ಲದ ಆರೋಪ ಮಾಡಿ, ಫೋಟೋ ಬಿಡುಗಡೆ ಮಾಡಿದ್ದಾರೆ ಎಂದು ಕಿಡಿಕಾರಿದರು.

ಇಂದು ಜಡಿಎಸ್ ನವರು ಈ ಫೋಟೋ ಹಾಕಿ ಅಪಪ್ರಚಾರ ಮಾಡಿದ್ದಾರೆ. ಜನರಿಗೆ ಸುಳ್ಳನ್ನೇ ನಿಜ ಎಂದು ನಂಬಿಸುವ ಪ್ರಯತ್ನ ಮಾಡುತ್ತಿದ್ದಾರೆ. ಬಿಜೆಪಿಯ ಚಿಹ್ನೆ ಇರುವ ಶಲ್ಯ ಹೊದ್ದು, ಬಿಜೆಪಿ ನಾಯಕರ ಜೊತೆ ಮುಂದಿನ ಸಾಲಿನಲ್ಲಿ ಕುಳಿತು ಫೋಟೋಗೆ ಪೋಸ್ ನೀಡಿರುವ ಹಾಗೂ ಹಲವು ಬಿಜೆಪಿ ನಾಯಕರೇ ಸಿಹಿ ತನಿಸಿರುವ ಫೋಟೋಗಳೂ ಸಾಮಾಜಿಕ ತಾಣದಲ್ಲಿವೆ ಈ ಬಗ್ಗೆ ಬಿಜೆಪಿ ಹಾಗೂ ಜೆಡಿಎಸ್ ನವರು ಮಾತನಾಡಲಿ ಎಂದು ಈಶ್ವರ ಖಂಡ್ರೆ ಹೇಳಿದ್ದಾರೆ.



ಕೇಂದ್ರದ ಮಾಜಿ ಸಚಿವ ಪರಾಜಿತ ಸಂಸದ ಬಸವರಾಜ ಕನ್ನಾಳ ಜೊತೆ ಅತ್ಯಂತ ಆಪ್ತತೆ ಹೊಂದಿರುವುದು ಇಡೀ ಬೀದರ್ ಗೆ ತಿಳಿದ ವಿಚಾರವಾಗಿದೆ. ತಮ್ಮ ತಪ್ಪು ಮುಚ್ಚಿಕೊಳ್ಳಲು, ತಾವು ಮಾಡಿದ ಪಾಪವನ್ನು ಮತ್ತೊಬ್ಬರ ಹೆಗಲಿಗೆ ಕಟ್ಟುವ ಪ್ರಯತ್ನ ಅತ್ಯಂತ ನೀಚತನದ್ದಾಗಿದ್ದು, ಇದನ್ನು ಖಂಡಿಸುವುದಾಗಿ ಈಶ್ವರ ಖಂಡ್ರೆ ಹೇಳಿದ್ದಾರೆ.

ಕೋತಿ ಮೊಸರನ್ನ ತಿಂದು ಮೇಕೆ ಬಾಯಿಗೆ ಒರೆಸಿತು ಎನ್ನುವಂತೆ ಕೆಲವರು ವರ್ತಿಸುತ್ತಿದ್ದಾರೆ. ಇವರೂ ಕನ್ನಾಳೆ ಜೊತೆಗೆ ಈ ಅಕ್ರಮ ವ್ಯವಹಾರದಲ್ಲಿ ಭಾಗಿಯಾಗಿದ್ದಾರೆಯೇ ಎಂಬ ಶಂಕೆ ಮೂಡುತ್ತಿದೆ. ಈ ಬಗ್ಗೆ ಪಾರದರ್ಶಕ ಹಾಗೂ ಸಮಗ್ರ ತನಿಖೆ ಆಗಬೇಕು. ಯಾರು ಎಷ್ಟೇ ದೊಡ್ಡವರಾಗಿದ್ದರೂ, ಪ್ರತಿಭಾವಂತ ಅಭ್ಯರ್ಥಿಗಳಿಗೆ ವಂಚನೆ ಮಾಡಿದವರಿಗೆ ಕಠಿಣ ಶಿಕ್ಷೆ ಆಗಬೇಕು. ಆ ಕಾರ್ಯವನ್ನು ನಮ್ಮ ಸರ್ಕಾರ ಮಾಡುತ್ತದೆ ಎಂಬ ವಿಶ್ವಾಸವನ್ನು ಈಶ್ವರ ಖಂಡ್ರೆ ವ್ಯಕ್ತಪಡಿಸಿದ್ದಾರೆ.

ನೇಮಕಾತಿ ಹಗರಣದಲ್ಲಿ ಭಾಗಿಯಾಗಿರುವವರ ನಿಕಟವರ್ತಿಗಳ ಬಗ್ಗೆ ಸಮಗ್ರ ತನಿಖೆ ಆದರೆ, ಮಾಜಿ ಸಂಸದರ ನಿಜ ಬಣ್ಣವೂ ಬಯಲಾಗುವ ಸಾಧ್ಯತೆ ಇದೆ ಎಂದೂ ಅವರು ಹೇಳಿದ್ದಾರೆ.

## ಹಾರ್ಮುಜ್‌ಗೆ ‘ಟ್ರಂಪ್ ಜಲಸಂಧಿ’ ಹೆಸರಿಡಬೇಕೇ?

● ವಿಕ್ರಮ ವಾಹಿನಿ । ವಾಷಿಂಗ್ಟನ್

ಇರಾನ್–ಅಮೆರಿಕ ಸಂಘರ್ಷ ತೀವ್ರಗೊಂಡಿರುವ ಬೆನ್ನಲ್ಲೇ, ಪ್ರಮುಖ ಜಲಮಾರ್ಗವಾದ ಹಾರ್ಮುಜ್ ಜಲಸಂಧಿಗೆ ‘ಟ್ರಂಪ್ ಸ್ಟ್ರೈಟ್’ ಎಂದು ಮರುನಾಮಕರಣ ಮಾಡಬೇಕೇ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪ್ರಶ್ನಿಸಿದ್ದಾರೆ.

ತಮ್ಮ ‘ಟ್ರೂತ್ ಸೋಶಿಯಲ್’ ಖಾತೆಯಲ್ಲಿ ಈ ಕುರಿತು ಪ್ರತಿಕ್ರಿಯಿಸಿರುವ ಟ್ರಂಪ್, “ಪ್ರಸ್ತುತ ಹಾರ್ಮುಜ್ ಜಲಸಂಧಿ ಅಮೆರಿಕದ ನಿಯಂತ್ರಣದಲ್ಲಿದೆ. ಹೀಗಾಗಿ ಇದಕ್ಕೆ ‘ಟ್ರಂಪ್ ಸ್ಟ್ರೈಟ್’ ಎಂದು ಹೆಸರಿಡಬೇಕೇ?” ಎಂದು ಪ್ರಶ್ನಿಸಿದ್ದಾರೆ. ಈ ಜಲಮಾರ್ಗವೂ ಹಿಂದಿಗಿಂತ ಹೆಚ್ಚು ‘ಹಾಟ್’ ಆಗಲಿದೆ ಎಂದು ಅವರು ಹೇಳಿದ್ದಾರೆ.

ಹಾರ್ಮುಜ್ ಜಲಸಂಧಿಯಲ್ಲಿ ಹಡಗುಗಳ ಮೇಲಿನ ದಾಳಿಗೆ ಪ್ರತಿಯಾಗಿ ಅಮೆರಿಕ ಸೇನೆ ಇರಾನ್‌ಗೆ ಸೇರಿದ ಎರಡು ಸರ್ಕಾರಿ ತೈಲ ಟ್ಯಾಂಕರ್‌ಗಳನ್ನು ಗುರಿಯಾಗಿಸಿಕೊಂಡು ಡ್ರೋನ್ ಕ್ಷಿಪಣಿ ದಾಳಿ ನಡೆಸಿದೆ ಎನ್ನಲಾಗಿದೆ. ‘ಟ್ಯಾಂಕರ್‌ಗೆ ಟ್ಯಾಂಕರ್’ ಎಂಬ ಕಾರ್ಯತಂತ್ರದ ಭಾಗವಾಗಿ ಇರಾನ್ ಕರಾವಳಿಯಲ್ಲಿದ್ದ ಹಡಗುಗಳ ಎಂಜಿನ್ ಕೊಠಡಿಗಳನ್ನು ಅಮೆರಿಕ ಪಡೆಗಳು ಗುರಿಯಾಗಿಸಿಕೊಂಡಿವೆ ಎಂದು ವರದಿಯಾಗಿದೆ.

ವಿಶ್ವದ ಪ್ರಮುಖ ತೈಲ ಸಾಗಣೆ ಮಾರ್ಗವಾಗಿರುವ ಹಾರ್ಮುಜ್ ಜಲಸಂಧಿಯ ಬೆಳವಣಿಗೆಗಳು ಜಾಗತಿಕ ತೈಲ ಮಾರುಕಟ್ಟೆ ಮೇಲೂ ಪರಿಣಾಮ ಬೀರುವ ಸಾಧ್ಯತೆ ಇದೆ. ಹಾರ್ಮುಜ್ ಜಲಸಂಧಿಯ ಮೂಲಕ ಜಾಗತಿಕವಾಗಿ ಭಾರಿ ಪ್ರಮಾಣದ ಕಚ್ಚಾ ತೈಲ ಮತ್ತು ಇಂಧನ ಸಾಗಣೆಯಾಗುವುದರಿಂದ, ಈ ಪ್ರದೇಶದಲ್ಲಿ ಉಂಟಾಗಿರುವ ಸಂಘರ್ಷವು ಅಂತರರಾಷ್ಟ್ರೀಯ ಇಂಧನ ಪೂರೈಕೆ ಹಾಗೂ ತೈಲ ಬೆಲೆಗಳ ಮೇಲೆ ಪರಿಣಾಮ ಬೀರುವ ಆತಂಕ ಮೂಡಿಸಿದೆ. ಜಲಮಾರ್ಗದ ಸುರಕ್ಷತೆ ಕುರಿತು ವಿವಿಧ ರಾಷ್ಟ್ರಗಳು ಕಳವಳ ವ್ಯಕ್ತಪಡಿಸುತ್ತಿದ್ದು, ಪರಿಸ್ಥಿತಿಯ ಮೇಲೆ ಜಾಗತಿಕ ಸಮುದಾಯ ನಿಗಾ ಇರಿಸಿದೆ.

## ಬೆಂಗಳೂರಿನಲ್ಲಿ ಪಾರ್ಕಿಂಗ್‌ಗೆ ಹೊಸ ನಿಯಮ: ಖಾಲಿ ನಿವೇಶನಗಳಿಗೆ ತೆರಿಗೆ ವಿನಾಯಿತಿ

**ವಾಹನ ದಟ್ಟಣೆ ನಿಯಂತ್ರಣಕ್ಕೆ ಹೊಸ ಪಾರ್ಕಿಂಗ್ ನಿಯಮ; ಖಾಲಿ ನಿವೇಶನಗಳ ಪಾರ್ಕಿಂಗ್‌ಗೆ ತೆರಿಗೆ ವಿನಾಯಿತಿ, ರಸ್ತೆ ಪಾರ್ಕಿಂಗ್‌ಗೆ ಶುಲ್ಕ–ನಿರ್ಬಂಧ ಪ್ರಸ್ತಾವ. ಸೆ.10ರವರೆಗೆ ಸಾರ್ವಜನಿಕರಿಂದ ಸಲಹೆ ಆಹ್ವಾನ.**

● ವಿಕ್ರಮ ವಾಹಿನಿ । ಬೆಂಗಳೂರು

ಹೆಚ್ಚುತ್ತಿರುವ ವಾಹನಗಳ ಸಂಖ್ಯೆ ಹಾಗೂ ಅನಿಯಂತ್ರಿತ ಪಾರ್ಕಿಂಗ್‌ನಿಂದ ಉಂಟಾಗುತ್ತಿರುವ ಸಂಚಾರ ದಟ್ಟಣೆ ನಿಯಂತ್ರಿಸಲು ಗ್ರೇಟರ್ ಬೆಂಗಳೂರು ಪ್ರದೇಶಕ್ಕೆ ಸಮಗ್ರ ಪಾರ್ಕಿಂಗ್ ನಿಯಮಗಳನ್ನು ಜಾರಿಗೆ ತರಲು ಸರ್ಕಾರ ಮುಂದಾಗಿದೆ. ಈ ಸಂಬಂಧ ಕರಡು ನಿಯಮಗಳನ್ನು ಸಾರ್ವಜನಿಕರ ಸಲಹೆಗಾಗಿ ಪ್ರಕಟಿಸಲಾಗಿದ್ದು, ಸೆ.10ರೊಳಗೆ ಅಭಿಪ್ರಾಯ ಹಾಗೂ ಸಲಹೆಗಳನ್ನು ಸಲ್ಲಿಸಲು ಅವಕಾಶ ನೀಡಲಾಗಿದೆ.

ಬೆಂಗಳೂರಿನಲ್ಲಿ 1.28 ಕೋಟಿಗೂ ಅಧಿಕ ವಾಹನಗಳು ನೋಂದಣಿಯಾಗಿದ್ದು, ಹೊರ ರಾಜ್ಯ ಹಾಗೂ ಜಿಲ್ಲೆಗಳಲ್ಲಿ ನೋಂದಣಿಯಾಗಿ ನಗರದಲ್ಲಿ ಸಂಚರಿಸುವ ವಾಹನಗಳನ್ನು ಸೇರಿಸಿದರೆ ಒಟ್ಟು ವಾಹನಗಳ ಸಂಖ್ಯೆ ಸುಮಾರು 1.5 ಕೋಟಿಗೆ ತಲುಪಿದೆ. ವಾಹನಗಳು ಶೇ.95ರಷ್ಟು ಸಮಯ ನಿಲುಗಡೆಯಲ್ಲೇ ಇರುವುದರಿಂದ ಪಾರ್ಕಿಂಗ್ ವ್ಯವಸ್ಥೆ ನಗರದ ಪ್ರಮುಖ ಸವಾಲಾಗಿದೆ. ರಸ್ತೆಗಳ ಮೇಲೆ ಅವ್ಯವಸ್ಥಿತ ಪಾರ್ಕಿಂಗ್ ನಡೆಯುತ್ತಿರುವುದರಿಂದ ಸಂಚಾರ ಸಾಮರ್ಥ್ಯವೂ ಕುಸಿಯುತ್ತಿದೆ.

ಕರ್ನಾಟಕ ಸರ್ಕಾರ 2021ರ ಫೆಬ್ರವರಿ 2ರಂದು ಬೆಂಗಳೂರು ಪಾರ್ಕಿಂಗ್ ನೀತಿಯನ್ನು ಅನುಮೋದಿಸಿತ್ತು. ಇದೀಗ ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ವ್ಯಾಪ್ತಿಯಲ್ಲಿ ಅದರ ಅನುಷ್ಠಾನಕ್ಕೆ ಅಗತ್ಯವಾದ ಕರಡು ನಿಯಮಗಳನ್ನು ರೂಪಿಸಲಾಗಿದೆ. ಸಂಬಂಧಪಟ್ಟ ನಗರ ಸಂಸ್ಥೆಗಳು, ಸಾರಿಗೆ ಮತ್ತು ಸಂಚಾರ ಇಲಾಖೆ ಸೇರಿದಂತೆ ವಿವಿಧ ಪಾಲುದಾರರೊಂದಿಗೆ ಸಮಾಲೋಚಿಸಿ ನಿಯಮಗಳನ್ನು ಸಿದ್ಧಪಡಿಸಲಾಗಿದೆ.

**ಖಾಲಿ ನಿವೇಶನಗಳಿಗೆ ತೆರಿಗೆ ವಿನಾಯಿತಿ**

ನಗರದಲ್ಲಿ ರಸ್ತೆಯೇತರ ಪಾರ್ಕಿಂಗ್ ಸೌಲಭ್ಯ ಹೆಚ್ಚಿಸಲು ಖಾಲಿ ನಿವೇಶನಗಳನ್ನು ಪಾರ್ಕಿಂಗ್‌ಗೆ ಬಳಸುವವರಿಗೆ ತೆರಿಗೆ ಪ್ರೋತ್ಸಾಹ ನೀಡಲು ಪ್ರಸ್ತಾವಿಸಲಾಗಿದೆ. ಬಹುಮಹಡಿ ಅಥವಾ ಯಾಂತ್ರೀಕೃತ ಪಾರ್ಕಿಂಗ್ ವ್ಯವಸ್ಥೆ ನಿರ್ಮಿಸುವ ಖಾಲಿ ನಿವೇಶನಗಳಿಗೆ ಶೇ.100ರಷ್ಟು ಆಸ್ತಿ ತೆರಿಗೆ ವಿನಾಯಿತಿ, ನೆಲಮಟ್ಟದ ಪಾರ್ಕಿಂಗ್‌ಗೆ ಬಳಸುವ ನಿವೇಶನಗಳಿಗೆ ಶೇ.50ರಷ್ಟು ವಿನಾಯಿತಿ ನೀಡುವ ಪ್ರಸ್ತಾವವಿದೆ.

**ರಸ್ತೆ ಪಾರ್ಕಿಂಗ್‌ಗೆ ಶುಲ್ಕ, ನಿರ್ಬಂಧ**

ಹೆಚ್ಚಿನ ಸಂಚಾರವಿರುವ ಪ್ರಮುಖ ರಸ್ತೆಗಳಲ್ಲಿ ಪಾರ್ಕಿಂಗ್ ನಿಷೇಧಿಸುವುದು, ಪೀಕ್ ಅವಧಿಯಲ್ಲಿ ಪಾರ್ಕಿಂಗ್ ನಿಯಂತ್ರಿಸುವುದು ಹಾಗೂ ಬಹುಮಹಡಿ ಪಾರ್ಕಿಂಗ್ ಸೌಲಭ್ಯಗಳ ಸುತ್ತಮುತ್ತ ರಸ್ತೆ ಪಾರ್ಕಿಂಗ್‌ಗೆ ನಿರ್ಬಂಧ ವಿಧಿಸುವ ಪ್ರಸ್ತಾವವಿದೆ. ದೀರ್ಘಾವಧಿ ರಸ್ತೆ ಪಾರ್ಕಿಂಗ್‌ಗೆ ಹೆಚ್ಚಿನ ಶುಲ್ಕ ವಿಧಿಸಿ, ವಾಹನಗಳನ್ನು ಸಾರ್ವಜನಿಕ ರಸ್ತೆಯಲ್ಲಿ ಹೆಚ್ಚು ಸಮಯ ನಿಲ್ಲಿಸುವುದನ್ನು ತಡೆಯಲು ಉದ್ದೇಶಿಸಲಾಗಿದೆ.

ನಿಯಮಿತವಾಗಿ ಸಾರ್ವಜನಿಕ ರಸ್ತೆಯೇತರ ಪಾರ್ಕಿಂಗ್ ಸೌಲಭ್ಯ ಬಳಸುವವರಿಗೆ ಮಾಸಿಕ ಪಾರ್ಕಿಂಗ್ ಪಾಸ್ ವ್ಯವಸ್ಥೆಯನ್ನೂ ಕಲ್ಪಿಸಲು ಉದ್ದೇಶಿಸಲಾಗಿದೆ.

**ಕಟ್ಟಡ ಮಾಲೀಕರಿಗೂ ಹೊಣೆ**

ಕಟ್ಟಡ ನಿಯಮಗಳ ಪ್ರಕಾರ ಕಡ್ಡಾಯ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸದ ಕಟ್ಟಡ ಮಾಲೀಕರು ಹಾಗೂ ನಿಗದಿತ ಪಾರ್ಕಿಂಗ್ ಸ್ಥಳವನ್ನು ಇತರೆ ವಾಣಿಜ್ಯ ಉದ್ದೇಶಗಳಿಗೆ ಬಳಸುವವರ ವಿರುದ್ಧ ಕ್ರಮ ಕೈಗೊಳ್ಳಲು ಕರಡು ನಿಯಮಗಳಲ್ಲಿ ಅವಕಾಶ ಕಲ್ಪಿಸಲಾಗಿದೆ.

ಪಾರ್ಕಿಂಗ್ ನಿಯಮಗಳ ಜಾರಿಗೆ ನಗರ ಪಾಲಿಕೆಗಳು ಹಾಗೂ ಪೊಲೀಸ್ ಇಲಾಖೆಗೆ ಅಧಿಕಾರ ನೀಡುವ ಜೊತೆಗೆ, ಪಾರ್ಕಿಂಗ್‌ನಿಂದ ಸಂಗ್ರಹವಾಗುವ ಆದಾಯವನ್ನು ಸಂಚಾರ ಸುಧಾರಣೆ, ಜಂಕ್ಷನ್ ಅಭಿವೃದ್ಧಿ, ರಸ್ತೆ ಮತ್ತು ಪಾದಚಾರಿ ಮಾರ್ಗಗಳ ದುರಸ್ತಿಗೆ ಬಳಸುವ ಪ್ರಸ್ತಾವವಿದೆ.

ಸಾರ್ವಜನಿಕ ರಸ್ತೆಗಳು ಎಲ್ಲರಿಗೂ ಸೇರಿದ್ದು, ಖಾಸಗಿ ವಾಹನಗಳ ಪಾರ್ಕಿಂಗ್‌ಗಾಗಿ ಅವುಗಳನ್ನು ನಿರ್ಬಂಧಿತವಾಗಿ ಬಳಸುವುದನ್ನು ನಿಯಂತ್ರಿಸುವುದು ನಿಯಮಗಳ ಪ್ರಮುಖ ಉದ್ದೇಶವಾಗಿದೆ.

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

# ಪಾದಯಾತ್ರೆಗೆ ಹೆದರಿ ಸರ್ಕಾರ ಎಚ್ಚೆತ್ತುಕೊಂಡಿದೆ: ವಿಜಯೇಂದ್ರ

## ದಲಿತ ಸಮುದಾಯದ ನಾಯಕರೊಂದಿಗೆ ಸಂವಾದ; ಕಾಂಗ್ರೆಸ್ ವಿರುದ್ಧ ಬಿಜೆಪಿ ರಾಜ್ಯಾಧ್ಯಕ್ಷ ವಾಗ್ದಾಳಿ

● ವಿಕ್ರಮ ವಾಹಿನಿ । ಮಸ್ಕಿ (ರಾಯಚೂರು)

ಬಿಜೆಪಿ ಆರಂಭಿಸಿರುವ ಪಾದಯಾತ್ರೆಯಿಂದ ಕಾಂಗ್ರೆಸ್ ಸರ್ಕಾರ ಹಾಗೂ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಭಯ ಹುಟ್ಟಿದ್ದು, ಪಾದಯಾತ್ರೆ ಆರಂಭವಾದ ಬಳಿಕ ಬರಪೀಡಿತ ತಾಲೂಕುಗಳ ಎರಡನೇ ಪಟ್ಟಿಯನ್ನು ಪ್ರಕಟಿಸಲು ಸರ್ಕಾರ ಮುಂದಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದರು.

ಮಸ್ಕಿಯಲ್ಲಿ ದಲಿತ ಸಮುದಾಯದ ನಾಯಕರೊಂದಿಗೆ ನಡೆದ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಆರಂಭದಲ್ಲಿ 101 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಿದ್ದ ಸರ್ಕಾರ, ಇದೀಗ ಇನ್ನಷ್ಟು ತಾಲೂಕುಗಳನ್ನು ಪಟ್ಟಿಗೆ ಸೇರಿಸಲು ಮುಂದಾಗಿದೆ. ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ನಿರ್ಲಕ್ಷ್ಯ ವಹಿಸಿದ್ದ ಸರ್ಕಾರ, ಬಿಜೆಪಿ ಪಾದಯಾತ್ರೆ ಆರಂಭಿಸಿದ ಬಳಿಕ ಎಚ್ಚೆತ್ತುಕೊಂಡಿದೆ ಎಂದರು.

ದಲಿತ ಸಮುದಾಯದ ಕಲ್ಯಾಣಕ್ಕಾಗಿ ಹಿಂದಿನ ಬಿಜೆಪಿ ಸರ್ಕಾರ ಸುಮಾರು ರೂ 800 ಕೋಟಿ ಅನುದಾನ ಬಿಡುಗಡೆ ಮಾಡಿತ್ತು. ಆದರೆ ಕಾಂಗ್ರೆಸ್ ಸರ್ಕಾರ ದಲಿತರ ಹೆಸರಿನಲ್ಲಿ ಮಾತನಾಡುತ್ತಾ ಹಿಂದಿನ ಸರ್ಕಾರಕ್ಕಿಂತ ಶೇ.50ರಷ್ಟು ಕಡಿಮೆ ಅನುದಾನ ನೀಡಿದೆ. ವಿವಿಧ ಅಭಿವೃದ್ಧಿ ನಿಗಮಗಳಿಗೆ ಬಜೆಟ್‌ನಲ್ಲಿ ಘೋಷಿಸಿದಷ್ಟು ಹಣವನ್ನು ಬಿಡುಗಡೆ ಮಾಡುತ್ತಿಲ್ಲ ಎಂದು ದೂರಿದರು.

**ಗ್ಯಾರಂಟಿಗಳಿಗೆ ದಲಿತರ ಹಣ ಬಳಕೆ ಆರೋಪ**

ಎಸ್‌ಸಿಪಿ/ಟಿಎಸ್‌ಪಿ ಯೋಜನೆಯಡಿ ದಲಿತರ ಕಲ್ಯಾಣಕ್ಕೆ ಮೀಸಲಾದ ಸಾವಿರಾರು ಕೋಟಿ ರೂಪಾಯಿ ಹಣವನ್ನು ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕೆ ಬಳಸಲಾಗಿದೆ ಎಂದು ವಿಜಯೇಂದ್ರ ಆರೋಪಿಸಿದರು. ಅನುದಾನವನ್ನು ಅನ್ಯ ಉದ್ದೇಶಕ್ಕೆ ಬಳಸಿರುವುದನ್ನು ಬಿಜೆಪಿ ಪ್ರಶ್ನಿಸಿದ್ದು, ಈ ಬಗ್ಗೆ ದಲಿತ ಸಮುದಾಯದಲ್ಲೂ ಜಾಗೃತಿ ಮೂಡಿಸುವ ಅಗತ್ಯವಿದೆ ಎಂದರು.

ಕಾಂಗ್ರೆಸ್ ಸರ್ಕಾರ ಎರಡೂವರೆ ಲಕ್ಷ ಉದ್ಯೋಗ ನೀಡುವುದಾಗಿ ಭರವಸೆ ನೀಡಿದ್ದರೂ, ಉದ್ಯೋಗ ಸೃಷ್ಟಿಯಲ್ಲಿ ವಿಫಲವಾಗಿದೆ. ಮೀಸಲಾತಿ ವಿಚಾರದಲ್ಲೂ ಸರ್ಕಾರ ಮಾತು ತಪ್ಪಿದೆ.

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಅಲೆಮಾರಿ ಸಮುದಾಯಗಳಿಗೆ ಹಿಂದಿನ ಬಿಜೆಪಿ ಸರ್ಕಾರ ಜಾರಿಗೊಳಿಸಿದ್ದ ಮೀಸಲಾತಿ ವ್ಯವಸ್ಥೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿಲ್ಲ ಎಂದು ಆರೋಪಿಸಿದರು.

ಶೋಷಿತರು ಮತ್ತು ಪೀಡಿತರ ಧ್ವನಿಯಾಗಿ ಬಿಜೆಪಿ ಪಾದಯಾತ್ರೆಯಲ್ಲಿ ಹೋರಾಟ ನಡೆಸಲಿದೆ. ದಲಿತರು, ಹಿಂದುಳಿದವರು ಸೇರಿದಂತೆ ಎಲ್ಲ ಸಮುದಾಯಗಳ ಸಮಸ್ಯೆಗಳನ್ನು ಪಾದಯಾತ್ರೆಯಲ್ಲಿ ಪ್ರಸ್ತಾಪಿಸಲಾಗುವುದು. ಕೇಂದ್ರದ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಹಾಗೂ ಹಿಂದಿನ ಬಿಜೆಪಿ ಸರ್ಕಾರಗಳು ದಲಿತ ಮತ್ತು ಹಿಂದುಳಿದ ಸಮುದಾಯಗಳ ಅಭಿವೃದ್ಧಿಗೆ ಹಲವು ಯೋಜನೆಗಳನ್ನು ಜಾರಿಗೊಳಿಸಿವೆ ಎಂದು ಹೇಳಿದರು.

ಮಾಜಿ ಶಾಸಕ ಪ್ರತಾಪ್ ಗೌಡ ಪಾಟೀಲ್ ಸೇರಿದಂತೆ ಪಕ್ಷದ ಮುಖಂಡರು ಉಪಸ್ಥಿತರಿದ್ದರು.

## ‘ಬರಪೀಡಿತ ಪ್ರದೇಶ ಘೋಷಿಸಲು ಲಂಚ ಬಯಸುವ ಸರಕಾರ’

● ವಿಕ್ರಮ ವಾಹಿನಿ । ಮಸ್ಕಿ (ರಾಯಚೂರು)



ಸುಳ್ಳುಗಳನ್ನು ಹೇಳಿ ಅಧಿಕಾರಕ್ಕೆ ಬಂದ ಈ ಕಾಂಗ್ರೆಸ್ ಪಕ್ಷವು ಅಧಿಕಾರಕ್ಕೆ ಬಂದ ಮೇಲೆ ರೈತರನ್ನು ಮರೆತಿದೆ. ದಲಿತರನ್ನೂ ಅದು ಮರೆತಿದೆ. ಯುವಜನತೆ, ಬಡವರನ್ನೂ ಮರೆತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ವಾಗ್ದಾಳಿ ನಡೆಸಿದ್ದಾರೆ.

ಪಾದಯಾತ್ರೆಯ ಎರಡನೇ ದಿನವಾದ ಇಂದು ಮಾತನಾಡಿದ ಅವರು, ಮಸ್ಕಿಯಲ್ಲಿ ಭೀಕರ ಬರ ಇದೆ. ಆದರೂ ಇದನ್ನು ಬರಪೀಡಿತ ಎಂದು ಘೋಷಿಸಿಲ್ಲ ಎಂದು ಆಕ್ಷೇಪಿಸಿದರು. ಈ ಕಾಂಗ್ರೆಸ್ ಸರಕಾರದಲ್ಲಿ ಲಂಚ ಕೊಡದಿದ್ದರೆ ಏನೂ ಆಗುವುದಿಲ್ಲ. ಮಸ್ಕಿಯ ರೈತರು 10 ಲಕ್ಷವೋ 50 ಲಕ್ಷವೋ ಲಂಚ ಕೊಟ್ಟರೆ ಮುಖ್ಯಮಂತ್ರಿಗಳು ಈ ಪ್ರದೇಶವನ್ನು ಬರಪೀಡಿತ ಪ್ರದೇಶವಾಗಿ ಘೋಷಿಸಬಹುದು ಎಂದು ತಿಳಿಸಿದರು.

**ಆ ಭಗವಂತನೂ ನಿಮ್ಮನ್ನು ಕ್ಷಮಿಸಲು ಸಾಧ್ಯವಿಲ್ಲ..**

52 ಸಾವಿರ ಕೋಟಿ ರೂ. ಎಸ್‌ಇಪಿ, ಟಿಎಸ್‌ಪಿ ಹಣವನ್ನು ಬೇರೆ ಬೇರೆ ಇಲಾಖೆಗೆ ವರ್ಗಾಯಿಸಿದ್ದರ ಪರಿಣಾಮವಾಗಿ ದಲಿತರ ಅಭಿವೃದ್ಧಿ ಕುಂಠಿತವಾಗಿದೆ. ಯುವಕರಿಗೆ ಉದ್ಯೋಗ ಕೊಡುವ ಅವಕಾಶ ತಪ್ಪಿಹೋಗಿದೆ. ದಲಿತರಿಗೆ ಮನೆ ಕಟ್ಟುವ ಅವಕಾಶ ಇತ್ತು. ಆ ಹಣದಲ್ಲಿ ಶಿಕ್ಷಣಕ್ಕೆ ಒತ್ತು ಕೊಡಬಹುದಾಗಿತ್ತು.

ಬಡವರ ಮನೆ ಬಾಗಿಲಿಗೆ ನೀರು ಕೊಡಬಹುದಾಗಿತ್ತು. ಇದ್ಯಾವುದನ್ನೂ ಮಾಡದೇ ಆ ಹಣವನ್ನು ಬೇರೆ ಇಲಾಖೆಗೆ ವರ್ಗಾಯಿಸಿದ್ದಾರೆ. ಆ ಭಗವಂತನೂ ನಿಮ್ಮನ್ನು ಕ್ಷಮಿಸಲು ಸಾಧ್ಯವಿಲ್ಲ ಎಂದು ನುಡಿದರು.

ಬಿಜೆಪಿ ಹೋರಾಟ ಘೋಷಣೆಯಿಂದ ಆತಂಕ

ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ 187 ಕೋಟಿ ರೂ. ಲೂಟಿ ಹೊಡೆದಿದ್ದಾರೆ. ಈ ಹಣದಲ್ಲಿ ಕಾಂಗ್ರೆಸ್ ಹೈಕಮಾಂಡಿಗೆ ಕಪ್ಪ ಕಾಣಿಕೆ ಕೊಟ್ಟು ಅಧಿಕಾರ ನಡೆಸುತ್ತಿದ್ದ ಭ್ರಷ್ಟ ಸಚಿವರನ್ನು ಕೈಬಿಡಲು ಒತ್ತಾಯಿಸಿ ನಾವು ಪಾದಯಾತ್ರೆ ಘೋಷಿಸಿದ್ದೆವು. ಇದರಿಂದ ಮುಖ್ಯಮಂತ್ರಿಗಳಿಗೆ ಎದೆಯಲ್ಲಿ ಡವಡವ ಶುರುವಾಯಿತು ಎಂದು ಗಮನ ಸೆಳೆದರು.

**ಇದೇನಾ ನಿಮ್ಮ ದಲಿತಪರ ಕಾಳಜಿ?**

ಮುಖ್ಯಮಂತ್ರಿ ಕುರ್ಚಿ ಬುಡಕ್ಕೆ ಬರುವ ಆತಂಕದಿಂದ ಸಚಿವರ ರಾಜೀನಾಮೆ ಕೊಡಿಸಿದ್ದಾರೆ ಎಂದು ಆರೋಪಿಸಿದರು. ಪರಿಶಿಷ್ಟ ಪಂಗಡಕ್ಕೆ ಸೇರಿದ ರಾಜಣ್ಣ ಅವರು ರಾಹುಲ್ ಗಾಂಧಿ ವಿರುದ್ಧ ಮಾತನಾಡಿದರೆಂಬ ಕಾರಣಕ್ಕೆ 24 ಗಂಟೆಯಲ್ಲಿ ರಾಜೀನಾಮೆ ಪಡೆದಿರಲ್ಲವೇ ಮುಖ್ಯಮಂತ್ರಿಗಳೇ? ಇದೇನಾ ನಿಮ್ಮ ದಲಿತ ಪರ ಕಾಳಜಿ ಎಂದು ಕೇಳಿದರು.

**ದಲಿತರು, ಬಡವರು, ರೈತರ ವಿರೋಧಿ ಲಜ್ಜೆಗೆಟ್ಟ ಸರಕಾರ**

ದಲಿತರು, ಬಡವರು, ರೈತರ ವಿರೋಧಿ ಲಜ್ಜೆಗೆಟ್ಟ ಸರಕಾರ ಇದಾಗಿದೆ. ಎಷ್ಟು ಬೇಗ ಸಾಧ್ಯವೋ ಅಷ್ಟು ಬೇಗ ಬಿಜೆಪಿ ಸರಕಾರ ಅಧಿಕಾರಕ್ಕೆ ಬರಲಿ ಎಂದು ಜನರು ತೀರ್ಮಾನಿಸಿದ್ದಾರೆ ಎಂದ ಅವರು, ಯಡಿಯೂರಪ್ಪನವರು ಕೊಟ್ಟ ಭಾಗ್ಯಲಕ್ಷ್ಮಿ ಯೋಜನೆ, 108 ಆಂಬುಲೆನ್ಸ್ ಸೇವೆ, ದಲಿತರ ಕೇರಿಗಳಲ್ಲಿ ಕಾಂಕ್ರೀಟ್ ರಸ್ತೆ ಮಾಡಿಸಿದ್ದಾರೆ ಎಂದರು. ಇಂಥ ಜನವಿರೋಧಿ ಕಾಂಗ್ರೆಸ್ ಸರಕಾರವನ್ನು ಮನೆಗಟ್ಟುವ ಕೆಲಸ ಮಾಡುವಂತೆ ಮನವಿ ಮಾಡಿದರು.

## ನೇಪಾಳದಲ್ಲಿ ಮಣ್ಣಿನಡಿ ಸಿಲುಕಿದ್ದ 2 ವರ್ಷದ ಮಗು ಜೀವಂತ ರಕ್ಷಣೆ

● ವಿಕ್ರಮ ವಾಹಿನಿ । ಕಠ್ಮಂಡು

ನೇಪಾಳದಲ್ಲಿ ಧಾರಾಕಾರ ಮಳೆ, ಪ್ರವಾಹ ಹಾಗೂ ಭೂಕುಸಿತದಿಂದ ಭಾರಿ ಹಾನಿ ಸಂಭವಿಸಿರುವ ಬೆನ್ನಲ್ಲೇ, ಮಣ್ಣಿನ ಅವಶೇಷಗಳಡಿ ಸಿಲುಕಿದ್ದ ಎರಡು ವರ್ಷದ ಮಗುವನ್ನು ರಕ್ಷಣಾ ಸಿಬ್ಬಂದಿ ಜೀವಂತವಾಗಿ ರಕ್ಷಿಸಿದ್ದಾರೆ.

ಭಾರಿ ಮಳೆಯಿಂದ ಮನೆ ಕುಸಿದು ಬಿದ್ದ ಪರಿಣಾಮ ಮಣ್ಣು ಹಾಗೂ ಶೀಟ್‌ಗಳ ಅಡಿಯಲ್ಲಿ ಮಗು ಸಿಲುಕಿಕೊಂಡಿತ್ತು. ನೇಪಾಳ ಸೇನೆ, ಸಶಸ್ತ್ರ ಪೊಲೀಸ್ ಪಡೆ ಹಾಗೂ ಸ್ಥಳೀಯರು ಜಂಟಿಯಾಗಿ ರಕ್ಷಣಾ ಕಾರ್ಯಾಚರಣೆ ನಡೆಸಿದ್ದು, ಅವಶೇಷಗಳ ನಡುವೆ ಮಗುವಿನ ಸಣ್ಣ ಶಬ್ದ ಕೇಳಿಬಂದ ಹಿನ್ನೆಲೆಯಲ್ಲಿ ಕಾರ್ಯಾಚರಣೆ ತೀವ್ರಗೊಳಿಸಲಾಯಿತು.

ಸತತ ಪ್ರಯತ್ನದ ಬಳಿಕ ಮಣ್ಣು ಹಾಗೂ ಅವಶೇಷಗಳನ್ನು ತೆರವುಗೊಳಿಸಿ ಮಗುವನ್ನು ಸುರಕ್ಷಿತವಾಗಿ ಹೊರತೆಗೆಯಲಾಯಿತು. ಮಗುವಿಗೆ ಯಾವುದೇ ಗಂಭೀರ ಗಾಯಗಳಾಗಿಲ್ಲ ಎಂದು ತಿಳಿದುಬಂದಿದೆ. ಅವಶೇಷಗಳಿಂದ ಮಗುವನ್ನು ಹೊರತೆಗೆದ ಕ್ಷಣ ಸ್ಥಳದಲ್ಲಿದ್ದ ರಕ್ಷಣಾ ಸಿಬ್ಬಂದಿ ಹಾಗೂ ಸಾರ್ವಜನಿಕರಲ್ಲಿ ಭಾವುಕತೆ ಮೂಡಿಸಿತು.

ನೇಪಾಳದ ಹಲವು ಭಾಗಗಳಲ್ಲಿ ಧಾರಾಕಾರ ಮಳೆಯಿಂದ ನದಿಗಳು ಉಕ್ಕಿ ಹರಿಯುತ್ತಿದ್ದು, ಪ್ರವಾಹ ಮತ್ತು ಭೂಕುಸಿತದಿಂದ ಜನಜೀವನ ಅಸ್ತವ್ಯಸ್ತಗೊಂಡಿದೆ. ಈ ನಡುವೆ ಎರಡು ವರ್ಷದ ಮಗು ಪವಾಡಸದೃಶವಾಗಿ ಬದುಕುಳಿದು ರಕ್ಷಿಸಲ್ಪಟ್ಟಿರುವ ದೃಶ್ಯದ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.

## ಎಸ್‌ಬಿಐ ಗ್ರಾಹಕರಿಗೆ ಶಾಕ್: ಉಚಿತ ಎಟಿಎಂ ವಹಿವಾಟು ಮಿತಿ 5ಕ್ಕೆ ಇಳಿಕೆ

SBI

● ವಿಕ್ರಮ ವಾಹಿನಿ । ನವದೆಹಲಿ

ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ (ಎಸ್‌ಬಿಐ)ನ ಸ್ಯಾಲರಿ ಖಾತೆ ಹೊಂದಿರುವ ಗ್ರಾಹಕರಿಗೆ ಎಟಿಎಂ ವಹಿವಾಟಿನ ನಿಯಮಗಳಲ್ಲಿ ಬದಲಾವಣೆಯಾಗಲಿದೆ. ಬೇರೆ ಬ್ಯಾಂಕ್‌ಗಳ ಎಟಿಎಂಗಳಲ್ಲಿ ತಿಂಗಳಿಗೆ ಉಚಿತವಾಗಿ ನಡೆಸಬಹುದಾದ ವಹಿವಾಟುಗಳ ಮಿತಿಯನ್ನು 10ರಿಂದ 5ಕ್ಕೆ ಇಳಿಸಲಾಗಿದ್ದು, ಹೊಸ ನಿಯಮ ಅಕ್ಟೋಬರ್ 1ರಿಂದ ಜಾರಿಗೆ ಬರಲಿದೆ.

ಇದರಂತೆ ಎಸ್‌ಬಿಐ ಸ್ಯಾಲರಿ ಖಾತೆದಾರರು ಇತರ ಬ್ಯಾಂಕ್‌ಗಳ ಎಟಿಎಂಗಳಲ್ಲಿ ತಿಂಗಳಿಗೆ ಗರಿಷ್ಠ ಐದು ವಹಿವಾಟುಗಳನ್ನು ಉಚಿತವಾಗಿ ಮಾಡಬಹುದು. ಹಣ ಹಿಂಪಡೆಯುವುದು, ಬ್ಯಾಲೆನ್ಸ್ ಪರಿಶೀಲನೆ ಸೇರಿದಂತೆ ಹಣಕಾಸು ಮತ್ತು ಹಣಕಾಸೇತರ ವಹಿವಾಟುಗಳು ಈ ಮಿತಿಯಲ್ಲಿ ಒಳಗೊಂಡಿರುತ್ತವೆ. ಐದಕ್ಕಿಂತ ಹೆಚ್ಚಿನ ವಹಿವಾಟು ನಡೆಸಿದರೆ ಹೆಚ್ಚುವರಿ ಶುಲ್ಕ ಪಾವತಿಸಬೇಕಾಗುತ್ತದೆ.

ಉಚಿತ ಮಿತಿ ಮೀರಿದ ಬಳಿಕ ಇತರ ಬ್ಯಾಂಕ್‌ಗಳ ಎಟಿಎಂಗಳಲ್ಲಿ ಹಣ ಹಿಂಪಡೆಯುವ ಪ್ರತಿ ಹೆಚ್ಚುವರಿ ವಹಿವಾಟಿಗೆ 23 ಶುಲ್ಕ ವಿಧಿಸಲಾಗುತ್ತದೆ. ಇದಕ್ಕೆ ಜಿಎಸ್‌ಟಿ ಹೆಚ್ಚುವರಿಯಾಗಿ ಅನ್ವಯವಾಗಲಿದೆ. ಬ್ಯಾಲೆನ್ಸ್ ಪರಿಶೀಲನೆ ಸೇರಿದಂತೆ ಹಣಕಾಸೇತರ ವಹಿವಾಟುಗಳಿಗೆ 11 ಮತ್ತು ಜಿಎಸ್‌ಟಿ ಶುಲ್ಕ ವಿಧಿಸಲಾಗುತ್ತದೆ.

ಎಟಿಎಂನಲ್ಲಿ ಹಿಂಪಡೆಯುವ ಹಣದ ಮೊತ್ತಕ್ಕೆ ಅನುಗುಣವಾಗಿ ಈ ಶುಲ್ಕ ಬದಲಾಗುವುದಿಲ್ಲ. 500 ಅಥವಾ 10,000 ಹಿಂಪಡೆದರೂ ಅನ್ವಯಿಸುವ ಶುಲ್ಕ ಒಂದೇ ಆಗಿರುತ್ತದೆ.

ಈ ಬದಲಾವಣೆ ಎಸ್‌ಬಿಐನ ಸ್ಯಾಲರಿ ಖಾತೆಗಳಿಗೆ ಮಾತ್ರ ಅನ್ವಯವಾಗಲಿದ್ದು, ಇತರ ಖಾತೆಗಳಿಗೆ ಅನ್ವಯಿಸುವ ಎಟಿಎಂ ನಿಯಮಗಳಲ್ಲಿ ಬದಲಾವಣೆ ಇರುವುದಿಲ್ಲ. ಎಸ್‌ಬಿಐನ ಸ್ವಂತ ಎಟಿಎಂಗಳಲ್ಲಿ ನಡೆಸುವ ವಹಿವಾಟುಗಳ ಉಚಿತ ಮಿತಿಯಲ್ಲೂ ಯಾವುದೇ ಬದಲಾವಣೆ ಇರುವುದಿಲ್ಲ.

ಗ್ರಾಹಕರು ಅನಗತ್ಯ ಶುಲ್ಕ ತಪ್ಪಿಸಿಕೊಳ್ಳಲು ಸಾಧ್ಯವಾದಷ್ಟು ಎಸ್‌ಬಿಐ ಎಟಿಎಂಗಳನ್ನೇ ಬಳಸುವುದು ಸೂಕ್ತವಾಗಿದೆ. ವಿಶೇಷವಾಗಿ ತಿಂಗಳ ಕೊನೆಯಲ್ಲಿ ಉಚಿತ ವಹಿವಾಟಿನ ಮಿತಿಯನ್ನು ಮೀರದಂತೆ ಎಟಿಎಂ ಬಳಕೆಯನ್ನು ಯೋಜಿಸುವುದು ಅಗತ್ಯವಾಗಲಿದೆ.

ಹಣಕಾಸೇತರ ವಹಿವಾಟುಗಳಿಗೂ ಉಚಿತ ಮಿತಿಯಲ್ಲಿ ಲೆಕ್ಕ ಹಾಕಲಾಗುವುದರಿಂದ, ಪದೇಪದೇ ಬ್ಯಾಲೆನ್ಸ್ ಪರಿಶೀಲಿಸುವ ಗ್ರಾಹಕರು ಇದನ್ನು ಗಮನದಲ್ಲಿಟ್ಟುಕೊಳ್ಳಬೇಕಾಗಿದೆ. ಅಗತ್ಯವಿದ್ದಲ್ಲಿ ಮೊಬೈಲ್ ಬ್ಯಾಂಕಿಂಗ್ ಅಥವಾ ಯುಪಿಐ ಸೇವೆಗಳ ಮೂಲಕ ಬ್ಯಾಲೆನ್ಸ್ ಪರಿಶೀಲಿಸಬಹುದಾಗಿದೆ.

ಹೊಸ ನಿಯಮ ಜಾರಿಗೆ ಬಂದ ಬಳಿಕ ಇತರ ಬ್ಯಾಂಕ್‌ಗಳ ಎಟಿಎಂಗಳ ಬಳಕೆಯನ್ನು ಕಡಿಮೆ ಮಾಡುವುದರಿಂದ ಗ್ರಾಹಕರು ಹೆಚ್ಚುವರಿ ಶುಲ್ಕದಿಂದ ತಪ್ಪಿಸಿಕೊಳ್ಳಬಹುದು. ಎಟಿಎಂ ವಹಿವಾಟಿನ ಶುಲ್ಕ ಹಾಗೂ ಮಿತಿಗಳ ಬಗ್ಗೆ ಬ್ಯಾಂಕ್ ನೀಡುವ ಅಧಿಕೃತ ಮಾಹಿತಿಯನ್ನು ಗ್ರಾಹಕರು ಪರಿಶೀಲಿಸುವುದು ಸೂಕ್ತ ಎಂದು ಬ್ಯಾಂಕಿಂಗ್ ವಲಯದ ತಜ್ಞರು ಸಲಹೆ ನೀಡಿದ್ದಾರೆ.

## ಬಿಸಿಯೂಟ ವೇಳೆ ಹೃದಯಾಘಾತ; ವಿದ್ಯಾರ್ಥಿ ಸಾವು

● ವಿಕ್ರಮ ವಾಹಿನಿ । ಮಂಡ್ಯ

ಶಾಲೆಯಲ್ಲಿ ಮಧ್ಯಾಹ್ನದ ಬಿಸಿಯೂಟ ಸೇವಿಸುತ್ತಿದ್ದ ವೇಳೆ ಹೃದಯಾಘಾತಕ್ಕೊಳಗಾಗಿ 14 ವರ್ಷದ ವಿದ್ಯಾರ್ಥಿಯೊಬ್ಬ ಮೃತಪಟ್ಟಿರುವ ದಾರುಣ ಘಟನೆ ಮದ್ದೂರು ತಾಲೂಕಿನ ಸೋಮನಹಳ್ಳಿ ಗ್ರಾಮದಲ್ಲಿ ನಡೆದಿದೆ.

ಸೋಮನಹಳ್ಳಿ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿ ವೀರಮಣಿ ಮೃತ. ಬುಧವಾರ ಮಧ್ಯಾಹ್ನ ಬಿಸಿಯೂಟ ಸೇವಿಸುತ್ತಿದ್ದ ವೇಳೆ ಏಕಾಏಕಿ ಮೂರ್ಛೆ ಬಿದ್ದು ನೆಲಕ್ಕೆ ಕುಸಿದಿದ್ದಾನೆ. ತಕ್ಷಣ ಶಿಕ್ಷಕರು ಬಾಲಕನನ್ನು ಮದ್ದೂರು ತಾಲೂಕು ಆಸ್ಪತ್ರೆಗೆ ಕರೆದೊಯ್ದಿದ್ದಾರೆ.

ಅಲ್ಲಿ ಪ್ರಾಥಮಿಕ ಚಿಕಿತ್ಸೆ ನೀಡಿದ ಬಳಿಕ ಹೆಚ್ಚಿನ ಚಿಕಿತ್ಸೆಗಾಗಿ ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ಮಿಮ್ಸ್)ಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೆ ಬಾಲಕ ಮೃತಪಟ್ಟಿದ್ದಾನೆ. ಘಟನೆಗೆ ಸಂಬಂಧಿಸಿದಂತೆ ಕುಟುಂಬಸ್ಥರು ಹಾಗೂ ಶಾಲಾ ಸಿಬ್ಬಂದಿಯಲ್ಲಿ ದುಃಖ ಮಡುಗಟ್ಟಿದೆ.

## ಫುಡ್ ಸ್ಯಾಂಪಲ್ ತಗೊಳ್ಳಿ, ಹೋಟೆಲ್ ಹೆಸರು ಹೇಳ್ಬೇಡಿ: ಮಾಲೀಕರ ಮನವಿ

● ವಿಕ್ರಮ ವಾಹಿನಿ । ಬೆಂಗಳೂರು

ನಗರದ ಸ್ಟಾರ್ ಹೋಟೆಲ್‌ಗಳ ಮೇಲೆ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ಅಧಿಕಾರಿಗಳು ದಿಢೀರ್ ದಾಳಿ ನಡೆಸಿ ಆಹಾರದ ಗುಣಮಟ್ಟ ಹಾಗೂ ನೈರ್ಮಲ್ಯ ಪರಿಶೀಲನೆ ನಡೆಸಿದರು. ಈ ವೇಳೆ ಕೆಲವು ಹೋಟೆಲ್‌ಗಳಲ್ಲಿ ಅಸ್ವಚ್ಛತೆ ಹಾಗೂ ಆಹಾರ ಸಂಗ್ರಹಣೆಯಲ್ಲಿ ಲೋಪಗಳು ಕಂಡುಬಂದಿರುವುದು ಅಧಿಕಾರಿಗಳ ಗಮನಕ್ಕೆ ಬಂದಿದೆ.

ದಾಳಿ ವೇಳೆ ಕೆಲವೆಡೆ ಪನ್ನೀರ್‌ನಲ್ಲಿ ಜಿರಳೆ, ಹಲವು ದಿನಗಳಿಂದ ಸಂಗ್ರಹಿಸಿಟ್ಟಿದ್ದ ಮಾಂಸ ಹಾಗೂ ಸಾಸ್‌ನಲ್ಲಿ ಜಿರಳೆ ಪತ್ತೆಯಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಆಹಾರ ತಯಾರಿಕೆ ಮತ್ತು ಸಂಗ್ರಹಣೆ ವೇಳೆ ಕಡ್ಡಾಯವಾಗಿ ನೈರ್ಮಲ್ಯ ಕಾಪಾಡುವಂತೆ ಹೋಟೆಲ್‌ಗಳಿಗೆ ಎಚ್ಚರಿಕೆ ನೀಡಲಾಗಿದೆ.

ಇದೇ ವೇಳೆ, ದಾಳಿ ಸಂದರ್ಭದಲ್ಲಿ ಆಹಾರದ ಮಾದರಿಗಳನ್ನು (ಸ್ಯಾಂಪಲ್) ಸಂಗ್ರಹಿಸಿಕೊಳ್ಳಿ, ಆದರೆ ಹೋಟೆಲ್‌ಗಳ ಹೆಸರುಗಳನ್ನು ಬಹಿರಂಗಪಡಿಸಬೇಡಿ ಎಂದು ಕೆಲವು ಹೋಟೆಲ್ ಮಾಲೀಕರು ಅಧಿಕಾರಿಗಳಿಗೆ ಮನವಿ ಮಾಡಿದ್ದಾರೆ. ಹೆಸರು ಬಹಿರಂಗವಾದರೆ ಗ್ರಾಹಕರ ಸಂಖ್ಯೆ ಕುಸಿಯುವುದರ ಜತೆಗೆ ಹೋಟೆಲ್‌ಗಳ ಪ್ರತಿಷ್ಠೆಗೆ ಧಕ್ಕೆಯಾಗಬಹುದು ಎಂಬ ಆತಂಕವನ್ನು ಅವರು ವ್ಯಕ್ತಪಡಿಸಿದ್ದಾರೆ.

ಶಿವಮೊಗ್ಗದಲ್ಲಿಯೂ ಫುಡ್ ಕೋರ್ಟ್‌ಗಳ ಮೇಲೆ ಪರಿಶೀಲನಾ ದಾಳಿ ನಡೆಸಲಾಗಿದ್ದು, ಆಹಾರ ತಯಾರಿಕೆ, ಸಂಗ್ರಹಣೆ ಮತ್ತು ಸ್ವಚ್ಛತೆ ಕುರಿತು ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಸಾರ್ವಜನಿಕರಿಗೆ ಸುರಕ್ಷಿತ ಹಾಗೂ ಗುಣಮಟ್ಟದ ಆಹಾರ ದೊರೆಯುವಂತೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಕೆಆರ್‌ಐಡಿಎಲ್ ಲಂಚ ಪ್ರಕರಣ ಸಿಬಿಐಗೆ ವಹಿಸಿ

● ವಿಕ್ರಮ ವಾಹಿನಿ । ಬೆಂಗಳೂರು

ಕೆಆರ್‌ಐಡಿಎಲ್‌ನಲ್ಲಿ ಶೇ.7ರಷ್ಟು ಕಮಿಷನ್ ಪಡೆಯಲಾಗುತ್ತಿದೆ ಎಂಬ ಆರೋಪದ ಹಿನ್ನೆಲೆಯಲ್ಲಿ ಸಂಬಂಧಿಸಿದ ಇಬ್ಬರು ಸಚಿವರನ್ನು ಕೂಡಲೇ ವಜಾಗೊಳಿಸಿ, ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಬೇಕು ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಆರ್.ಅಶೋಕ ರಾಜ್ಯ ಸರ್ಕಾರವನ್ನು ಆಗ್ರಹಿಸಿದರು.



ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೆಆರ್‌ಐಡಿಎಲ್‌ನಲ್ಲಿ ಹೆಚ್ಚುವರಿಯಾಗಿ ಶೇ.7ರಷ್ಟು ಹಣ ಪಡೆಯಲಾಗುತ್ತಿದೆ ಹಾಗೂ ಇದನ್ನು ಪ್ರಶ್ನಿಸುವ ಗುತ್ತಿಗೆದಾರರಿಗೆ ಬೆದರಿಕೆ ಹಾಕಲಾಗುತ್ತಿದೆ ಎಂದು ಕಾಂಗ್ರೆಸ್ ಶಾಸಕ ಅಶೋಕ್ ಕುಮಾರ್ ರೈ ಅವರೇ ಮುಖ್ಯಮಂತ್ರಿಗೆ ಪತ್ರ ಬರೆದಿದ್ದಾರೆ.

ಆಡಳಿತ ಪಕ್ಷದ ಶಾಸಕರೇ ಮಾಡಿರುವ ಈ ಆರೋಪವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು ಎಂದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಕಮಿಷನ್ ಆಡಳಿತ ನಡೆಯುತ್ತಿದೆ ಎಂಬ ಆರೋಪಗಳಿಗೆ ಇದೀಗ ಸ್ವಪಕ್ಷದ ಶಾಸಕರ ಹೇಳಿಕೆಯೇ ಸಾಕ್ಷಿಯಾಗಿದೆ. 100 ಅನುದಾನ ಬಿಡುಗಡೆಯಾದರೆ ಅದರಲ್ಲಿ ಕೇವಲ 30ರಷ್ಟು ಮೊತ್ತದ ಕೆಲಸ ಮಾತ್ರ ನಡೆಯುತ್ತಿದ್ದು, ಉಳಿದ ಹಣ ಕಮಿಷನ್‌ಗೆ ಹೋಗುತ್ತಿದೆ ಎಂದು ಆರೋಪಿಸಿದರು.

ಈ ಪ್ರಕರಣದಲ್ಲಿ ಸುಮಾರು ರೂ 800 ಕೋಟಿ ಕಮಿಷನ್ ಸಂಗ್ರಹವಾಗಿರುವ ಸಾಧ್ಯತೆಯಿದೆ. ಇಲಾಖಾ ತನಿಖೆಯ ಹೆಸರಿನಲ್ಲಿ ಪ್ರಕರಣವನ್ನು ಮುಚ್ಚಿಹಾಕದೆ ಲೋಕಾಯುಕ್ತ ಅಥವಾ ಸಿಬಿಐನಿಂದ ನಿಷ್ಪಕ್ಷಪಾತ ತನಿಖೆ ನಡೆಸಬೇಕು. ಸರ್ಕಾರಕ್ಕೆ ನೈತಿಕ ಹೊಣೆಗಾರಿಕೆ ಇದ್ದರೆ ಆರೋಪ ಎದುರಿಸುತ್ತಿರುವ ಇಬ್ಬರು ಸಚಿವರನ್ನು ವಜಾಗೊಳಿಸಬೇಕು ಎಂದು ಒತ್ತಾಯಿಸಿದರು.

ಈ ಹಿಂದೆ ಬಿ.ಆರ್. ಪಾಟೀಲ್ ವಸತಿ ಇಲಾಖೆಯ ಕಮಿಷನ್ ಕುರಿತು, ಬಸವರಾಜ ರಾಯರೆಡ್ಡಿ ಕೆಕೆಆರ್‌ಡಿಬಿ ಅಕ್ರಮಗಳ ಕುರಿತು ಪತ್ರ ಬರೆದಿದ್ದರು. ಆರ್.ಬಿ. ತಿಮ್ಮಾಪುರ ಅವರ ಇಲಾಖೆಯ ಅಕ್ರಮಗಳಿಗೆ ಸಂಬಂಧಿಸಿದಂತೆ ತಾವು ಆಡಿಯೋ ಹಾಗೂ ದಾಖಲೆಗಳನ್ನು ಸರ್ಕಾರಕ್ಕೆ ನೀಡಿದ್ದರೂ ಸೂಕ್ತ ಕ್ರಮ ಕೈಗೊಂಡಿಲ್ಲ ಎಂದು ಅಶೋಕ ದೂರಿದರು.

**ಉದ್ಯಾನಗಳ ರಕ್ಷಣೆಗೆ ಬಿಲ್ ಹಿಂಪಡೆಯಲಿ**

ಉದ್ಯಾನಗಳ ಬಳಕೆಗೆ ಸಂಬಂಧಿಸಿದ ಪ್ರಸ್ತಾವಿತ ಮಸೂದೆಯನ್ನೂ ಆರ್.ಅಶೋಕ ಟೀಕಿಸಿದರು. ಉದ್ಯಾನಗಳು ಹಾಗೂ ಸಾರ್ವಜನಿಕ ಸ್ಥಳಗಳನ್ನು ಬೇರೆ ಉದ್ದೇಶಗಳಿಗೆ ಬಳಸಲು ಅವಕಾಶ ನೀಡಿದರೆ ಮುಂದಿನ ದಿನಗಳಲ್ಲಿ ಅವುಗಳ ಒತ್ತುವರಿ ಹೆಚ್ಚಾಗಲಿದೆ. ಬೆಂಗಳೂರು ‘ಗಾರ್ಡನ್ ಸಿಟಿ’ ಎಂಬ ಹೆಗ್ಗಳಿಕೆಯನ್ನು ಕಳೆದುಕೊಂಡು ದೆಹಲಿಯ ಮಾದರಿಯಲ್ಲಿ ವಾಯುಮಾಲಿನ್ಯದ ಸಮಸ್ಯೆ ಎದುರಿಸುವ ಅಪಾಯವಿದೆ ಎಂದು ಎಚ್ಚರಿಸಿದರು.

ಉದ್ಯಾನಗಳು, ಕ್ರೀಡಾಂಗಣಗಳನ್ನು ರಕ್ಷಿಸುವುದು ಸರ್ಕಾರ ಹಾಗೂ ಪ್ರತಿಪಕ್ಷಗಳ ಜವಾಬ್ದಾರಿ. ಮಸೂದೆಯ ಕುರಿತು ಚರ್ಚೆಗೆ ಅವಕಾಶ ನೀಡುವುದಷ್ಟೇ ಸಾಕಾಗುವುದಿಲ್ಲ; ಅದನ್ನು ಸರ್ಕಾರ ಸಂಪೂರ್ಣವಾಗಿ ಹಿಂಪಡೆಯಬೇಕು ಎಂದು ಆಗ್ರಹಿಸಿದರು.


ಬಿಜೆಪಿ ನಡೆಸುತ್ತಿರುವ ಪಾದಯಾತ್ರೆಯನ್ನು ಕಾಂಗ್ರೆಸ್ ಟೀಕಿಸುತ್ತಿರುವುದಕ್ಕೂ ಪ್ರತಿಕ್ರಿಯಿಸಿದ ಅವರು, ಜನರ ಸಮಸ್ಯೆಗಳು, ಬರ ಪರಿಹಾರ ಸೇರಿದಂತೆ ವಿವಿಧ ಬೇಡಿಕೆಗಳಿಗಾಗಿ ಪಾದಯಾತ್ರೆ ನಡೆಸಲಾಗುತ್ತಿದೆ. ಇದರಲ್ಲಿ ರಾಜಕೀಯ ಉದ್ದೇಶವಿಲ್ಲ ಎಂದು ಹೇಳಿದರು.

## 4 ಮತ್ತು 5ರಂದು ಕಾಕೋಳಿನಲ್ಲಿ ಶ್ರೀಕೃಷ್ಣ ಜನ್ಮಾಷ್ಟಮಿ-ಲೀಲೋತ್ಸವ

● ವಿಕ್ರಮ ವಾಹಿನಿ । ಬೆಂಗಳೂರು

ಬೆಂಗಳೂರಿನಿಂದ ಸುಮಾರು 30 ಕಿ.ಮೀ. ದೂರದ ಯಲಹಂಕ-ದೊಡ್ಡಬಳ್ಳಾಪುರ ರಸ್ತೆಯ ರಾಜಾನುಕುಂಟೆ ಸಮೀಪದ ಕಾಕೋಳು ಶ್ರೀ ವೇಣುಗೋಪಾಲಸ್ವಾಮಿ ದೇವಸ್ಥಾನದಲ್ಲಿ ಸೆಪ್ಟೆಂಬರ್ 4 ಮತ್ತು 5ರಂದು ಶ್ರೀಕೃಷ್ಣ ಜನ್ಮಾಷ್ಟಮಿ ಹಾಗೂ ಶ್ರೀಕೃಷ್ಣ ಲೀಲೋತ್ಸವವನ್ನು ವೈಭವದಿಂದ ಆಚರಿಸಲಾಗುವುದು.

ಸೆ.4ರಂದು ಸಂಜೆ 5.00ಕ್ಕೆ ಮೂಲ ದೇವರಿಗೆ ಪಂಚಾಮೃತ ಅಭಿಷೇಕ, ನವನೀತ (ಬೆಣ್ಣೆ) ಅಲಂಕಾರ,ಸಂಜೆ 6.00ರಿಂದ ಪಾಂಚಜನ್ಯ ಸಭಾಂಗಣದ ಹರಿತಸ ವೇದಿಕೆಯಲ್ಲಿ ‘ನವನೀತಚೋರನಿಗೆ ನಾದನೀರಾಜನ’ ಕಾರ್ಯಕ್ರಮದಲ್ಲಿ ತುಮಕೂರಿನ ವಿದ್ವಾನ್ ವಿಜಯೇಂದ್ರ ಆಚಾರ್ಯ ಅವರಿಂದ ಗಾಯನ ಹಾಗೂ ವೇಣುವಾದನ ನಂತರ ನಾಮಸಂಕೀರ್ತನೆ ಹಾಗೂ ವಿಷ್ಣು ಸಹಸ್ರನಾಮ ಪಾರಾಯಣ . ರಾತ್ರಿ 11.00 ಗಂಟೆಯಿಂದ ಪೂಜ್ಯ ಶ್ರೀಗಳಿಂದ ಬಾಲಕೃಷ್ಣನಿಗೆ ತೊಟ್ಟಿಲು ಪೂಜೆ ನೆರವೇರಲಿದ್ದು, ಮಧ್ಯರಾತ್ರಿ 12.00 ಗಂಟೆಗೆ ಚಂದ್ರೋದಯದ ಸಂದರ್ಭದಲ್ಲಿ ಅರ್ಘ್ಯ ಪ್ರದಾನ ನಡೆಯಲಿದೆ.



ಸೆ.5ರಂದು ಶ್ರೀಕೃಷ್ಣ ಲೀಲೋತ್ಸವದ ಅಂಗವಾಗಿ ಶ್ರೀಮನ್ಮಧ್ವಾಚಾರ್ಯರ ಸಾಕ್ಷಾತ್ ಶಿಷ್ಯರಾದ ಚತುರ್ವೇದಭಾಷ್ಯಾಚಾರ್ಯ, ತಂಬಿಹಳ್ಳಿಯ ಶ್ರೀಮನ್ಮಾಧವತೀರ್ಥ ಮಠದ ಪೀಠಾಧಿಪತಿಗಳಾದ ಪರಮಪೂಜ್ಯ ಶ್ರೀ ವಿದ್ಯಾವಲ್ಲಭ ಮಾಧವತೀರ್ಥ ಶ್ರೀಪಾದರ ದಿವ್ಯ ಸಾನ್ನಿಧ್ಯದಲ್ಲಿ ವಿವಿಧ ಕಾರ್ಯಕ್ರಮಗಳು ನಡೆಯಲಿವೆ. ಪಾಂಚಜನ್ಯ ಪ್ರತಿಷ್ಠಾನ ಹಾಗೂ ತಿರುಮಲ ತಿರುಪತಿ ದೇವಸ್ಥಾನದ ಹಿಂದೂ ಧರ್ಮ ಪ್ರಚಾರ ಪರಿಷತ್ ಸಹಯೋಗದಲ್ಲಿ ಮಧ್ಯಾಹ್ನ 12.00 ಗಂಟೆಯಿಂದ ದಾಸ ನಮನ ವತಿಯಿಂದ ಶತಕಂಠ ಗಾಯನ, ಕೋಲಾಟ ಹಾಗೂ ನೃತ್ಯ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

ಕೃಷ್ಣಭಕ್ತಿಯ ಕಲಾತ್ಮಕ ಲೋಕ

ಕಾಕೋಳು ಕ್ಷೇತ್ರವು ಧಾರ್ಮಿಕ, ಪೌರಾಣಿಕ ಹಾಗೂ ಸಾಂಸ್ಕೃತಿಕ ಹಿನ್ನೆಲೆಯಿಂದ ವಿಶಿಷ್ಟವಾಗಿದೆ. ದೇವಾಲಯದ ಪರಿಸರದಲ್ಲಿ ಬೃಂದಾವನದ ಕೃಷ್ಣಲೀಲೆಯನ್ನು ನೆನಪಿಸುವ ಕಲಾತ್ಮಕ ಚಿತ್ರಗಳು ಭಕ್ತರ ಗಮನ ಸೆಳೆಯುತ್ತವೆ. ವೇಣುಗೋಪಾಲನ ದಿವ್ಯ ಸ್ವರೂಪದೊಂದಿಗೆ ವೇದವ್ಯಾಸರು, ಆಚಾರ್ಯ ಮಧ್ವರು, ಶ್ರೀಪಾದರಾಜರು, ಕನಕದಾಸರು ಹಾಗೂ ಪುರಂದರದಾಸರ ಸಾನ್ನಿಧ್ಯವನ್ನು ಕಲಾತ್ಮಕವಾಗಿ ಮೂಡಿಸಲಾಗಿದೆ. ದೇವಾಲಯ ಪ್ರವೇಶಿಸಿದಾಗ ವ್ಯಾಸರಾಜರು ಪ್ರತಿಷ್ಠಾಪಿಸಿರುವ 732 ಹನುಮಂತ ವಿಗ್ರಹಗಳಲ್ಲಿ ಒಂದೆಂದು ಪರಿಗಣಿಸಲ್ಪಡುವ ಕಂಬದ ಆಂಜನೇಯಸ್ವಾಮಿಯ ದರ್ಶನವೂ ದೊರೆಯುತ್ತದೆ.

ಶ್ರೀಕೃಷ್ಣ ಜನ್ಮಾಷ್ಟಮಿ ಹಾಗೂ ಲೀಲೋತ್ಸವದಲ್ಲಿ ಭಗದ್ಭಕ್ತರು ತನು-ಮನ-ಧನ ಸಹಕಾರದೊಂದಿಗೆ ಭಾಗವಹಿಸಿ ಶ್ರೀ ವೇಣುಗೋಪಾಲಸ್ವಾಮಿಯ ಕೃಪೆಗೆ ಪಾತ್ರರಾಗಬೇಕೆಂದು ದೇವಸ್ಥಾನ ಟ್ರಸ್ಟ್ ಮನವಿ ಮಾಡಿದೆ.

# ದೇಶಾದ್ಯಂತ ಭಾರಿ ಮಳೆ; ಉತ್ತರಾಖಂಡ, ಹಿಮಾಚಲಕ್ಕೆ ಪ್ರವಾಹದ ಎಚ್ಚರಿಕೆ

● ವಿಕ್ರಮ ವಾಹಿನಿ । ನವದೆಹಲಿ


ದೇಶದ ಹಲವು ಭಾಗಗಳಲ್ಲಿ ಮುಂದಿನ ದಿನಗಳಲ್ಲಿ ಮಳೆ ಚುರುಕುಗೊಳ್ಳುವ ಸಾಧ್ಯತೆಯಿದ್ದು, ಉತ್ತರಾಖಂಡ ಮತ್ತು ಹಿಮಾಚಲ ಪ್ರದೇಶದಲ್ಲಿ ಹಠಾತ್ ಪ್ರವಾಹದ ಅಪಾಯವಿದೆ ಎಂದು ಭಾರತೀಯ ಹವಾಮಾನ ಇಲಾಖೆ (ಐಎಂಡಿ) ಎಚ್ಚರಿಕೆ ನೀಡಿದೆ.

ಉತ್ತರಾಖಂಡದಲ್ಲಿ ಸೆಪ್ಟೆಂಬರ್ 2ರಿಂದ 8ರವರೆಗೆ ವ್ಯಾಪಕ ಮಳೆಯಾಗುವ ನಿರೀಕ್ಷೆಯಿದ್ದು, ಸೆಪ್ಟೆಂಬರ್ 2ರಂದು ಕೆಲವೆಡೆ ಅತಿ ಭಾರಿ ಮಳೆಯಾಗುವ ಸಾಧ್ಯತೆಯಿದೆ. ಹಿಮಾಚಲ ಪ್ರದೇಶದಲ್ಲಿ ಸೆಪ್ಟೆಂಬರ್ 2 ಮತ್ತು 3ರಂದು ಭಾರಿ ಮಳೆಯಾಗುವ ಮುನ್ಸೂಚನೆ ನೀಡಲಾಗಿದೆ. ಸೆಪ್ಟೆಂಬರ್ 3ರವರೆಗೆ ಎರಡೂ ರಾಜ್ಯಗಳ ಕೆಲವು ಜಲಾನಯನ ಪ್ರದೇಶಗಳಲ್ಲಿ ಹಠಾತ್ ಪ್ರವಾಹದ ಅಪಾಯವಿದೆ. ಉತ್ತರಾಖಂಡದ ಅಲ್ಮೋರಾ, ಬಾಗೇಶ್ವರ್, ಚಮೋಲಿ, ಚಂಪಾವತ್, ಡೆಹ್ರಾಡೂನ್, ಪೌರಿ ಗರ್ವಾಲ್, ತೆಹ್ರಿ ಗರ್ವಾಲ್, ನೈನಿತಾಲ್, ಪಿಥೋರಗಢ ಮತ್ತು ಉತ್ತರಕಾಶಿ ಜಿಲ್ಲೆಗಳಲ್ಲಿ ಪ್ರವಾಹದ ಸಾಧ್ಯತೆ ಇದೆ. ಹಿಮಾಚಲ ಪ್ರದೇಶದ ಸಿರ್ಮೌರ್, ಶಿಮ್ಲಾ, ಮಂಡಿ, ಕುಲ್ಲು, ಕಾಂಗ್ರಾ ಮತ್ತು ಚಂಬಾ ಜಿಲ್ಲೆಗಳಿಗೂ ಮುನ್ನೆಚ್ಚರಿಕೆ ನೀಡಲಾಗಿದೆ. ತಗ್ಗು ಪ್ರದೇಶಗಳಲ್ಲಿ ನೀರು ಹರಿದು ಪ್ರವಾಹ ಉಂಟಾಗುವ ಸಾಧ್ಯತೆಯಿದೆ.

**ದಕ್ಷಿಣ ಭಾರತದಲ್ಲೂ ಮಳೆ**

ಕೇರಳ ಮತ್ತು ಮಾಹೆಯಲ್ಲಿ ವ್ಯಾಪಕ ಮಳೆಯಾಗುವ ಸಾಧ್ಯತೆಯಿದ್ದು, ಕರ್ನಾಟಕ, ಆಂಧ್ರಪ್ರದೇಶ, ರಾಯಲಸೀಮಾ, ತಮಿಳುನಾಡು, ತೆಲಂಗಾಣ ಹಾಗೂ ಪುದುಚೇರಿಯಲ್ಲಿ ಚದುರಿದ ಮಳೆಯಾಗುವ ಮುನ್ಸೂಚನೆ ಇದೆ. ಕೆಲವು ಭಾಗಗಳಲ್ಲಿ ಗುಡುಗು, ಮಿಂಚಿನೊಂದಿಗೆ ಗಂಟೆಗೆ 60 ಕಿ.ಮೀ ವೇಗದ ಗಾಳಿ ಬೀಸುವ ಸಾಧ್ಯತೆಯಿದೆ ಎಂದು ಐಎಂಡಿ ತಿಳಿಸಿದೆ.

**ಮಧ್ಯ, ಉತ್ತರ ಭಾರತದಲ್ಲೂ ಮಳೆ**



ಪಶ್ಚಿಮ ಬಂಗಾಳದ ಗಂಗಾ ತೀರ ಮತ್ತು ಜಾರ್ಖಂಡ್ ಭಾಗದಲ್ಲಿ ಉಂಟಾಗಿರುವ ಕಡಿಮೆ ಒತ್ತಡದ ಪರಿಣಾಮ ಜಾರ್ಖಂಡ್, ದಕ್ಷಿಣ ಉತ್ತರ ಪ್ರದೇಶ ಹಾಗೂ ಉತ್ತರ ಮಧ್ಯಪ್ರದೇಶದತ್ತ ಮಳೆ ಚಲಿಸುವ ಸಾಧ್ಯತೆಯಿದೆ. ಮಧ್ಯ, ಉತ್ತರ ಮತ್ತು ಪೂರ್ವ ಭಾರತದಲ್ಲಿ ಮುಂದಿನ ಕೆಲವು ದಿನಗಳಲ್ಲಿ ವ್ಯಾಪಕ ಮಳೆಯಾಗುವ ಮುನ್ಸೂಚನೆ ಇದೆ. ಪಶ್ಚಿಮ ಮಧ್ಯಪ್ರದೇಶದಲ್ಲಿ ಸೆಪ್ಟೆಂಬರ್ 2ರಿಂದ 8ರವರೆಗೆ, ಪೂರ್ವ ಮಧ್ಯಪ್ರದೇಶ ಮತ್ತು ವಿದರ್ಭದಲ್ಲಿ ಸೆಪ್ಟೆಂಬರ್ 2ರಿಂದ 5ರವರೆಗೆ ಮಳೆಯಾಗುವ ಸಾಧ್ಯತೆಯಿದೆ. ಛತ್ತೀಸ್‌ಗಢದಲ್ಲೂ ಸೆಪ್ಟೆಂಬರ್ 2ರಿಂದ 4ರವರೆಗೆ ಮಳೆಯಾಗುವ ನಿರೀಕ್ಷೆಯಿದೆ.

**ದೆಹಲಿ, ಹರಿಯಾಣಕ್ಕೂ ಮಳೆ:** ಸೆಪ್ಟೆಂಬರ್ 2ರಂದು ದೆಹಲಿ ಮತ್ತು ಹರಿಯಾಣದಲ್ಲಿ ಮಳೆಯಾಗುವ ಸಾಧ್ಯತೆಯಿದ್ದು, ಸೆಪ್ಟೆಂಬರ್ 3 ಮತ್ತು 4ರಿಂದ ಹರಿಯಾಣ ಹಾಗೂ ಚಂಡೀಗಢದಲ್ಲಿ ವ್ಯಾಪಕ ಮಳೆಯಾಗುವ ನಿರೀಕ್ಷೆಯಿದೆ. ಪಶ್ಚಿಮ ಬಂಗಾಳ, ಸಿಕ್ಕಿಂ, ಬಿಹಾರ, ಜಾರ್ಖಂಡ್ ಮತ್ತು ಒಡಿಶಾದಲ್ಲೂ ಮಳೆಯಾಗಲಿದ್ದು, ಕೆಲವೆಡೆ ಭಾರಿ ಮಳೆಯಾಗುವ ಸಾಧ್ಯತೆಯಿದೆ. ಅಂಡಮಾನ್-ನಿಕೋಬಾರ್ ಮತ್ತು ಒಡಿಶಾದಲ್ಲಿ ಗುಡುಗು, ಮಿಂಚಿನೊಂದಿಗೆ ಗಂಟೆಗೆ 40ರಿಂದ 50 ಕಿ.ಮೀ ವೇಗದ ಗಾಳಿ ಬೀಸುವ ಸಾಧ್ಯತೆಯಿದೆ.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481 vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 154,